ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 64
22-8-2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 64

## ಮೈಕ್ರೋ ಫೈನಾನ್ಸ್ ಕಿರುಕುಳ : ಮಹಿಳೆ ಆತ್ಮಹತ್ಯೆ

**ದಾವಣಗೆರೆ:** ಮೈಕ್ರೋ ಫೈನಾನ್ಸ್ ಸಿಬ್ಬಂದಿಯ ಕಿರುಕುಳಕ್ಕೆ ಬೇಸತ್ತ 32 ವರ್ಷದ ಮಹಿಳೆಯೊಬ್ಬರು ಹಳೆ ಕುಂದುವಾಡ ಗ್ರಾಮದಲ್ಲಿ ಆತ್ಮಹತ್ಯೆ ಮಾಡಿ ಕೊಂಡಿದ್ದಾರೆ. ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿದ್ದರೂ ಕಿರುಕುಳ ಮುಂದುವರೆದಿದೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.



ಮೃತರನ್ನು ಮಹಾದೇವಿ ಎಂ. ಎಂದು ಗುರುತಿಸಲಾಗಿದೆ. ಇವರು ಮತ್ತು ಇವರ ಪತಿ ವಿವಿಧ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಸುಮಾರು 3 ಲಕ್ಷ ರೂಪಾಯಿ ಸಾಲ ಪಡೆದಿದ್ದರು. ಅವರ ಪತಿ ಟೆಂಪೋ ಚಾಲನೆ ಮಾಡಿ ಮತ್ತು ಮಹಾದೇವಿ ಮನೆ ಕೆಲಸ ಮಾಡಿ ಜೀವನ ನಡೆಸುತ್ತಿದ್ದರು.

ಈ ತಿಂಗಳ ಕಂತು ಕಟ್ಟಲು 15 ದಿನ ತಡವಾಗಿದ್ದಕ್ಕೆ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಮಹಾದೇವಿ ಅವರ ಮನೆಗೆ ಬಂದು ಅಮಾನವೀಯವಾಗಿ ನಿಂದಿಸಿದ್ದಾರೆ. ಇದರಿಂದ ಮನನೊಂದ ಮಹಾದೇವಿ, ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೈಕ್ರೋ ಫೈನಾನ್ಸ್ ಸಿಬ್ಬಂದಿ ವಿರುದ್ಧ ಕಠಿಣ ಕ್ರಮಕ್ಕೆ ಮೃತಳ ಕುಟುಂಬಸ್ಥರು ಆಗ್ರಹಿಸಿದ್ದಾರೆ.

# ಕೊಳವೆ ಬಾವಿ ನೀರಿಗೆ ಟೆಲಿಮೆಟ್ರಿ ಅಳವಡಿಕೆ, ಟ್ಯಾಂಕರ್‌ಗಳಿಗೆ ಶುಲ್ಕ ವಿಧಿಸುವ ಕರ್ನಾಟಕ ಅಂತರ್ಜಲ ಕಾಯ್ದೆಗೆ ಅನುಮೋದನೆ

**ಬೆಂಗಳೂರು :** ಕೊಳವೆ ಬಾವಿಗಳ ನೀರಿಗೆ ಡಿಜಿಟಲ್ ಟೆಲಿಮೆಟ್ರಿ ಅಳವಡಿಕೆ, ವಾಣಿಜ್ಯ, ಕೈಗಾರಿಕೆ, ಗಣಿಗಾರಿಕೆ, ಮೂಲಸೌಕರ್ಯ ಅಭಿವೃದ್ಧಿಗೆ ಬಳಸುವ ಕೊಳವೆಬಾವಿ ನೀರಿಗೆ ಮತ್ತು ಟ್ಯಾಂಕರ್‌ಗಳಿಗೆ ಶುಲ್ಕ ವಿಧಿಸುವ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ನಿರ್ವಹಣೆಯ ನಿಯಮ ಹಾಗೂ ನಿಯಂತ್ರಣ) ಕಾಯ್ದೆ 2025ಕ್ಕೆ ವಿಧಾನ ಪರಿಷತ್‌ನಲ್ಲಿ ಅಂಗೀಕಾರ ದೊರೆಯಿತು.

ವಿಧಾನಸಭೆಯಲ್ಲಿ ಅಂಗೀಕೃತವಾಗಿದ್ದ ವಿಧೇಯಕವನ್ನು ಸಣ್ಣ ನೀರಾವರಿ ಸಚಿವ ಬೋಸ್‌ರಾಜ್ ಅವರು ಮಂಡನೆ ಮಾಡಿದರು.

ವಿಧೇಯಕದ ಮೇಲೆ ಮಾತನಾಡಿದ ಭೋಸರಾಜ್ ಅವರು, ಕೇಂದ್ರ ಸರ್ಕಾರದ ಕಾಯ್ದೆ ಇದು. 15 ರಾಜ್ಯಗಳು ಈಗಾಗಲೇ ಈ ಕಾಯ್ದೆ ಅನುಷ್ಠಾನ ಮಾಡಿವೆ. ಅಂತರ್ಜಲ ಅಭಿವೃದ್ಧಿಗೆ ಈ ವಿಧೇಯಕ ಸಹಕಾರಿಯಾಗಲಿದೆ. ಬೋರ್‌ವೆಲ್ ಕೊರೆಯಲು ಅನುಮತಿ ಪಡೆಯುವುದು ಈ ವಿಧೇಯಕದ ಪ್ರಮುಖ ಅಂಶವಾಗಿದೆ ಎಂದರು.

ವಿಧಾನಸಭೆಯಲ್ಲಿ ಈ ವಿಧೇಯಕ ಸರ್ವಾನುಮತದಿಂದ ಅಂಗೀಕಾರವಾಗಿದೆ. ಪರಿಷತ್‌ನಲ್ಲೂ ಕೂಡ ಎಲ್ಲರೂ ಒಪ್ಪಿಗೆ ಕೊಡಬೇಕು ಎಂದು ಮನವಿ ಮಾಡಿದರು.



ವಿಧೇಯಕದ ಮೇಲೆ ಸದಸ್ಯರಾದ ಐವಾನ್ ಡಿಸೋಜಾ, ಪಿ.ಎಚ್.ಪೂಜಾರ್, ಡಿ.ಎಸ್.ಅರುಣ್, ಗೋವಿಂದರಾಜು, ಟಿ.ಎ.ಶರವಣ, ಮಂಜೇಗೌಡ, ಭಾರತಿ ಶೆಟ್ಟಿ, ಡಿ.ಟಿ.ಶ್ರೀನಿವಾಸ್, ಉಮಾಶ್ರೀ , ಬಲ್ಕಿಶ್ ಬಾನು, ಹೇಮಲತಾ ನಾಯಕ್, ರವಿಕುಮಾರ್ ಮತ್ತಿತರರು ಮಾತನಾಡಿದರು.

ಕಾಂಗ್ರೆಸ್‌ನ ಐವಾನ್ ಡಿಸೋಜಾ ಮಾತನಾಡಿ, ಅಪಾರ್ಟ್‌ಂಟ್‌ನಲ್ಲಿ ನೀರಿನಲ್ಲಿ ವಿಚಾರವಾಗಿ ದೊಡ್ಡ ದಂಧೆ ನಡೆಯುತ್ತಿದೆ. ಅಪಾರ್ಟ್‌ಂಟ್ ನಲ್ಲಿ ಬೋರ್‌ವೆಲ್ ಕೊರೆಸುವುದಕ್ಕೆ ಷರತ್ತುಗಳನ್ನು ವಿಧಿಸುವುದು ಸರಿಯಲ್ಲ. ಅಪಾರ್ಟ್‌ಮೆಂಟ್‌ನಲ್ಲಿ ಸಾಕಷ್ಟು ಮನೆಗಳಿರುತ್ತವೆ?. ಹೀಗಾಗಿ ಅಪಾರ್ಟ್‌ಂಟ್‌ಗೆ ವಿಧೇಯಕದಲ್ಲಿರುವ ಇರುವ ನಿಯಮ ಸರಿ ಮಾಡಬೇಕು. ಅಂತರ್ಜಲವೃದ್ಧಿಗೆ ಈ ವಿಧೇಯಕ ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಜೆಡಿಎಸ್‌ನ ಗೋವಿಂದರಾಜು ಮಾತನಾಡಿ, ಮಳೆ ನೀರು ಕೊಯ್ಲು ಪದ್ಧತಿ ಮನೆಗಳಿಗೆ ಕಡ್ಡಾಯ ಮಾಡಿರೋದು ಸರಿ ಇದೆ. ಅಂತರ್ಜಲ ಹೆಚ್ಚಳಕ್ಕೆ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು. ಮಳೆ ನೀರು ವ್ಯರ್ಥವಾಗದಂತೆ ನೋಡಿಕೊಳ್ಳಬೇಕು. ಸರ್ಕಾರವೇ ಸರಿಯಾಗಿ ನೀರು ಕೊಟ್ಟರೇ ಜನ ಯಾರೂ ಬೋರ್‌ವೆಲ್ ಕೊರೆಸಲು ಹೋಗುವುದಿಲ್ಲ. ಟ್ಯಾಂಕರ್‌ನಲ್ಲಿ ನೀರು ಸರಬರಾಜು ಮಾಡಲು ಅನುಮತಿ ಪಡೆಯಬೇಕು ಎಂಬುದು ಸರಿಯಲ್ಲ. ಸರ್ಕಾರ ಈ ನಿಯಮವನ್ನು ಬದಲಾವಣೆ ಮಾಡಬೇಕು ಎಂದು ಒತ್ತಾಯ ಮಾಡಿದರು.

ಬಿಜೆಪಿ ಸದಸ್ಯ ಡಿ.ಎಸ್. ಅರುಣ್ ಮಾತನಾಡಿ, ಬೆಂಗಳೂರಿನವರು ನೀರು, ಗಾಳಿ ದುಡ್ಡು ಕೊಟ್ಟು ಕೊಂಡು ಕೊಳ್ಳುತ್ತಾರೆ. ಆದರೆ ಗ್ರಾಮೀಣ ಭಾಗದಲ್ಲಿ ಇದು ಸಾಧ್ಯವಿಲ್ಲ. ರವಿಶಂಕರ್ ಗುರೂಜಿ, ಸದ್ಗುರು ಜಗ್ಗಿ ವಾಸುದೇವ, ಧರ್ಮಸ್ಥಳದ ಧರ್ಮಾಧಿಕಾರಿಗಳು ಅಂತರ್ಜಲ ವೃದ್ಧಿಗೆ ಹಲವು ಕಾರ್ಯಕ್ರಮ ಮಾಡಿದ್ದಾರೆ. ಜನರಿಗೆ ನೀರು ಸಿಗುವ ಪ್ರಯತ್ನವನ್ನು ಮಾಡಬೇಕು. ಜೊತೆಗೆ ಕಾಯ್ದೆಯ ನಿಯಮಗಳನ್ನು ಸರಳೀಕೃತ ಮಾಡಬೇಕು ಎಂದು ಮನವಿ ಮಾಡಿದರು.

ವಿಧೇಯಕದ ಹಿನ್ನೆಲೆ: ಈ ಮೊದಲು ಇದುವರೆಗೆ ಅಂತರ್ಜಲ ಬಳಸಲು ನಿರಾಕ್ಷೇಪಣಾ ಪತ್ರ (ಎನ್‌ಒಸಿ) ಪಡೆದರೆ ಸಾಕಿತ್ತು. ಬಳಕೆ ಶುಲ್ಕ ಇರಲಿಲ್ಲ ಮತ್ತು ಟ್ಯಾಂಕರ್ ನೀರು ಸರಬರಾಜಿಗೆ ಪರವಾನಗಿ ಅಗತ್ಯವೂ ಇರಲಿಲ್ಲ. ಯಾರು ಎಷ್ಟು ಅಂತರ್ಜಲವನ್ನು ಹೊರತೆಗೆದು ಬಳಸುತ್ತಿದ್ದಾರೆ ಎನ್ನುವವರೆಗೂ ಮಾಹಿತಿ ಲಭ್ಯರಲಿಲ್ಲ. ಆದರೆ, ಹೊಸ ಧೇಯಕದ ಅನ್ವಯ, ಕೊಳವೆಬಾಗಳಿಗೆ ಡಿಜಿಟಲ್ ಟೆಲಿಮೆಟ್ರಿ ಮೂಲಕ ನೀರಿನ ಪ್ರಮಾಣವನ್ನು ಅಳೆಯಲಾಗುತ್ತದೆ.

ಗೃಹೋಪಯೋಗಿ ಮತ್ತು ಕೃಷಿ ಕೆಲಸಗಳಿಗೆ ಕೊಳವೆಬಾಗಳ ನೀರು ಬಳಸುವುದಕ್ಕೆ ಮತ್ತು ಇನ್ನಿತರ ಕೆಲವು ಉದ್ದೇಶಗಳಿಗೆ ನೀರು ಬಳಸಲು ಯಾವುದೇ ಶುಲ್ಕ ತೆರಬೇಕಿಲ್ಲ. ಆದರೆ, ವಾಣಿಜ್ಯ, ಕೈಗಾರಿಕೆ, ಗಣಿಗಾರಿಕೆ, ಮೂಲಸೌಕರ್ಯ ಅಭಿವೃದ್ಧಿಗೆ ಬಳಸುವ ಅಂತರ್ಜಲಕ್ಕೆ ಮತ್ತು ನೀರು ಪೂರೈಸುವ ಟ್ಯಾಂಕರ್‌ಗಳಿಗೆ ಶುಲ್ಕ ವಿಧಿಸಲು ತೀರ್ಮಾನಿಸಲಾಗಿದೆ. ಕಾಲಕಾಲಕ್ಕೆ ಹೊರಡಿಸುವ ಪರಿಷ್ಕೃತ ಮಾರ್ಗಸೂಚಿಗಳಂತೆ ಅಂತರ್ಜಲ ತೆಗೆಯಲು ಟ್ಯಾಂಕರ್‌ನವರು ಎನ್‌ಒಸಿ ಪಡೆಯಬೇಕಾಗುತ್ತದೆ. ಕೈಗಾರಿಕೆಗಳಿಗೂ ಟ್ಯಾಂಕರ್ ನೀರು: ಟ್ಯಾಂಕರ್ ನೀರನ್ನು ಗೃಹ ಬಳಕೆ ಮತ್ತು ಕುಡಿಯುವುದಕ್ಕೆ ಮಾತ್ರ ಬಳಸಬಹುದಾಗಿದೆ ಎಂಬುದು ವಿಧೇಯಕದಲ್ಲಿದೆ.

## ಆ.23 ರಂದು ವಕೀಲರ ಸಂಘದ ಚುನಾವಣೆ

**ದಾವಣಗೆರೆ:** ದಾವಣಗೆರೆ ವಕೀಲರ ಸಂಘದ 2025-26 ಮತ್ತು 2026-27 ನೇ ಸಾಲಿನ ದೈ-ವಾರ್ಷಿಕ ಸಾಲಿಗೆ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿ, ಸಹ-ಕಾರ್ಯದರ್ಶಿ ಸ್ಥಾನಕ್ಕೆ ಚುನಾವಣೆಯು ಆ. 23ರಂದು ನಿಗದಿಯಾಗಿದ್ದು, ಅಂದು ಬೆಳಿಗ್ಗೆ 11-30 ರಿಂದ ಸಂಜೆ 5-30 ರವರೆಗೆ ಮತದಾನನ ನಡೆಯಲಿದೆ.

ಅದೇ ದಿನ ಸಂಜೆ 6-30 ರಿಂದ ಮತ ಎಣಿಕೆ ಪ್ರಾರಂಭಗೊಂಡು, ಅಂದೇ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ. ಮತದಾರರು ಸಂಘ ನೀಡಿದ (ಎಲ್‌ಎಡಿ) ಗುರುತಿನ ಚೀಟಿ ಅಥವಾ ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್‌ನಿಂದ ನೀಡಿದ ಗುರುತಿನ ಚೀಟಿ, ಆಧಾರ್ ಕಾರ್ಡ್ ಅಥವಾ ಭಾರತ ಸರ್ಕಾರದ ಚುನಾವಣಾ ಗುರುತಿನ ಚೀಟಿ ಅಥವಾ ಡ್ರೈವಿಂಗ್ ಲೈಸೆನ್ಸ್ ಪ್ರತಿಯನ್ನು ಕಡ್ಡಾಯವಾಗಿ ತರುವಂತೆ ಮುಖ್ಯ ಚುನಾವಣಾಧಿಕಾರಿ ಎಲ್. ದಯಾನಂದ ತಿಳಿಸಿದ್ದಾರೆ.

# ಚತುಷ್ಪಥ ರಸ್ತೆಗೆ ಅಭಿವೃದ್ಧಿಗೆ ಹಣ ಬಿಡುಗಡೆ ಸಚಿವ ನಿತಿನ್ ಗಡ್ಕರಿಗೆ ಮನವಿ

**ಹೊನ್ನಾಳಿ :** ಮರಿಯಮ್ಮನಹಳ್ಳಿಯಿಂದ ಹರಿಹರ, ಹೊನ್ನಾಳಿ, ಶಿವಮೊಗ್ಗ ಹಾಗೂ ಬಾಳೆಹೊನ್ನೂರು ರಾಜ್ಯ ಹೆದ್ದಾರಿಯನ್ನು ಮೇಲ್ದರ್ಜೆಗೇರಿಸಿ ಕೂಡಲೇ ಚತುಷ್ಪಥ ರಸ್ತೆಗೆ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡುವಂತೆ ಕೇಂದ್ರ ರಸ್ತೆ ಸಾರಿಗೆ ಹಾಗೂ ರಾಷ್ಟ್ರೀಯ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹೇಳಿದರು.

ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ ಅವರೊಂದಿಗೆ ಕೇಂದ್ರ ಸಚವರನ್ನು ಬೇಟಿ ಮನವಿ ಸಲ್ಲಿಸಿದ ನಂತರ ದೂರವಾಣಿ ಮುಖಾಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಈ ಹಿಂದೆ 2020 ರಲ್ಲಿ



ಕೇಂದ್ರ ಸಚಿವರನ್ನು ಭೇಟಿ ಮಾಡಿ ಮನವಿ ಮಾಡಿದ್ದೆ, ಈಗಲೂ ಸಹ ಮನವಿ ಮಾಡಿದ್ದೇನೆ, ಅದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ, ಇದಕ್ಕೆ ಪೂರಕವಾಗಿ ಸಚಿವರ ಕಚೇರಿಯಿಂದ ಪತ್ರ ಕೂಡ ಬಂದಿತ್ತು ಎಂದು ತಿಳಿಸಿದರು. ಮತ್ತು ಹೊನ್ನಾಳಿ ತಾಲೂಕಿನ ತುಂಗಭದ್ರಾ ನದಿಗೆ 75 ಕೋಟಿ ವೆಚ್ಚದಲ್ಲಿ ರಾಂಪುರ ಗೋವಿನಕೋವಿ ಸೇತುವೆ ನಿರ್ಮಾಣಕ್ಕೆ ಹಿಂದೆ ಮನವಿ ಸಲ್ಲಿಸಿದ್ದೆ, ಈಗ ಮತ್ತೊಮ್ಮೆ ಮನವಿ ಸಲ್ಲಿಸಿದ್ದೇನೆ, ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಕೇಂದ್ರಕ್ಕೆ ಶಿಫಾರಸ್ಸು ಮಾಡಿ ಮನವಿ ಸಲ್ಲಿಸಲಾಗಿತ್ತು.

ಈ ಸಮಯದಲ್ಲಿ ರಾಂಪುರ ಹಾಗೂ ಗೋವಿನಕೋವಿ ನಡುವೆ ಸೇತುವೆ ನಿರ್ಮಾಣ ಆದರೆ ಶಿವಮೊಗ್ಗ, ಚನ್ನಗಿರಿ ಹಾಗೂ ಹೊನ್ನಾಳಿ ತಾಲೂಕಿನ ಜನತೆಗೆ ಅನುಕೂಲವಾಗುತ್ತೆ ಎಂಉದ ಅವರಿಗೆ ಮನವರಿಕೆ ಮಾಡಿಕೊಟ್ಟೆ.

ಈ ಬಗ್ಗೆ ಸೂದೀರ್ಘವಾಗಿ ಆಲಿಸಿ ಶೀಘ್ರ ಹಣ ಬಿಡುಗಡೆ ಮಾಡುವುದಾಗಿ ಸಚಿವರು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಬಸವರಾಜ್‌ನಾಯ್ಕ್, ಮುಖಂಡರುಗಳಾದ ಮಾಡಳ್ ಮಲ್ಲಿಕಾರ್ಜುನ್, ಬಿ.ಜಿ.ಅಜೆಯ್‌ಕುಮಾರ್. ಸೋಮೇಶ್ವರ ಸುರೇಶ್, ಚಂದ್ರಶೇಖರ್‌ಪೂಜಾರ್, ಕಲ್ಲೇಶ್, ಡಿ.ಎಸ್.ಶಿವಶಂಕರ್. ಹಾಗೂ ಇತರರು ಉಪಸ್ಥಿತರಿದ್ದರು.

# ಧರ್ಮಸ್ಥಳ ವಿರುದ್ಧ ಷಡ್ಯಂತ್ರಕ್ಕೆ ಸಿಡಿದೆದ್ದ ಭಕ್ತರು

**ದಾವಣಗೆರೆ:** ಧರ್ಮಸ್ಥಳ ಕ್ಷೇತ್ರದ ವಿರುದ್ಧದ ಷಡ್ಯಂತ್ರ ಖಂಡಿಸಿ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ನಗರದ ಜಯದೇವ ವೃತ್ತದಿಂದ ಉಪ ವಿಭಾಗಾಧಿಕಾರಿಗಳ ಕಚೇರಿವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ, ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.



ಧರ್ಮಸ್ಥಳ ಹಾಗೂ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಅವರ ಕುಟುಂಬದ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಸಮೀರ್, ಟಿ. ಜಯಂತ್ ಅವರನ್ನು ಬಂಧಿಸಿ, ಬಿಗಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಭಕ್ತರು ಒತ್ತಾಯಿಸಿದರು.

ಯಾವ ಸರ್ಕಾರಗಳು ಮಾಡದಂತಹ ಕಾರ್ಯಗಳನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಮೂಲಕ ಅನುಷ್ಠಾನಗೊಳಿಸಿ, ಸ್ವಸಹಾಯ ಸಂಘಗಳ ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಿರುವುದು ಶ್ಲಾಘನೀಯ. ಕುಡಿಯುವ ನೀರು, ದೇವಸ್ಥಾನಗಳ ನಿರ್ಮಾಣ, ಜೀರ್ಣೋದ್ಧಾರ, ನಿರುದ್ಯೋಗ ನಿವಾರಣೆ, ಸಾಮೂಹಿಕ ವಿವಾಹ ಸೇರಿದಂತೆ ಅನೇಕ ಜನಪರ ಯೋಜನೆಗಳನ್ನು ರೂಪಿಸಿ, ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿರುವ ವೀರೇಂದ್ರ ಹೆಗಡೆ ಬೆಂಬಲಕ್ಕೆ ನಾವಿದ್ದೇವೆ. ಸತ್ಯ, ಧರ್ಮಕ್ಕೆ ಜಯ ನಿಶ್ಚಿತ ಎಂಬುದು ಪ್ರತಿಭಟನಾ ಕಾರರ ಒಕ್ಕೊರಲಿನ ಅಭಿಪ್ರಾಯವಾಗಿತ್ತು.

ಈಗಿರುವ ತನಿಖಾ ತಂಡ (ಎಸ್‌ಐಟಿ) ದ ಜೊತೆ ಮತ್ತೊಂದು ತನಿಖಾ ತಂಡ ರಚಿಸಿ ಸತ್ಯಾಂಶ ಬಯಲಿಗೆಳೆಯುವಂತೆ, ಬ್ಯಾಂಕ್ ಖಾತೆಗಳ ಬಗ್ಗೆಯೂ ತನಿಖೆಯಾಗಬೇಕು. ಮಾಧ್ಯಮಗಳಲ್ಲಿ ಸುಳ್ಳು ಸುದ್ದಿಗಳು ಪ್ರಚಾರವಾಗದಂತೆ ಕ್ರಮ ಕೈಗೊಳ್ಳಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಆವರಗೊಳ್ಳ ಪುರವರ್ಗ ಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ, ಹೆಬ್ಬಾಳು ವಿರಕ್ತಮಠದ ಶ್ರೀ ಮಹಾಂತ ರುದ್ರೇಶ್ವರ ಸ್ವಾಮೀಜಿ ಪ್ರತಿಭಟನೆಯ ಸಾನ್ನಿಧ್ಯ ವಹಿಸಿ ಮಾತನಾಡಿ, ವಿಶ್ವ ವಿಖ್ಯಾತಿ ಪಡೆದ ಶ್ರೀ ಕ್ಷೇತ್ರ ಧರ್ಮಸ್ಥಳ ಮತ್ತು ಧರ್ಮಾಧಿಕಾರಿ ವೀರೇಂದ್ರ ಹೆಗಡೆ ವಿರುದ್ಧದ ಆರೋಪ ಸಲ್ಲದು. ಸಮಾಜದ ಸರ್ವಾಂಗೀಣ ಪ್ರಗತಿ, ಮಹಿಳಾ ಸಬಲೀಕರಣದ ಮೂಲಕ ಜನರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಹೆಗಡೆ ಅವರ ಕಾರ್ಯ ಪ್ರಶಂಸನೀಯ ಎಂದರು.

ಕೆಲವು ಧರ್ಮ ವಿರೋಧಿಗಳು ಧರ್ಮಸ್ಥಳ ಹಾಗೂ ವೀರೇಂದ್ರ ಹೆಗಡೆ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡುವುದು, ಧರ್ಮಸ್ಥಳದ ಪಾವಿತ್ರ್ಯತೆಗೆ ಧಕ್ಕೆ ತರುವ ನಿಟ್ಟಿನಲ್ಲಿ ಅಪಪ್ರಚಾರ ಮಾಡುತ್ತಿರುವುದು ಖಂಡನೀಯ ಎಂದು ಹೇಳಿದರು.

# ಒಳ ಮೀಸಲಾತಿ ಹಂಚಿಕೆ : ಮಾದಿಗ ಸಮಾಜದಿಂದ ಸ್ವಾಗತ



**ಹೊನ್ನಾಳಿ :** ರಾಜ್ಯ ಕಾಂಗ್ರೆಸ್ ಸರಕಾರ ಒಳ ಮೀಸಲಾತಿ ಹಂಚಿಕೆ ಮಾಡಿರುವುದನ್ನು ತಾಲೂಕು ಮಾದಿಗ ಸಮಾಜ ಸ್ವಾಗತಿಸುತ್ತದೆ ಎಂದು ತಾಲೂಕು ಮಾದಿಗ ಸಮಾಜದ ಅಧ್ಯಕ್ಷ ಜಿ. ಎಚ್. ತಮ್ಮಣ್ಣ ದಿಡಗೂರು ಹೇಳಿದರು.

ಗುರುವಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಳೆದ 35 ವರ್ಷಗಳ ಸುಧೀರ್ಘ ಕಾಲ ಹಗಲಿರುಳು ಮಾಡಿದ ಹೋರಾಟಕ್ಕೆ ಸಂದ ಪ್ರತಿಫಲ ಇದಾಗಿದೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಅಳೆದು ತೂಗಿ ಈ ನಿರ್ಧಾರ ತೆಗೆದುಕೊಂಡಿದ್ದಾರೆ.

ಇಡೀ ಸಚಿವ ಸಂಪುಟ ಕೂಡಾ ಇದನ್ನು ಒಪ್ಪಿಕೊಮಡಿದ್ದು ಖುಷಿ ತಂದಿದೆ ಪ್ರವರ್ಗ ಎ ನಲ್ಲಿ 18 ಜಾತಿಗಳಿದ್ದು ಅದಕ್ಕೆ % 6, ಪ್ರವರ್ಗ ಬಿ ನಲ್ಲಿ 20 ಜಾತಿಗಳು ಇದ್ದು ಅದಕ್ಕೆ % 6 ರಷ್ಟು ಒಳಮೀಸಲಾತಿ ಹಾಗೂ ಪ್ರವರ್ಗ ಸಿ. ಗೆ 59 ಪ್ಲಸ್ 3 ಜಾತಿಗಳನ್ನು ಸೇರಿಸಿ % 5 ರಷ್ಟು ಮೀಸಲಾತಿ ನಿಗದಿ ಮಾಡಿರುವುದು ಸಂತೋಷ ತಂದಿದೆ ಅದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರಕಾರಕ್ಕೆ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದು ಅವರು ಹೇಳಿದರು.

ಕೆಲವು ವಿಪಕ್ಷಗಳ ಮುಖಂಡರು ಇದನ್ನು ಸ್ವಾಗತಿಸುವ ವಿಚಾರದಲ್ಲಿ ಮೀನಾಮೇಷ ಎಣಿಸುತ್ತಿದ್ದಾರೆ ಆದರೆ ಅದು ಸರಿಯಲ್ಲ, ರಾಜ್ಯದ ಇಡೀ ಮಾದಿಗ ಸಮುದಾಯ ಈ ತೀರ್ಪಿಗೆ ಸಾಕಷ್ಟು ಹೋರಾಟ ಮಾಡಿದೆ ಕೆಲವರು ಪ್ರಾಣತ್ಯಾಗ ಮಾಡಿದ್ದಾರೆ. ಎಷ್ಟೋ ಸಾವಿರಾರು ಜನರು ಕೇಸುಗಳನ್ನು ಹಾಕಿಸಿಕೊಂಡಿದ್ದಾರೆ ಈ ಎಲ್ಲಾ ಹೋರಾಟಗಾರರಿಗೆ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ಅವರು ಹೇಳಿದರು ಇನ್ನುಮುಂದೆ ಒಳಮೀಸಲಾತಿ ಹೋರಾಟ ಇಲ್ಲಿಗೆ ಮುಗಿದ ಅಧ್ಯಾಯ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾದಿಗ ಸಮಾಜದ ಮುಖಂಡರಾದ ಕೆಂಗಲಹಳ್ಳಿ ಪ್ರಭಾಕರ್, ಮಾರಿಕೊಪ್ಪ ಮಂಜು, ರಾಜು ಮಲ್ಲಿಗೇನಹಳ್ಳಿ, ಹನುಮಂತಪ್ಪ, ಗೋವಿನಕೋವಿ ನರಸಿಂಹಪ್ಪ, ರಾಜು, ಬೇಲಿಮಲ್ಲೂರು ಅಣ್ಣಪ್ಪ ಸೇರಿದಂತೆ ನೂರಾರು ಜನ ಭಾಗಿಯಾಗಿದ್ದರು.

21ಎಚ್‌ಎನ್‌ಎಲ್3ಚಿತ್ರ1 : ಹೊನ್ನಾಳಿ ತಾಲೂಕು ಮಾದಿಗ ಸಮಾಜದವತಿಯಿಂದ ಒಳಮೀಸಲಾತಿ ಆದೇಶ ಕುರಿತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಸಂಭ್ರಮಾಚರಣೆ ಹಮ್ಮಿಕೊಂಡಿತ್ತು.

# ಇಂಡಿಯಾ ಒಕ್ಕೂಟದ ಅಭ್ಯರ್ಥಿ ಸುದರ್ಶನ್ ರೆಡ್ಡಿ ನಾಮಪತ್ರ ಸಲ್ಲಿಕೆ



**ನವದೆಹಲಿ :** ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶರಾದ ನ್ಯಾಯಮೂರ್ತಿ ಬಿ ಸುದರ್ಶನ್ ರೆಡ್ಡಿ ಅವರು ಸೆಪ್ಟೆಂಬರ್ 9ರಂದು ನಡೆಯಲಿರುವ ಉಪ ರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಬಣದ ನಾಮನಿರ್ದೇಶಿತ ಅಭ್ಯರ್ಥಿಯಾಗಿ ಇಂದು ಗುರುವಾರ ನಾಮಪತ್ರ ಸಲ್ಲಿಸಿದರು.

ಎನ್‌ಡಿಎ ಮೈತ್ರಿಕೂಟದಿಂದ ಸಿ.ಪಿ. ರಾಧಾಕೃಷ್ಣನ್ ವಿರುದ್ಧ ಇಂಡಿಯಾ ಬಣದಿಂದ ಉಪ ರಾಷ್ಟ್ರಪತಿ ಚುನಾವಣೆಗೆ ಔಪಚಾರಿಕ ಪ್ರವೇಶ ಇದಾಗಿದೆ. ವಿರೋಧ ಪಕ್ಷದ ಮೈತ್ರಿಕೂಟದ ಸಭೆಯ ನಂತರ ಕಾಂಗ್ರೆಸ್ ಅಧ್ಯಕ್ಷ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ನ್ಯಾಯಮೂರ್ತಿ ರೆಡ್ಡಿ ಅವರ ಉಮೇದುವಾರಿಕೆಯನ್ನು ಘೋಷಿಸಿದ್ದರು. ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರನ್ನು ಭಾರತೀಯ ನ್ಯಾಯಶಾಸ್ತ್ರದಲ್ಲಿ "ಅತ್ಯುನ್ನತ ವ್ಯಕ್ತಿ" ಎಂದು ಪರಿಗಣಿಸಲಾಗಿದೆ, ಅವರ ವೃತ್ತಿಜೀವನದಲ್ಲಿ ಹೆಗ್ಗುರುತು ತೀರ್ಪುಗಳು, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯಕ್ಕಾಗಿ ಅವರು ತೋರಿಸಿದ್ದ ದೃಢ ಸಮರ್ಪಣೆಗಾಗಿ ಅವರನ್ನು ಗೌರವಿಸಲಾಗಿದೆ.ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶರಾದ ನ್ಯಾಯಮೂರ್ತಿ ಬಿ ಸುದರ್ಶನ್ ರೆಡ್ಡಿ ಅವರು ಸೆಪ್ಟೆಂಬರ್ 9ರಂದು ನಡೆಯಲಿರುವ ಉಪ ರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಬಣದ ನಾಮನಿರ್ದೇಶಿತ ಅಭ್ಯರ್ಥಿಯಾಗಿ ಇಂದು ಗುರುವಾರ ನಾಮಪತ್ರ ಸಲ್ಲಿಸಿದರು. ಎನ್‌ಡಿಎ ಮೈತ್ರಿಕೂಟದಿಂದ ಸಿ.ಪಿ. ರಾಧಾಕೃಷ್ಣನ್ ವಿರುದ್ಧ ಇಂಡಿಯಾ ಬಣದಿಂದ ಉಪ ರಾಷ್ಟ್ರಪತಿ ಚುನಾವಣೆಗೆ ಔಪಚಾರಿಕ ಪ್ರವೇಶ ಇದಾಗಿದೆ. ವಿರೋಧ ಪಕ್ಷದ ಮೈತ್ರಿಕೂಟದ ಸಭೆಯ ನಂತರ ಕಾಂಗ್ರೆಸ್ ಅಧ್ಯಕ್ಷ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ನ್ಯಾಯಮೂರ್ತಿ ರೆಡ್ಡಿ ಅವರ ಉಮೇದುವಾರಿಕೆಯನ್ನು ಘೋಷಿಸಿದ್ದರು.

## ನಿತಿನ್ ಗಡ್ಕರಿ ಭೇಟಿಯಾದ ಹೆಚ್.ಡಿ. ಕುಮಾರಸ್ವಾಮಿ

**ನವದೆಹಲಿ:** ಮಂಡ್ಯ ಲೋಕಸಭೆ ಕ್ಷೇತ್ರದ ಹಾಲಿ ಹಾಗೂ ಮುಂದೆ ಕೈಗೊಳ್ಳಲಿರುವ ಹೆದ್ದಾರಿ ಯೋಜನೆಗಳ ಬಗ್ಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ಹೆದ್ದಾರಿ ಮತ್ತು ಭೂಸಾರಿಗೆ ಸಚಿವರಾದ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.



ಗಡ್ಕರಿ ಅವರ ನಿವಾಸಕ್ಕೆ ತಮ್ಮ ಆಪ್ತ ಅಧಿಕಾರಿಗಳ ಜತೆ ತೆರಳಿ ಭೇಟಿ ಮಾಡಿದ ಕುಮಾರಸ್ವಾಮಿ ಅವರು; ಈಗಾಗಲೇ ಮಂಡ್ಯ ಜಿಲ್ಲೆಯಲ್ಲಿ ಕಾರ್ಯಗತ ಆಗುತ್ತಿರುವ ಹೆದ್ದಾರಿ ಯೋಜನೆಗಳ ಬಗ್ಗೆ ಸಮಾಲೋಚನೆ ನಡೆಸಿದರು.


# ಕರ್ನಾಟಕದ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಗೂ ಮುನ್ನ ಲಿಂಗಾಯತರ ಸಭೆ

**ಬೆಂಗಳೂರು:** ಮುಂಬರುವ ತಿಂಗಳುಗಳಲ್ಲಿ ಕರ್ನಾಟಕವು ಹಿಂದುಳಿದ ವರ್ಗಗಳ ಆಯೋಗದಿಂದ ಹೊಸ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದಂತೆ. ದತ್ತಾಂಶ ಸಂಗ್ರಹ ಪ್ರಕ್ರಿಯೆಯಲ್ಲಿ ತಮ್ಮ ಸಮುದಾಯಕ್ಕೆ ನಿಖರವಾದ ಪ್ರಾತಿನಿಧ್ಯ ಖಚಿತಪಡಿಸಿಕೊಳ್ಳಲು ಲಿಂಗಾಯತ ನಾಯಕರು ಸಜ್ಜಾಗಿದ್ದಾರೆ.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಮತ್ತು ಹಿರಿಯ ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ಅವರು ಎಲ್ಲಾ ಲಿಂಗಾಯತ ಸಚಿವರು ಮತ್ತು ಶಾಸಕರನ್ನು ಒಳಗೊಂಡ ಪೂರ್ವಭಾವಿ ಸಭೆ ಕರೆದಿದ್ದಾರೆ. ಶಾಸಕರು ತಮ್ಮ ಕ್ಷೇತ್ರಗಳಿಗೆ ಮರಳುವ ಮೊದಲು, ಅಂದರೆ ವಿಧಾನಸಭೆ ಅಧಿವೇಶನದ ನಂತರ ವಿಧಾನಸೌಧದ ಬಳಿಯ ಹೋಟೆಲ್‌ನಲ್ಲಿ ನಡೆಯಲಿರುವ ಮುಚ್ಚಿದ ಬಾಗಿಲಿನ ಸಭೆ ನಡೆಯಲಿದೆ.

ಸುದ್ದಿಗಾರರ ಜೊತೆ ಮಾತನಾಡಿದ ಸಭೆಯ ಹಿಂದಿನ ಉದ್ದೇಶದ ಬಗ್ಗೆ ಮಾತನಾಡಿದ ಮಹಾಸಭಾ ಕಾರ್ಯದರ್ಶಿ ರೇಣುಕಾ ಪ್ರಸನ್ನ ನಾವು ಹಿಂದೆ ಚರ್ಚೆಗಳನ್ನು ನಡೆಸಿದ್ದೇವೆ, ಆದರೆ ಮುಂದಿನ ಸುತ್ತಿನ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಯು ಸೆಪ್ಟೆಂಬರ್ ಅಥವಾ ಅಕ್ಟೋಬರ್‌ನಲ್ಲಿ ಪ್ರಾರಂಭವಾಗುವ ನಿರೀಕ್ಷೆಯಿರುವುದರಿಂದ, ಸಮುದಾಯವು ಒಗ್ಗಟ್ಟಾಗುವುದು ಮುಖ್ಯವಾಗಿದೆ ಎಂದಿದ್ದಾರೆ.

ಸಮುದಾಯದ ಸದಸ್ಯರು ಸಮೀಕ್ಷೆಯಲ್ಲಿ ತಮ್ಮನ್ನು ತಾವು ಗುರುತಿಸಿಕೊಳ್ಳುವ ವಿಧಾನವನ್ನು ಸುಗಮಗೊಳಿಸುವುದು ಪ್ರಮುಖ ಉದ್ದೇಶವಾಗಿದೆ. ಕಳೆದ ಸುತ್ತಿನಲ್ಲಿ ಜನರು ತಮ್ಮನ್ನು ಉಪ-ಜಾತಿ ಅಥವಾ



ಲಿಂಗವಂತ, ಲಿಂಗಧಾರ ಅಥವಾ ವೀರಶೈವ ಮತ್ತು ಲಿಂಗಾಯತದ ವಿಭಿನ್ನ ಸಂಯೋಜನೆಗಳ ಮೂಲಕ ಮಾತ್ರ ಗುರುತಿಸಿಕೊಳ್ಳುವ ಸಮಸ್ಯೆಗಳಿದ್ದವು.

ಇದರಿಂದ ಗೊಂದಲ ಮತ್ತು ಅಸಮಂಜಸ ದತ್ತಾಂಶಕ್ಕೆ ಕಾರಣವಾಯಿತು. ನಾವು ಈಗ ಪ್ರತಿಯೊಬ್ಬರೂ ತಮ್ಮ ಧರ್ಮವನ್ನು ವೀರಶೈವ-ಲಿಂಗಾಯತ ಎಂದು, ಜಾತಿಯನ್ನು ಲಿಂಗಾಯತ ಅಥವಾ ವೀರಶೈವ ಎಂದು ಅನ್ವಯವಾಗುವಂತೆ ಹಾಗೂ ಪಂಚಮಸಾಲಿ, ನೋನಬಾ, ಬಣಜಿಗ ಮತ್ತು ಸದರ್ ನಂತಹ ಅವರ ಉಪ-ಜಾತಿಯನ್ನು ಸ್ಪಷ್ಟವಾಗಿ ನಮೂದಿಸಲು ಸಲಹೆ ನೀಡುತ್ತಿದ್ದೇವೆ ಎಂದಿದ್ದಾರೆ.

ಮಹಾಸಭಾ ದಾಖಲೆಗಳು ರಾಜ್ಯ ಶಾಸಕಾಂಗದಲ್ಲಿ ಲಿಂಗಾಯತ ಸಮುದಾಯವು ಉತ್ತಮವಾಗಿ ಪ್ರಾತಿನಿಧ್ಯ ಹೊಂದಿದೆ ಎಂದು ಸೂಚಿಸುತ್ತದೆ, ಇದರಲ್ಲಿ ಪರಿಷತ್ತಿನ ಅಧ್ಯಕ್ಷ ಬಸವರಾಜ ಹೊರಟ್ಟಿ ಸೇರಿದಂತೆ ಏಳು ಸಚಿವರು, 55 ಶಾಸಕರು ಮತ್ತು 16 ಎಂಎಲ್‌ಸಿಗಳು ಇದ್ದಾರೆ. ಅವರು ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಸೇರಿದಂತೆ ಎಲ್ಲಾ ಪಕ್ಷಗಳಲ್ಲಿದ್ದಾರೆ .

ರಾಜ್ಯದ ಮತ್ತೊಂದು ಪ್ರಬಲ ಸಮುದಾಯವಾಗಿರುವ ಒಕ್ಕಲಿಗರು ರಾಜ್ಯ ಮತ್ತು ಜಿಲ್ಲಾ ಮಟ್ಟದ ಜಾಗೃತಿ ಕಾರ್ಯಕ್ರಮಗಳನ್ನು ಸಹ ಪ್ರಾರಂಭಿಸಿದ್ದಾರೆ. ಉಪ-ಜಾತಿ ಸಂಬಂಧಗಳನ್ನು ಲೆಕ್ಕಿಸದೆ, ಸಮುದಾಯದ ನಾಯಕರು ತಮ್ಮ ಸದಸ್ಯರು ತಮ್ಮ ಗುರುತನ್ನು ಏಕರೂಪವಾಗಿ ವರದಿ ಮಾಡುವಂತೆ ಒತ್ತಾಯಿಸಿದ್ದಾರೆ. ಎರಡೂ ಸಮುದಾಯಗಳ ಪ್ರತಿನಿಧಿಗಳು ಸಂಘಟಿತ ವಿಧಾನವನ್ನು ಚರ್ಚಿಸಲು ಹಿಂದೆ ಭೇಟಿಯಾಗಿದ್ದಾರೆ ಎಂದು ಮೂಲಗಳು ಸೂಚಿಸುತ್ತವೆ.

ಈ ಹಿಂದೆ, ಸುಮಾರು 108 ಉಪ-ಜಾತಿಗಳನ್ನು ದಾಖಲಿಸಲಾಗಿತ್ತು, ಆದರೆ ನಾವು ಅಧಿಕೃತವಾಗಿ 88 ಅನ್ನು ಗುರುತಿಸುತ್ತೇವೆ" ಎಂದು ಪ್ರಸನ್ನ ತಿಳಿಸಿದ್ದಾರೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ

### ವೃಷಭ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಕರ್ಕ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ನೀವು ನಿಮ್ಮ ಪ್ರೀತಿಪಾತ್ರರನ್ನು ನಿಮ್ಮ ಜೀವನ ಸಂಗಾತಿಯನ್ನಾಗಿ ಮಾಡಲು ಬಯಸುತ್ತಿದ್ದರೆ, ಇಂದು ನೀವು ಅವರೊಂದಿಗೆ ಮಾತನಾಡಬಹುದು.

### ಸಿಂಹ ರಾಶಿ

ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಇಂದು ಸಮಯದ ಸೌಂದರ್ಯವನ್ನು ನೋಡುತ್ತಾ, ನೀವು ನಿಮಗಾಗಿ ಸಮಯವನ್ನು ತೆಗೆಯಬಹುದು

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹಠಮಾರಿ ವರ್ತನೆ ನಿಮ್ಮ ಹತ್ತಿರದ ಸ್ನೇಹಿತರು ಹಾಗೂ ಮನೆಯಲ್ಲಿರುವವರಿಗೂ ನೋವುಂಟುಮಾಡುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ.

### ವೃಶ್ಚಿಕ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ಪ್ರೀತಿಪಾತ್ರರಿಗೆ ನಿಮ್ಮ ವಿಚಿತ್ರ ವರ್ತನೆಯ ಜೊತೆ ಏಗಲು ಅತ್ಯಂತ ಕಷ್ಟವಾಗುತ್ತದೆ. ನುರಿತ ಜನರೊಡನೆ ಒಡನಾಟ ಹೊಂದಿ ಮತ್ತು ಅವರು ನಿಮಗೆ ಭವಿಷ್ಯದ ಪ್ರವೃತ್ತಿಗಳ ಬಗ್ಗೆ ಒಳನೋಟ ನೀಡಬಲ್ಲರು.

### ಧನು ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

### ಮಕರ ರಾಶಿ

ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ನಿರೀಕ್ಷೆಗಳಿಗೆ ತಕ್ಕಂತೆ ಬದುಕಲು ನಿಮ್ಮ ಮಗುವನ್ನು ಪ್ರೇರೇಪಿಸಿ. ಆದರೆ ಅವನ ಪ್ರಯತ್ನದಿಂದ ಪವಾಡಗಳನ್ನು ನಿರೀಕ್ಷಿಸಬೇಡಿ.

### ಕುಂಭ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ. ನಿಮ್ಮ ಯೋಜನೆಗಳ ಬಗ್ಗೆ ತುಂಬಾ ಮುಕ್ತತೆ ಹೊಂದಿದ್ದಲ್ಲಿ ನೀವು ಅವುಗಳನ್ನು ಹಾಳುಮಾಡಬಹುದು.

### ಮೀನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

# ಮಕ್ಕಳ ಹಕ್ಕು ಕಾವಲು ಸಮಿತಿ ಸಮರ್ಥವಾಗಿ ಕಾರ್ಯ ನಿರ್ವಹಿಸಲಿ

## ಭದ್ರ ಬಾಲ್ಯ ಯೋಜನೆಯ ತರಬೇತಿ ಕಾರ್ಯಾಗಾರದಲ್ಲಿ ಜಿ.ಪಂ. ಸಿಇಒ ಕೀರ್ತನಾ



**ಚಿಕ್ಕಮಗಳೂರು:** 'ಭದ್ರ ಬಾಲ್ಯ' ಯೋಜನೆಯಡಿ ಪ್ರತೀ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ಹಕ್ಕು ಕಾವಲು ಸಮಿತಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದರೆ ಮಾತ್ರ ಮಕ್ಕಳ ಮೇಲಿನ ದೌರ್ಜನ್ಯಗಳಿಗೆ ಕಡಿವಾಣ ಬೀಳಲಿದೆ ಎಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಬೆಂಗಳೂರಿನ ಕೆ.ಹೆಚ್.ಪಿ.ಟಿ. ಸಂಯುಕ್ತಾಶ್ರಯದಲ್ಲಿ ಇಂದು ನಗರದ ಜಿ.ಪಂ. ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಭದ್ರ ಬಾಲ್ಯದ ಪ್ರಧಾನ ಆಶಯಗಳಲ್ಲಿ ಒಂದಾದ ಗ್ರಾಮ ಪಂಚಾಯಿತಿ ಮಟ್ಟದ ಕಾವಲು ಸಮಿತಿ ಸದಸ್ಯರಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

15 ಮಂದಿಯ ಮಹಿಳಾ ಮತ್ತು ಮಕ್ಕಳ ಹಕ್ಕು ಕಾವಲು ಸಮಿತಿಗೆ ಮಕ್ಕಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ನಿರ್ವಹಿಸುವ ಸಾಮರ್ಥ್ಯ ಮತ್ತು ಅಧಿಕಾರ ಇದೆ. ಈ ಸಮಿತಿಗೆ ಮಗುವಿನ ಅಪೌಷ್ಟಿಕತೆ, ಹಸಿವಿನ ಸಮಸ್ಯೆ, ಲೈಂಗಿಕ ಶೋಷಣೆ, ಕೌಟುಂಬಿಕ ಹಿಂಸೆ, ಶಾಲೆಗೆ ಹೋಗದೆ ಇರುವುದು ಇತ್ಯಾದಿ ಸಮಸ್ಯೆಗಳನ್ನು ನಿರ್ವಹಿಸುವ ಸಾಮರ್ಥ್ಯದ ಜೊತೆಗೆ ಅಧಿಕಾರವೂ ಇದೆ. ಈ ಸಮಿತಿಯಲ್ಲಿ ಪೊಲೀಸ್ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತೆಯರು, ಮುಖ್ಯಶಿಕ್ಷಕರು, ಸ್ವಸಹಾಯ ಸಂಘದ ಅಧ್ಯಕ್ಷರು, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ. ಒಂದು ವೇಳೆ ಆ ಗ್ರಾ.ಪಂ. ಅಧ್ಯಕ್ಷರು ಮಹಿಳೆಯಾಗಿದ್ದರೆ ಅವರೇ ಈ ಸಮಿತಿಯ ಅಧ್ಯಕ್ಷರೂ ಆಗಿರುತ್ತಾರೆ ಎಂದು ತಿಳಿಸಿದರು.

ಬಾಲ್ಯವಿವಾಹದಂತಹ ಸಂದರ್ಭದಲ್ಲಿ ಈ ಸಮಿತಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ತಿಳಿಸಿದ ಅವರು, ಇಂತಹ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಅಥವಾ ಮೇಲ್ವಿಚಾರಕರನ್ನು ಹೊಣೆ ಮಾಡಲಾಗುತ್ತಿದೆ. ಬಾಲ್ಯವಿವಾಹ ನಡೆಯುತ್ತಿರುವ ವೇಳೆ ಈ ಬಗ್ಗೆ ದೂರು ನೀಡಬೇಕಾಗುತ್ತದೆ. ಒಂದು ವೇಳೆ ಬಾಲ್ಯ ವಿವಾಹ ನಡೆಸಿದ ಕುಟುಂಬದವರು ಪ್ರಭಾವಿಗಳಾಗಿದ್ದರೆ, ದೂರು ನೀಡಿದ ಕಾರಣಕ್ಕೆ ಊರಿನಿಂದ ಹೊರ ಹಾಕುವುದು, ಬೆದರಿಕೆ ಹಾಕುವಂತಹ ಸಂದರ್ಭಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸಮಿತಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿದರೆ ಈ ಸಮಸ್ಯೆ ಉದ್ಭವಿಸುವುದಿಲ್ಲ ಎಂದು ತಿಳಿಸಿದರು.

ಬೆಳೆಯುವ ಮಗುವಿಗೆ ಸುರಕ್ಷಿತ ವಾತಾವರಣ ಕಲ್ಪಿಸಿ ಕೊಡಬೇಕು ಎನ್ನುವುದು 'ಭದ್ರ ಬಾಲ್ಯ' ಯೋಜನೆಯ ಮುಖ್ಯ ಉದ್ದೇಶ. ನಮ್ಮ ಜಿಲ್ಲೆಯಲ್ಲಿ ಪೋಕ್ಸೋ, ಬಾಲ ಗರ್ಭಿಣಿ, ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚುತ್ತಲೇ ಹೋಗುತ್ತಿವೆ. ಇದು ಇಡೀ ಕುಟುಂಬದ ಪ್ರಶ್ನೆಯಾಗಿದೆ. ಚಿಕ್ಕ ವಯಸ್ಸಿನಲ್ಲಿ ಹೆಣ್ಣು ಮಕ್ಕಳು ಗರ್ಭಿಣಿಯಾದಲ್ಲಿ, ಮಾನಸಿಕವಾಗಿ, ದೈಹಿಕವಾಗಿ ಸಾಮರ್ಥ್ಯವಿಲ್ಲದಿರುವ ಸಂದರ್ಭದಲ್ಲಿ ಗರ್ಭಿಣಿಯಾಗಿ ತಾಯ್ತನಕ್ಕೆ ಒಳಗಾಗುವುದರಿಂದ ಆ ರೀತಿ ಹುಟ್ಟಿದ ಮಗುವೂ ಸಮರ್ಥವಾಗಿರುವುದಿಲ್ಲ. ಬಾಲ್ಯ ವಿವಾಹವಾದ ಬಗ್ಗೆ ಪ್ರಕರಣ ದಾಖಲಿಸುವುದರಿಂದ ಹುಡುಗನ ಕುಟುಂಬದ ಕೆಂಗಣ್ಣಿಗೆ ಗುರಿಯಾಗಿ ನಿನ್ನನ್ನು ಮದುವೆಯಾದ ಕಾರಣದಿಂದಾಗಿ ಮನೆ ಮಗ ಜೈಲು ಸೇರಬೇಕಾಯಿತು ಎನ್ನುವ ನಿಂದನೆಗೂ ಒಳಗಾಗಬೇಕಾಗುತ್ತದೆ. ಹೀಗಾದಾಗ ಆಗತಾನೇ ಹುಟ್ಟಿದ ಮಗುವಿನ ಗತಿಯೇನು? ಈ ಹಿನ್ನೆಲೆಯಲ್ಲಿ ಹೆಣ್ಣು ಮಕ್ಕಳು ಅಕಾಲಿಕ ಗರ್ಭಧಾರಣೆಗೆ ಒಳಗಾಗುವಂತಹ ಪರಿಸ್ಥಿತಿ ನಿರ್ಮಾಣವಾಗದಂತೆ, ಶೋಷಣೆಗೆ ಒಳಗಾಗದಂತೆ ಮುಂಜಾಗ್ರತೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಾವಲು ಸಮಿತಿಯನ್ನು ಉತ್ತೇಜಿಸಿದರೆ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು. ಒಂದು ಹೆಣ್ಣಿಗೆ ಮದುವೆ 18 ವರ್ಷದ ಬಳಿಕ ಎಂದು ಕಾನೂನಿದೆ. ಕೆಲವೊಂದು ಕಾರಣಗಳಿಂದ ಬಾಲ್ಯ ವಿವಾಹವಾಗಿ ಮುಂದೆ ಕಷ್ಟಪಡುತ್ತಿರುವ ಘಟನೆಗಳು ನಮ್ಮ ಕಣ್ಣ ಮುಂದಿವೆ. ಇಂತಹ ಸಮಸ್ಯೆಗಳಿಗೆ ಹೆಣ್ಣು ಮಕ್ಕಳು ಒಳಗಾಗದಂತೆ ನಾವು ನೋಡಿಕೊಳ್ಳಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕಾರ್ಮಿಕ ವರ್ಗದಲ್ಲಿ, ಕೆಲವೊಂದು ಸಮುದಾಯಗಳಲ್ಲಿ ವಲಸಿಗರಲ್ಲಿ ಹಾಗೂ ಅರ್ಧದಲ್ಲೇ ಶಾಲೆ ಬಿಟ್ಟ ಮಕ್ಕಳು ಇಂತಹ ಸಮಸ್ಯೆಗಳಿಗೆ ಬಲಿಯಾಗುತ್ತಿದ್ದಾರೆ. ಇದನ್ನು ತಡೆಗಟ್ಟಲು ಕಾವಲು ಸಮಿತಿ ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು. ಸಮಾಜಕ್ಕೆ ಹಾಗೂ ಹೆಣ್ಣು ಮಕ್ಕಳ ಸಮಸ್ಯೆಗೆ ಪರಿಹಾರ ನೀಡುವ ಕೆಲಸ ನಮ್ಮದು ಎಂದು ಎಂದು ಹೇಳಿದರು.

ಕೆ.ಹೆಚ್.ಪಿ.ಟಿ.ಯ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಹೆಚ್.ಎಲ್. ಮೋಹನ್ ಮಾತನಾಡಿದರು. ಕೆಹೆಚ್‌ಪಿಟಿ ಸಕ್ರಿಯ ಕಾವಲು ಸಮಿತಿ ತರಬೇತಿ ಕೈಪಿಡಿಯನ್ನು ಈ ಸಂದರ್ಭದಲ್ಲಿ ಬಿಡುಗಡೆ ಮಾಡಲಾಯಿತು. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎನ್.ಮಂಜುನಾಥ್ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥಬಾಬು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ ವೈ.ಆಲದಾರ್ತಿ ಮುಂತಾದವರು ಭಾಗವಹಿಸಿದ್ದರು.

# ಮೌನ ಸಾಮಾಜಿಕಕ್ರಾಂತಿಯ ಹರಿಕಾರ ಡಿ. ದೇವರಾಜಅರಸು : ಲತಾಕುಮಾರಿ



**ಹಾಸನ:** ಮೌನ ಸಾಮಾಜಿಕಕ್ರಾಂತಿಯ ಹರಿಕಾರರಾಗಿ, ಆರ್ಥಿಕ ಮತ್ತು ಸಾಮಾಜಿಕವಾಗಿ ಸದೃಢವಾದಂತಹವರನ್ನುವ ದುರಾಕಿಕೊಂಡು ಬಡವರು, ಹಿಂದುಳಿದವರು, ತುಳಿತಕ್ಕೊಳಗಾದವರ ಪರ ಕಾಳಜಿಯನ್ನು ತೋರಿಸಿ ಅನೇಕ ಯೋಜನೆಗಳನ್ನು ಜಾರಿಗೆತಂದುಅವರ ಏಳಿಗೆಗೆ ಶ್ರಮಿಸಿದ ಮಹಾನ್ ನಾಯಕರುಡಿ.ದೇವರಾಜಅರಸುಅ ವರುಎಂದುಜಿಲ್ಲಾಧಿಕಾರಿ ಲತಾಕುಮಾರಿಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯ ಸಹಯೋಗದಲ್ಲಿಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಸಾಮಾಜಿಕಕ್ರಾಂತಿಯ ನೇತಾರ, ಪರಿವರ್ತನೆಯ ಹರಿಕಾರ ಹಾಗೂ ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜಅರಸುಅವರ 110ನೇ ಜನ್ಮ ದಿನಾಚರಣೆಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದಅವರುನಾಯಕತ್ವ ಗುಣವುಳ್ಳ ಮಹಾನ್ ಸಾಧಕರಾಗಿದ್ದಾರೆ. ಇವರುತಮಗೆಸಿಕ್ಕ ಅಧಿಕಾರವನ್ನು ಸಮಾಜದಏಳಿಗೆಗಾಗಿ ಬಳಸಿಕೊಂಡವರು. ಸಮಾಜದಲ್ಲಿದ್ದಂತಹ ಮಲಹೊರುವ ಪದ್ಧತಿಯನ್ನು ಹೋಗಲಾಡಿಸಿ, ಬಡವರಿಗೆ ಭೂಮಿ,ಕಾರ್ಮಿಕರಿಗೆ ಸೂರು ಒದಗಿಸಿ ಸಾಮಾಜಿಕಕ್ರಾಂತಿಯನ್ನು ಮಾಡಿ, ಶತಶತಮಾನಗಳಲ್ಲೂ ತಮ್ಮ ಹೆಸರುಉಳಿಯುವ ರೀತಿಯಲ್ಲಿ ಕೆಲಸಗಳನ್ನು ಮಾಡಿದವರುಅರಸುಅವರುಎಂದರು.

ಕರ್ನಾಟಕದಇತಿಹಾಸದಲ್ಲಿಯಾವಾಗಲೂ ಅಗ್ರಗಣ್ಯ ಸ್ಥಾನದಲ್ಲಿಅರಸುಅವರುಇರುತ್ತಾರೆ. ಇವರ ಸಾಧನೆಗಳ ಕುರಿತು ವಿದ್ಯಾರ್ಥಿಗಳು ತಿಳಿದುಕೊಳ್ಳಿ ಮತ್ತುಅವರ ನಾಯಕತ್ವಗುಣವನ್ನು ಪ್ರತಿಯೊಂದು ಮಕ್ಕಳು ರೂಡಿಸಿಕೊಳ್ಳಿಎಂದು ಹೇಳಿದರು.

ಜಿಲ್ಲಾ ಪಂಚಾಯಿತಿಮುಖ್ಯಕಾರ್ಯನಿವ ರ್ಾಹಕಅಧಿಕಾರಿಬಿ.ಆರ್ ಪೂರ್ಣಿಮಾಅವರು ಮಾತನಾಡಿಕರ್ನಾಟಕದಅಭಿವೃದ್ಧಿಯ ಹರಿಕಾರರು,ರಾಜಕೀಯ ಇಚ್ಛಾಶಕ್ತಿ ಉಳ್ಳವರು, ಕರ್ನಾಟಕರಾಜ್ಯದ ಮುಖ್ಯಮಂತ್ರಿಗಳಾಗಿದ್ದವರು ಹಾಗೂ ಕರ್ನಾಟಕಎಂದು ಮರುನಾಮಕರಣ ಮಾಡಿದಕೀರ್ತಿದೇವರಾಜಅರಸುಅವರಿಗೆ ಸಲ್ಲುತ್ತದೆಎಂದು ತಿಳಿಸಿದರು.

ಕರ್ನಾಟಕದಲ್ಲಿರುವಎಲ್ಲರೂಆರ್ಥಿಕವಾ ಗಿ,ರಾಜಕೀಯವಾಗಿ ಹಾಗೂ ಶೈಕ್ಷಣಿಕವಾಗಿ ಮುಂದುವರಿಯಬೇಕೆಂಬ ಭಾವನೆಯಿಂದ 1973ರಲ್ಲಿ ಉಳುವವನೇ ಭೂಮಿಯಒಡೆಯಎ ನ್ನುವಕಾನೂನನ್ನು ಜಾರಿಗೊಳಿಸುವ ಮೂಲಕ ಲಕ್ಷಾಂತರ ಕುಟುಂಬಗಳ ಮನೆಯನ್ನು ಬೆಳಗಿದವರು. ನ್ಯಾಯಬೆಲೆ ಅಂಗಡಿಗಳನ್ನು ತೆರೆದವರು. ಜೊತೆಗೆ 518 ಹಾಸ್ಟೆಲ್‌ಗಳನ್ನು ಹಾಗೂ ಮಹಿಳೆಯರಿಗಾಗಿಯೇ ಪ್ರತ್ಯೇಕವಾಗಿ ಹೆಣ್ಣು ಮಕ್ಕಳ ಹಾಸ್ಟೆಲ್‌ಗಳನ್ನು ತೆರೆದಿದ್ದಾರೆ. 15 ಲಕ್ಷ ವಿದ್ಯಾರ್ಥಿಗಳಿಗೆ ಅಂದಿನ ಕಾಲದಲ್ಲಿಯೇ ಮಧ್ಯಾಹ್ನದ ಉಪಹಾರದ ಯೋಜನೆ, ಸಾಲಮನ್ನಾ ಮಾಡುವುದಕ್ಕಾಗಿಋಣಭಾರಕಾ ಯ್ದೆಯನ್ನುಕೂಡಜಾರಿಗೆತಂದವರುಅರಸುಅವ ರುಎಂದರು.

ಸಮಾಜದಜನರಿಗಾಗಿ ಅನೇಕ ರೀತಿಯ ಯೋಜನೆಗಳನ್ನು ಜಾರಿಮಾಡಿದವರು. ಸುಮಾರು 29 ವರ್ಷಗಳ ಕಾಲ ಸಾರ್ವಜನಿಕಕ್ಷೇತ್ರದಲ್ಲಿದ್ದವರು. ಕಾರ್ಮಿಕ ಇಲಾಖೆ, ಸಾರಿಗೆ ಇಲಾಖೆ, ಪ್ರವಾಸೋದ್ಯಮ ಇಲಾಖೆ, ವಾರ್ತಾ ಮತ್ತು ಪ್ರಚಾರಇಲಾಖೆಯ ಸಚಿವರಾಗಿ ಕೆಲಸವನ್ನು ನಿರ್ವಹಿಸಿದ್ದಾರೆ. ಇಂದುಇವರಕುರಿತಾಗಿಇವರ ಪರಿಚಯವನ್ನು ಮಕ್ಕಳಿಗೆ ತಿಳಿಸಲು ಒಂದುಕಿರು ಪುಸ್ತಕವನ್ನು ಮಾಡಿಶಾಲಾ, ವಸತಿ ನಿಲಯದಎಲ್ಲಾಮಕ್ಕಳಿಗೆ ಹಂಚಲು ಅಧಿಕಾರಿಗಳಿಗೆತಿಳಿಸಿದರಲ್ಲದೆ, ಎಲ್ಲರೂಇವರಜೀವನಚರಿತ್ರೆಯನ್ನು ಓದಿ ತಮ್ಮಜೀವನದಲ್ಲಿ ಅಳವಡಿಸಿಕೊಳ್ಳಿ ನಿಮ್ಮ ಕೆಲಸಗಳಲ್ಲಿ ಅದು ಅಳವಡಿಕೆಯಾಗಲಿ ಮತ್ತು ಮುಂದುವರೆಯಲಿ ಅವರ ನೆನಪನ್ನು ಕೇವಲ ಜಯಂತಿಗಳ ಮೂಲಕ ಆಚರಿಸುವುದಷ್ಟೇಅಲ್ಲದೆಅವರ ಚಿಂತನೆಗಳನ್ನು ನಮ್ಮಜೀವನದಲ್ಲಿ ಅಳವಡಿಸಿಕೊಂಡು ಮುಂದುವರೆದರೆಅದೇಅವರಿಗೆ ನೀಡುವ ಬಹುದೊಡ್ಡಗೌರವವಾಗಿದೆಎಂದು ತಿಳಿಸಿದರು.

ಹಾಸನದ ಸಾಹಿತಿಗಳಾದ ಎಂ.ಜಿ ಪರಮೇಶ್ ಮಡಬಲು ಅವರು ಮಾತನಾಡಿಎರಡು ಬಾರಿ ಮುಖ್ಯಮಂತ್ರಿಳಾಗಿ, ದೀನದಲಿತರ ಹಿಂದುಳಿದ ವರ್ಗಗಳ, ಶೋಷಿತ ಸಮುದಾಯದವರ,ಅಲ್ಪಸಂಖ್ಯಾತರ, ರೈತರ, ಕೂಲಿ ಕಾರ್ಮಿಕರಆಶಾಕಿರಣವಾಗಿ ಈ ರಾಜ್ಯಕ್ಕೆ ಭದ್ರಬುನಾದಿ ಹಾಕಿದವರು,ಗ್ರಾಮೀಣ ಹಳ್ಳಿಯಲ್ಲಿ ಹುಟ್ಟಿ ಬಡತನದ ಹಾದಿಯನ್ನು ಎದುರಿಸಿ ಬೆಳೆದು ಬಂದವರಾಗಿದ್ದಾರೆ. ಹುಣಸೂರು ವಿಧಾನಸಭಾಕ್ಷೇತ್ರದಿಂದ ಹೆಚ್ಚಿನ ಅಂತರದಲ್ಲಿಆಯ್ಕೆಯಾಗಿರಾಜಕೀಯಕ್ಷೇತ್ರಕ್ಕೆಧ ಮುಕಿದವರುದೇವರಾಜುಅರಸುಅವರುಎಂದ ು ತಿಳಿಸಿದರು.

ಶ್ರೇಷ್ಠ ಗರಡಿ ಪಟುಹಾಗೂ ಪುಸ್ತಕ ಪ್ರೇಮಿಯೂಆಗಿದ್ದರು. ಸಾಹಿತ್ಯ, ಸಂಸ್ಕೃತಿಯು ಪ್ರಗತಿ ಆಗಬೇಕೆಂಬ ಕನಸನ್ನುಕಂಡಿದ್ದರು.ಎಲ್.ಜಿ ಹಾವನೂರು ವರದಿಯನ್ನುಜಾರಿಗೆತಂದವರು, ಜೀತ ಪದ್ಧತಿ ನಿರ್ಮೂಲನೆ ಮಾಡಲು ಹೋರಾಡಿದವರು,ಗುಡಿಸಲು ಮುಕ್ತ ಹಳ್ಳಿಗಳನ್ನು ಮಾಡಿದವರು, ಪ್ರತಿ ಮನೆಗೆ ಬೆಳಕನ್ನು ನೀಡಲು ಭಾಗ್ಯಜ್ಯೋ ತಿಯೋಜನೆಯನ್ನುಜಾರಿಗೆತಂದವರು, ಪದವೀಧರ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವಯೋಜನೆ ಆರಂಭಿಸಿದವರು ಹೀಗೆ ಅನೇಕ ಜನಪರಯೋಜನೆಗಳನ್ನು ಜಾರಿಗೆತಂದು ಸಮಾಜಕ್ಕೆಕೊಡುಗೆಯನ್ನು ನೀಡಿದಂತಹ ಮಹಾನ್ ವ್ಯಕ್ತಿಡಿ. ದೇವ ರಾಜುಅರಸುಅವರಜೀವನದಕುರಿತಾಗಿ ಸವಿವರವಾಗಿಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಿಂದ ಆಯೋಜಿಸಿದ್ದ ವಿವಿಧ ಸ್ಪರ್ದೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಜಿಲ್ಲಾಅಧಿಕಾರಿಕುಮಾರ್, ಸಂದೇಶ್ ಹಾಜರಿದ್ದರು.

ವಿವಿಧ ಶಾಲಾ ಕಾಲೇಜುಗಳ, ವಸತಿ ನಿಲಯದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಸಮುದಾಯದ ಮುಖಂಡರು, ಮತ್ತಿತರರುಭಾಗವಹಿಸಿದ್ದರು.

# ಗಾಯಾಳು ಬೈಕ್ ಸವಾರ ಸಾವು

**ಜಗಳೂರು:** ತಾಲ್ಲೂಕಿನ ದೊಣೆಹಳ್ಳಿ ಸಮೀಪ, ರಾಷ್ಟ್ರೀಯ ಹೆದ್ದಾರಿಯಲ್ಲಿ ಈಚೆಗೆ ಟೆಂಪೊ ಟ್ರಾವೆಲರ್ ಡಿಕ್ಕಿಯಾಗಿ ಗಂಭೀರವಾಗಿ ಗಾಯಗೊಂಡಿದ್ದ ಬೈಕ್ ಸವಾರ ಬಳ್ಳಾರಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ.

ದೊಣೆಹಳ್ಳಿ ಗ್ರಾಮದ ಶರಣ ಬಸವೇಶ್ವರ ದಾಸೋಹ ಮಠದ ವ್ಯವಸ್ಥಾಪಕ ಬಿ.ಆರ್. ಪ್ರಕಾಶ್ (62) .

ತಮ್ಮ ಹೊಲಕ್ಕೆ ಭಾನುವಾರ ಬೈಕ್‌ನಲ್ಲಿ ಪ್ರಕಾಶ್ ಹೋಗುತ್ತಿದ್ದಾಗ ತೆರಳು–ಮೂಡಲ ಮಾಚಿಕೆರೆಗೆ

ಗ್ರಾಮದ ತಿರುವಿನಲ್ಲಿ ಅಪಘಾತ" ಸಂಭವಿಸಿದೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಹೊಸಪೇಟೆ ಕಡೆಯಿಂದ ಚಿತ್ರದುರ್ಗದ ಮಾರ್ಗವಾಗಿ ತೆರಳುತ್ತಿದ್ದ ಟೆಂಪೊ ಟ್ರಾವಲರ್ ಡಿಕ್ಕಿ ಹೊಡೆದಿದೆ.

ಗಾಯಾಳುವನ್ನು ಬಳ್ಳಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಭಾನುವಾರ ರಾತ್ರಿ ಅವರು ಮೃತಪಟ್ಟರು. ಜಗಳೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ

# ಸ್ನಾತಕೋತ್ತರ ಪದವಿ ಪ್ರವೇಶಾತಿಗೆಆಫ್‌ಲೈನ್ ಮೂಲಕ ಅರ್ಜಿಆಹ್ವಾನ

**ಹಾಸನ :** ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತ ಸಂಯೆ ೂಜನೆಗೊಂಡಿರುವಚಾಮರಾಜೇಂದ್ರ ಸರ್ಕಾರಿದೃಶ್ಯಕಲಾಕಾಲೇಜು (ಕಾವಾ), ಸಿದ್ದಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಮಾಸ್ಟರ್‌ಆಫ್ ವಿಜ್ಯುಯಲ್‌ಆರ್ಟ್ಸ್ (ಎಂ.ವಿ.ಎ)


[ಎರಡು ಶೈಕ್ಷಣಿಕ ವರ್ಷದ ನಾಲ್ಕು ಸೆಮಿಸ್ಟರ್ ಸಿ.ಬಿ.ಸಿ.ಎಸ್ ಪದ್ಧತಿದೃಶ್ಯಕಲೆಯಲ್ಲಿ 2025–26 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ಬಿ.ವಿ.ಎ.ಸ್ನಾತಕ ಪದವಿಯಲ್ಲಿಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಆಫ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಸದರಿ ಸ್ನಾತಕೋತ್ತರ ಪದವಿಯಲ್ಲಿಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷಅಧ್ಯಯನದ ಸ್ನಾತಕೋತ್ತರ ಪದವಿಯಾಗಿರುತ್ತದೆ.

ಪ್ರಥಮ ವರ್ಷದ ಮಾಸ್ಟರ್‌ಆಫ್ ವಿಜ್ಯುಯಲ್‌ಆರ್ಟ್ (ಎಂ.ವಿ.ಎ) ಪ್ರವೇಶಾತಿಗಾಗಿಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಿಗೆ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸಲ್ಲಿಸಲುಆ.30 ರಂದುಅಂತಿಮ ದಿನಾಂಕವಾಗಿದ್ದು,

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅರ್ಹತಾ ಹಾಗೂ ವೈಯುಕ್ತಿಕ ಸಂದರ್ಶನದ ಪರೀಕ್ಷೆ ದಿನಾಂಕವನ್ನು ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದದೂರವಾಣಿ ಸಂಖ್ಯೆ 0821–2438931 ಯನ್ನು ಸಂಪರ್ಕಿಸಲುಚಾಮರಾಜೇಂದ್ರ ಸರ್ಕಾರಿದೃಶ್ಯಕಲಾಕಾಲೇಜುಡೀನ್ ತಿಳಿಸಿದ್ದಾರೆ.

# ಪ.ಪೂ. ಕಾಲೇಜು ಖೋ ಖೋ ಬೇಲೂರು ರಸ್ತೆಯ ಕಾಲೇಜಿಗೆ ಗೆಲುವು



**ಚಿಕ್ಕಮಗಳೂರು:** ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇಲಾಖೆ ವತಿಯಿಂದ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ನಿನ್ನೆ ಆಯೋಜಿಸಿದ್ದ ತಾಲೂಕು ಮಟ್ಟದ ಖೋ ಖೋ ಪಂದ್ಯಾವಳಿಯ ಬಾಲಕರು ಹಾಗೂ ಬಾಲಕಿಯರ ವಿಭಾಗದಲ್ಲಿ ಆತಿಥೇಯ ಬೇಲೂರು ರಸ್ತೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಥಮ ಸ್ಥಾನಕ್ಕೆ ಭಾಜನವಾಗಿವೆ.

ಬೇಲೂರು ರಸ್ತೆಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರತೀ ವರ್ಷದಂತೆ ಆಯೋಜಿಸಲಾಗಿದ್ದ ಖೋ ಖೋ ಪಂದ್ಯಾವಳಿಯನ್ನು ಬೆಳಿಗ್ಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಮಂಜುಳ ಅವರು ಉದ್ಘಾಟಿಸಿದರು.

ಅನಂತರ ಆರಂಭಗೊಂಡ ಈ ಪಂದ್ಯಾವಳಿಗಳಲ್ಲಿ ಬಾಲಕರ ವಿಭಾಗದಿಂದ ಒಟ್ಟು ಒಂಬತ್ತು ಹಾಗೂ ಬಾಲಕಿಯರ ವಿಭಾಗದಿಂದ ಒಟ್ಟು ಏಳು ತಂಡಗಳು ಭಾಗವಹಿಸಿದ್ದು, ಸ್ಪರ್ಧೆಯಲ್ಲಿ ರೋಚಕ ಪ್ರದರ್ಶನವನ್ನು ನೀಡಿದವು. ಅಂತಿಮವಾಗಿ ಆತಿಥೇಯ ಬೇಲೂರು ರಸ್ತೆಯ ಪ.ಪೂ. ಕಾಲೇಜಿನ ತಂಡ ಪ್ರಥಮ ಸ್ಥಾನ ಪಡೆದರೆ, ಬಾಲಕಿಯರ ವಿಭಾಗದಲ್ಲೂ ಇದೇ ಕಾಲೇಜಿನ ತಂಡ ಪ್ರಥಮ ಸ್ಥಾನವನ್ನು ಗಳಿಸಿತು.

ಬಾಲಕರ ವಿಭಾಗದಲ್ಲಿ ಕಳಸಾಪುರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ತಂಡ ದ್ವಿತೀಯ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು. ಬಾಲಕಿಯರ ವಿಭಾಗದಲ್ಲಿ ಬಸವನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ತಂಡ ದ್ವಿತೀಯ ಸ್ಥಾನ ಪಡೆಯಿತು.

ಈ ಪಂದ್ಯಾಟದಲ್ಲಿ ಪ್ರಥಮ ಸ್ಥಾನ ಪಡೆದ ತಂಡಗಳು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿವೆ ಎಂದು ಕಾಲೇಜಿನ ಪ್ರಾಂಶುಪಾಲರಾದ ವಿರೂಪಾಕ್ಷ ತಿಳಿಸಿದ್ದಾರೆ. ಸ್ಪರ್ಧೆಯನ್ನು ಯಶಸ್ವಿಯಾಗಿ ನಿರ್ವಹಿಸಿದ ಕ್ರೀಡಾ ಕಾರ್ಯದರ್ಶಿ ಲವ, ಪುಟ್ಟೇಗೌಡ, ಪ್ರೌಢಶಾಲೆ ದೈಹಿಕ ಶಿಕ್ಷಕ ದೊಡ್ಡಪ್ಪ ಉಪಸ್ಥಿತರಿದ್ದರು. ಕಾಲೇಜಿನ ಉಪನ್ಯಾಸಕರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

20ಸಿಕೆಎಂ5 ಹಾಗೂ 20ಸಿಕೆಎಂ6: ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದ ಬಾಲಕರ ಮತ್ತು ಬಾಲಕಿಯರ ತಂಡಗಳು

## ನಿಧನ ಸುದ್ದಿಗಳು

### ಶಿವಾನಂದಪ್ಪ ನಿಧನ

**ಹರಿಹರ :** ಗಾಂಧಿ ನಗರದ ನ್ಯಾಯಬೆಲೆ ಅಂಗಡಿ ಮಾಲೀಕರರಾದ (ಸೊಸೈಟಿ) ಬಿ. ಶಿವಾನಂದಪ್ಪ ಅವರು ದಿನಾಂಕ 20.08.20250 9.30ಕ್ಕೆ ಮೃತರಾಗಿದ್ದು. ಮೃತರು ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆನ್ನು ದಿನಾಂಕ 21.08.2025ರ ಗುರುವಾರ ಮಧ್ಯಾಹ್ನ 2 ಗಂಟೆಗೆ ಹರಿಹರ ನಗರದ ಹಿಂದೂ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

### ರಾಂಪುರ ಆರ್.ಜಿ. ಸುರೇಶ ಕುಮಾರ ನಿಧನ

**ದಾವಣಗೆರೆ :** ತಾಲ್ಲೂಕು ರಾಂಪುರ ಗ್ರಾಮದ ಆರ್.ಜಿ. ಗುರುಶಂಕರಪ್ಪನವರ ಮಗನಾದ ಆರ್.ಜಿ. ಸುರೇಶ ಕುಮಾರ ಇವರು ದಿನಾಂಕ : 20.08.20250 ರಂದು 11.30 ನಿಧನರಾದರು. ಮೃತರು ತಂದೆ, ತಾಯಿ, ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು, ಸಹೋದರ, ಸಹೋದರಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯನ್ನು ದಿನಾಂಕ : 21.08.2025ರ ಗುರುವಾರ ಮಧ್ಯಾಹ್ನ 12.30ಕ್ಕೆ ಮೃತರ ಸ್ವಗ್ರಾಮವಾದ ರಾಂಪುರದಲ್ಲಿ ನೆರವೇರಿಸಲಾಯಿತು.

### ಬಿಷ್ಣಪ್ಪರ ಸಿದ್ದೇಶ್ ನಿಧನ

**ದಾವಣಗೆರೆ :** ತಾಲ್ಲೂಕು ಕಕ್ಕರಗೊಳ್ಳ ಗ್ರಾಮದ ವಾಸಿ ಬಿಷ್ಣಪ್ಪರ ಸಿದ್ದಲಿಂಗಪ್ಪ ನವರ ಪುತ್ರ ಸಿದ್ದೇಶ್ (ಅಪ್ಪಿ) (38) ದಿನಾಂಕ : 20.08.2025 ರ ಬುಧವಾರ ಸಂಜೆ 7.05 ಕ್ಕೆ ನಿಧನರಾಗಿರುತ್ತಾರೆ. ತಂದೆ, ಸಹೋದರಿ, ಪತ್ನಿ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ: 21.08.2025ರ ಗುರುವಾರ ಮಧ್ಯಾಹ್ನ 12 ಗಂಟೆಗೆ ಕಕ್ಕರಗೊಳ್ಳ ಗ್ರಾಮದ ಮೃತರ ಜಮೀನಿನಲ್ಲಿ ನಡೆದಿದೆ.

## ಅಪರಿಚಿತ ವಾಹನ ಡಿಕ್ಕಿ: ಸ್ಥಳದಲ್ಲೇ ಐದು ದನಗಳ ಸಾವು



**ಚಿಕ್ಕಮಗಳೂರು :** ಅಪರಿಚಿತ ವಾಹನ ಡಿಕ್ಕಿ ಹೊಡೆದು ಐದು ದನಗಳು ಸ್ಥಳದಲ್ಲೇ ಸಾವನ್ನಪ್ಪಿವೆ.

ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಕೊಟ್ಟಿಗೆಹಾರ ಸಮೀಪದ ಅತ್ತಿಗೆರೆ-ಹೆಬ್ಬರಿಗೆ ರಸ್ತೆಯಲ್ಲಿ ನಿನ್ನೆ ರಾತ್ರಿ ಈ ದುರ್ಘಟನೆ ಸಂಭವಿಸಿದೆ.

ರಾತ್ರಿ ಮೋಡಕವಿದ ವಾತಾವರಣದಲ್ಲಿ ರಸ್ತೆಯ ಮೇಲೆ ಮಲಗಿದ್ದ ದನಗಳನ್ನು ಗಮನಿಸದೆ ಅಪರಿಚಿತ ವಾಹನ ಡಿಕ್ಕಿ ಹೊಡೆದು ಪರಾರಿಯಾಗಿದೆ.

ಅಪಘಾತದ ರಭಸಕ್ಕೆ ಐದು ರಾಸುಗಳು ಸ್ಥಳದಲ್ಲೇ ಸಾವನ್ನಪ್ಪಿದ್ದು, ಎರಡು ಬದುಕುಳಿದರೂ ಗಂಭೀರ ಗಾಯಗಳಿಂದ ಬಳಲುತ್ತಿವೆ. ಘಟನೆ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

## ಕಾಮಿಡಿ ಕಿಲಾಡಿಗಳು ಖ್ಯಾತಿಯ ಚಂದ್ರಶೇಖರ ಸಿದ್ದಿ ಆತ್ಮಹತ್ಯೆ ಪ್ರಕರಣಕ್ಕೆ ತಿರುವು

**ಕಾರವಾರ:** ಕನ್ನಡದ ಕಾಮಿಡಿ ಕಿಲಾಡಿಗಳು ಖ್ಯಾತಿಯ ಚಂದ್ರಶೇಖರ್ ಸಿದ್ದಿ ಆತ್ಮಹತ್ಯೆ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದ್ದು, ಪತ್ನಿ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡ ಆರೋಪ ಕೇಳಿ ಬಂದಿದೆ. ಅವರ ಪತ್ನಿ ಪೊರಕೆ, ಕಟ್ಟಿಗೆಯಿಂದ ಚಂದ್ರಶೇಖರ ಸಿದ್ದಿಗೆ ಹಲ್ಲೆ ಮಾಡಿರುವುದು ವಿಡಿಯೋದಲ್ಲಿ ಕಂಡುಬಂದಿದೆ. ಜುಲೈ 31 ರಂದು ಮಧ್ಯಾಹ್ನ ಚಂದ್ರಶೇಖರ ಸಿದ್ದಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಪತ್ನಿ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ಅವರ ತಾಯಿ ದೂರು ನೀಡಿದ್ದರು. ಕಾಮಿಡಿ ಕಿಲಾಡಿಗಳು ನಂತರ ಚಂದ್ರಶೇಖರ ಸಿದ್ದಿ ಕಾಮಿಡಿ ಶೋ, ಕೆಲವು ಧಾರಾವಾಹಿಗಳಲ್ಲಿ ಸಣ್ಣಪುಟ್ಟ ಪಾತ್ರಗಳಲ್ಲಿ ನಟಿಸಿದ್ದು, ನಂತರ ಅವಕಾಶ ಸಿಗದೇ ನೊಂದಿದ್ದರು. ಮಾನಸಿಕ ಖಿನ್ನತೆಗೆ ಚಿಕಿತ್ಸೆ ಪಡೆದಿದ್ದರು ಎನ್ನಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲೂಕಿನ ವಜ್ರಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಮನಳ್ಳಿಯ ಸಿದ್ದಿ ಜನಾಂಗಕ್ಕೆ ಸೇರಿದ ಚಂದ್ರಶೇಖರ ಸಿದ್ದಿ(31) ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದರು. ಕಬ್ಬಿಗೆ ಗ್ರಾಮಕ್ಕೆ ಪತ್ನಿಯೊಂದಿಗೆ ಕೆಲಸಕ್ಕೆ ತೆರಳಿದ್ದ ಚಂದ್ರಶೇಖರ ಸಿದ್ದಿ ಅಲ್ಲೇ ಉಳಿದುಕೊಂಡಿದ್ದರು. ಯಲ್ಲಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇದೀಗ ದಂಪತಿ ಕಲಹವೇ ಆತ್ಮಹತ್ಯೆ ಆತ್ಮಹತ್ಯೆಗೆ ಕಾರಣವೆಂದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ. ಕಟ್ಟಿಗೆ ಪೊರಕೆಯಿಂದ ಪತ್ನಿ ಹಲ್ಲೆ ನಡೆಸಿರುವ ವಿಡಿಯೋ ವೈರಲ್ ಆಗಿದೆ.

ನನ್ನ ಮಗ ಚಂದ್ರಶೇಖರ್ ಮತ್ತು ಆತನ ಪತ್ನಿ ಕಮಲಾಕ್ಷಿಗೂ ಪದೇ ಪದೇ ಜಗಳ ಆಗುತ್ತಿತ್ತು ಎಂದು ಪುತ್ರನ ಸಾವಿನ ಬಗ್ಗೆ ಲಕ್ಷ್ಮೀ ಅನುಮಾನ ವ್ಯಕ್ತಪಡಿಸಿದ್ದರು. ನಂತರ ಮಗನ ಸಾವಿನ ಬಗ್ಗೆ ಶಂಕೆ ವ್ಯಕ್ತಪಡಿಸಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ದೂರು ಸಹ ದಾಖಲಿಸಿದ್ದರು. ಚಂದ್ರಶೇಖರ್ ತಾಯಿ ಲಕ್ಷ್ಮೀ ಗ್ರಾಮದಲ್ಲಿ ಆಶಾ ಕಾರ್ಯಕರ್ತೆಯಾಗಿ ಕೆಲಸ ಮಾಡಿಕೊಂಡಿದ್ದಾರೆ. ನಟನೆಯಲ್ಲಿ ಆಸಕ್ತಿ ಹೊಂದಿದ್ದ ಚಂದ್ರಶೇಖರ್ ಸಿದ್ದಿ ನೀನಾಸಂನಲ್ಲಿ ನಾಟಕ ತರಬೇತಿ ಪಡೆದುಕೊಂಡಿದ್ದರು. ಖಾಸಗಿ ವಾಹಿನಿಯಲ್ಲಿ ಪ್ರಸಾರವಾಗುವ ಕಾಮಿಡಿ ಕಿಲಾಡಿಗಳು ಶೋ ಜನಪ್ರಿಯತೆಯನ್ನು ತಂದುಕೊಟ್ಟಿತ್ತು. ನಂತರ ಕೆಲವು ಧಾರವಾಹಿಗಳಲ್ಲಿ ಅಭಿನಯಿಸಿದ್ದರು. ಟಿವಿಯ ರಿಯಾಲಿಟಿ ಶೋಗಳು ಹಾಗೂ ಕಿರುತೆರೆಯಲ್ಲಿ ಹೆಚ್ಚಿನ ಅವಕಾಶಗಳು ಸಿಗದ ಹಿನ್ನೆಲೆಯಲ್ಲಿ, ಊರಿಗೆ ವಾಪಸಾಗಿ ಕೂಲಿ ಕೆಲಸಕ್ಕೆ ಹೋಗುತ್ತಿದ್ದರು. ಇದರಿಂದಾಗಿ ಕಳೆದ ಜನವರಿ ತಿಂಗಳಿಂದ ಮಾನಸಿಕವಾಗಿ ಜರ್ಜರಿತನಾಗಿದ್ದ ಚಂದ್ರಶೇಖರ್

## ಚುನಾವಣಾ ಆಯೋಗದ ವಿರುದ್ಧ ಆರೋಪ ಮಾಡಿ, ದಾಖಲೆ ನೀಡದೆ ಹಿಟ್ ಅಂಡ್ ರನ್ ಪದ್ಧತಿ ಪಾಲಿಸಿದ್ದಾರೆ: ರಾಹುಲ್ ವಿರುದ್ಧ ಜೋಶಿ ವಾಗ್ದಾಳಿ

**ಬೆಂಗಳೂರು:** ಚುನಾವಣಾ ಆಯೋಗದ ವಿರುದ್ಧ ಆರೋಪ




ಮಾಡಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು, ಚುನಾವಣಾ ಆಯೋಗಕ್ಕೆ ಭೇಟಿ ನೀಡದೆ ತಮ್ಮ ಪಕ್ಷದವರಿಗೆ ಯಾವುದೇ ದಾಖಲೆಗಳನ್ನು ನೀಡದೆ ಕಳುಹಿಸಿ, ಹಿಟ್ ಅಂಡ್ ರನ್ ಪದ್ಧತಿ ಪಾಲಿಸಿದ್ದಾರೆಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ವಾಗ್ದಾಳಿ ನಡೆಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಹುಲ್ ಗಾಂಧಿ ಚುನಾವಣಾ ಆಯೋಗಕ್ಕೆ ಭೇಟಿ ನೀಡದೆ, ತಪ್ಪಿಸಿಕೊಂಡು ತಮ್ಮ ಪಕ್ಷದವರಿಗೆ ಯಾವುದೇ ದಾಖಲೆಗಳನ್ನು ನೀಡದೆ ಕಳುಹಿಸಿ, ಹಿಟ್ ಅಂಡ್ ರನ್ ಪದ್ಧತಿ ಪಾಲಿಸಿದ್ದಾರೆ. ಸಾರ್ವಜನಿಕವಾಗಿ ಇಲ್ಲ- ಸಲ್ಲದ ದೊಡ್ಡ ದೊಡ್ಡ ಸುಳ್ಳು ಹೇಳಿಕೆಗಳನ್ನು ನೀಡುತ್ತಾರೆ. ಆದರೆ, ಸಾಕ್ಷಿಗಳನ್ನು ಕೇಳಿದರೆ ಮಾಯವಾಗುತ್ತಾರೆ ಎಂದು ವ್ಯಂಗ್ಯವಾಡಿದ್ದಾರೆ.

ಈ ನಡುವೆ ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ರಾಹುಲ್ ಗಾಂಧಿ ಗುರುವಾರ ಮತಗಳ್ಳತನದ ಆರೋಪ ಮಾಡಿ, ಬೆಂಗಳೂರಿನಲ್ಲಿ ಶುಕ್ರವಾಹ ಪ್ರತಿಭಟನೆ ನಡೆಸಿದ್ದಾರೆ. ಯಾಕೆ ಪ್ರತಿಭಟನೆ ನಡೆಸಿದ್ದಾರೆ ಎಂದು ಕೇಳಿದರೆ ಅವರಿಗೆ ಗೊತ್ತಿರಲ್ಲ. ರಾಜ್ಯ ಚುನಾವಣಾ ಆಯೋಗ ಬಂದು ಸ್ಪಷ್ಟನೆ ನೀಡಿ ಎಂದು ಕೇಳಿದೆ. ಫ್ರೀಡಂ ಪಾರ್ಕ್ನಿಂದ ಆಯೋಗದ ಕಚೇರಿಗೆ ನಡೆದು ಹೋದರೆ 5 ನಿಮಿಷ. ಆದರೆ, ಆಯೋಗದ ಕಚೇರಿಗೆ ಹೋಗಿಲ್ಲ. ಬೇರೆ ಯಾರನ್ನೊ ಕಳುಹಿಸಿದ್ದಾರೆ.

ಆರೋಪ ಮಾಡಿ ಇನ್ಯಾರನ್ನೋ ಉತ್ತರ ಕೊಡಿಸಲು ಕಳಿಸಿದರೆ, ನಿಮ್ಮ ಸುಳ್ಳು ಆರೋಪಕ್ಕೆ ಆಧಾರ ಇಲ್ಲ ಎಂದು ಅರ್ಥ. ಎಲ್ಲಾ ರಾಜ್ಯಗಳ ಚುನಾವಣಾ ಆಯೋಗ ಅಫಿಡವಿಟ್ ಕೇಳಿವೆ. ಈವರೆಗೂ ಅಫಿಡವಿಟ್ ಫೈಲ್ ಮಾಡಿಲ್ಲ. ರಾಹುಲ್ ಸ್ಥಿತಿ ಹೇಗೆಂದರೆ ಸರ್ಕಾರದಲ್ಲಿ ಇದ್ದಾಗ ಲೂಟಿಯ ಅಂಗಡಿ. ಚುನಾವಣೆಯಲ್ಲಿ ಮಾತ್ರ ಅವರಿಗೆ ಪ್ರೀತಿಯ ಅಂಗಡಿ ಎಂದು ಲೇವಡಿ ಮಾಡಿದ್ದಾರೆ.

ರಾಹುಲ್ ಗಾಂಧಿ ಅವರನ್ನು ಅಧಿಕಾರದಿಂದ ಜನರು ಕೆಳಗೆ ಹಾಕಿದ ಮೇಲೆ ಸುಳ್ಳಿನ ಅಂಗಡಿ ತೆಗೆಯುತ್ತಾರೆ. ಇವರ ಅಜ್ಜಿ ತುರ್ತು ಪರಿಸ್ಥಿತಿ ಹೇರಿದವರು. ಇವರು ಸಾಂವಿಧಾನಿಕ ಸಂಸ್ಥೆಗಳ ಬಗ್ಗೆ ಮನ ಬಂದಂತೆ ಮಾತನಾಡುತ್ತಿದ್ದಾರೆಂದು ಟೀಕಿಸಿದ್ದಾರೆ.

# ದಾವಣಗೆರೆ ನಗರಕ್ಕೆ ಐಟಿ ಪಾರ್ಕ್ : ಸಂಸದರ ಮಹತ್ವದ ಸಭೆ

## ಮೂಲಭೂತ ಸೌಕರ್ಯ ಒದಗಿಸಿ, ಐಟಿ ಕಂಪನಿಗಳು ಶೀಘ್ರದಲ್ಲೇ ಕಾರ್ಯ ನಿರ್ವಹಿಸಲು ಯೋಜನೆ

**ದಾವಣಗೆರೆ:** ಜೆ.ಹೆಚ್. ಪಟೇಲ್ ಬಡಾವಣೆಯಲ್ಲಿರುವ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ ಆಫ್ ಇಂಡಿಯಾ (ಎಸ್‌ಟಿಪಿಐ) ಕೇಂದ್ರದಲ್ಲಿ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ನೇತೃತ್ವದಲ್ಲಿ ದಾವಣ ಗೆರೆಯಲ್ಲಿ ಎಸ್‌ಟಿಪಿಐ ಚಟುವಟಿಕೆಗಳಿಗೆ ಉತ್ತೇ ಜನ ಹಾಗೂ ಐಟಿ ಪಾರ್ಕ್ ಸ್ಥಾಪನೆ ಕುರಿತಂತೆ ಶನಿವಾರ ಮಹತ್ವದ ಸಭೆ ನಡೆಸಲಾಯಿತು.



ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಇಂಜಿನಿಯರಿಂಗ್, ಮೆಡಿಕಲ್, ಡೆಂಟಲ್, ಎಂ.ಬಿ.ಎ., ಪಾಲಿಟೆಕ್ನಿಕ್ ಕಾಲೇಜುಗಳ ಪ್ರತಿನಿಧಿಗಳು ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಮುಖ್ಯಸ್ಥರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಈ ಮಹತ್ವದ ಸಭೆಯಲ್ಲಿ, ಎಸ್‌ಟಿಪಿಐ ನಿರ್ದೇಶಕ ಡಾ. ಸಂಜಯ್ ತ್ಯಾಗಿ ಅವರು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಭಾಗವಹಿಸಿ, ಮುಂದಿನ ಒಂದು ವರ್ಷದ ಕಾರ್ಯ ಚಟುವಟಿಕೆಗಳ ಕ್ಯಾಲೆಂಡರ್ ಬಗ್ಗೆ ಚರ್ಚೆ ನಡೆಸಿ ಅಧಿಕೃತ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಸಂಸದೆ ಡಾ. ಪ್ರಭಾ ಅವರು, ಮೆಡಿಕಲ್ ಕಾಲೇಜುಗಳು ಹಾಗೂ ಆಸ್ಪತ್ರೆಗಳಲ್ಲಿ ಹೆಲ್ತ್ ಕೇರ್ ಸೆಂಟ-ರ್ ಆಫ್ ಎಕ್ಸಲೆನ್ಸ್ ಸ್ಥಾಪಿಸುವ ಕುರಿತು ಹಾಗೂ ವಿಶ್ವವಿದ್ಯಾಲಯ ಜೊತೆಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಎಐ ಸೆಂಟರ್ ಆಫ್ ಎಕ್ಸಲೆನ್ಸ್ ಸ್ಥಾಪಿಸುವ ಬಗ್ಗೆ ಎಸ್ ಟಿಪಿಐ ಅಧಿಕಾರಿಗಳೊಂ ದಿಗೆ ಚರ್ಚೆ ನಡೆಸಿದರು. ಅದೇ ರೀತಿ ದಾವಣಗೆರೆಯಲ್ಲಿ ಡಾಟಾ ಸೆಂಟರ್‌ಗಳನ್ನು ಸ್ಥಾಪಿಸುವ ಬಗ್ಗೆಯೂ ಸಭೆಯ ಗಮನಕ್ಕೆ ತಂದರು.

ಸಭೆಯಲ್ಲಿ ಸರ್ಕಾರಿ, ಅರೆ ಸರ್ಕಾರಿ, ಖಾಸಗಿ ಸಹಭಾಗಿತ್ವದಲ್ಲಿ ಮೂಲಭೂತ ಸೌಕರ್ಯ ಒದಗಿಸಿ ತಾತ್ಕಾಲಿಕವಾಗಿ ಐಟಿ ಕಂಪನಿಗಳು ಶೀಘ್ರದಲ್ಲೇ ಕಾರ್ಯ ನಿರ್ವಹಿಸಲು ಯೋಜನೆ ರೂಪಿಸಲಾಯಿತು.

ರಾಜ್ಯ ಸರ್ಕಾರದ ಐಟಿಬಿಟಿ ಮಂತ್ರಾಲಯದ 'ಬಿಯಾಂಡ್ ಬೆಂಗಳೂರು' ಕಲ್ಪನೆ ಯಡಿಯಲ್ಲಿ ಸಾಫ್ಟ್‌ವೇರ್ ಕಂಪನಿಗಳನ್ನು ಬೆಂಗಳೂರಿನಿಂದ ಹೊರಗಡೆ ಕರೆ ತರಲು ಕಂಪನಿಗಳನ್ನು ಉತ್ತೇಜಿಸುವ ನಿಯಮಗಳ ಬಗ್ಗೆಯೂ ಚರ್ಚೆ ನಡೆಯಿತು. ಎಐ, ರೋಬೋಟಿಕ್ಸ್, ಕ್ವಾಂಟಮ್ ಕಂಪ್ಯೂಟರಿಂಗ್, ಡ್ರೋಣ್ ಪ್ರಯೋಗಾಲಯಗಳನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಸುಸಜ್ಜಿತಗೊಳಿಸುವ ತೀರ್ಮಾನ ಕೈಗೊಳ್ಳಲಾಯಿತು.

ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಮಾತನಾಡಿ, ಇದೇ ದಿನಾಂಕ 14 ರಂದು ದಾವಣಗೆರೆ ಜಿಲ್ಲೆಯ ಎಲ್ಲಾ ಬೃಹತ್, ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳ ಉದ್ಯಮಿಗಳ ಸಭೆಯನ್ನು ಕರೆಯಲಾಗಿದೆ. ಈ ಸಭೆಯಲ್ಲಿ ಅಭಿಪ್ರಾಯ ಪಡೆದು 'ವಿಜನ್ ದಾವಣಗೆರೆಗೆ' ಕೈಜೋಡಿಸಲು ಆಹ್ವಾನಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ದಾವಣಗೆರೆ ಜಿಲ್ಲೆಯಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ 30 ಸಾವಿರ ಚದುರಡಿ ಕಟ್ಟಡದಲ್ಲಿ ಮಲ್ಟಿಸ್ಕಿಲ್ ಟ್ರೈನಿಂಗ್ ಸೆಂಟರ್ ಹಾಗೂ ಮಾಡಲ್ ಕೆರಿಯರ್ ಕೌನ್ಸಿಲ್ ಸ್ಥಾಪನೆ ಮಾಡಲು ಸ್ಥಳ ನಿಗದಿಪಡಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ಶೀಘ್ರದಲ್ಲೇ ಎಸ್ ಟಿಪಿಐ, ಕೇಡರ್ ಹಾಗೂ ಕಿಯೋನಿಕ್ಸ್ ನ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸುವ ಬಗ್ಗೆ ತೀರ್ಮಾನಿಸಲಾಯಿತು.

ಸಭೆಯ ನಂತರ ಸಂಸದರು ಎಸ್‌ಟಿಪಿಐಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಕಂಪನಿಗಳು ಹಾಗೂ ಸ್ಟಾರ್ಟ್‌ಅಪ್‌ಗಳಿಗೆ ಭೇಟಿ ನೀಡಿ, ಉದ್ಯೋಗಿಗಳೊಂದಿಗೆ ನೇರ ಸಂವಾದ ನಡೆಸಿದರು.

# ಅಭಿವೃದ್ಧಿ ನೋಡಿ ಸಹಿಸದೇ ಬಾಯಿ ಚಪಲಕ್ಕೆ ಇಲ್ಲ ಸಲ್ಲದ ಆರೋಪ

## ಕಿಡಿ ಕಾರಿದ ಜಗಳೂರು ಶಾಸಕ ಬಿ. ದೇವೇಂದ್ರಪ್ಪ



**ಜಗಳೂರು:** ನನ್ನ ಅಭಿವೃದ್ಧಿ ಕೆಲಸಗಳನ್ನು ನೋಡಿ ಸಹಿಸದವರು ಬಾಯಿ ಚಪಲಕ್ಕಾಗಿ ಇಲ್ಲ ಸಲ್ಲದ ಆರೋಪ ಮಾಡುತ್ತಿದ್ದಾರೆ ಎಂದು ಶಾಸಕ ಬಿ. ದೇವೇಂದ್ರಪ್ಪ ತಿಳಿಸಿದರು.

ಪಟ್ಟಣದಲ್ಲಿ 2024-25 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಯೋಜನೆ ಅಡಿಯಲ್ಲಿ 8 ಕೋಟಿ ರೂ. ವೆಚ್ಚದ ವಿವಿಧ ವಾರ್ಡ್‌ಗಳಲ್ಲಿ ಚರಂಡಿ, ಸಿಸಿ ರಸ್ತೆ ಕಾಮಗಾರಿ. ಬಿಳಿಚೋಡು ಹೋಬಳಿಯ ಬಗ್ಗೇನಹಳ್ಳಿ ಗ್ರಾಮದಲ್ಲಿ ಅಲ್ಪಸಂಖ್ಯಾತರ ಮುರಾರ್ಜಿ ದೇಸಾಯಿ ವಸತಿ ಶಾಲೆಗೆ 16 ಕೋಟಿ, ಜಗಳೂರಿನಿಂದ ಹಿರೇ ಮೇಗಳಗೆರೆ ರಸ್ತೆ ಮರು ನಿರ್ಮಾಣಕ್ಕೆ 5 ಕೋಟೀ ರೂ. ವೆಚ್ಚದ ಕಾಮ ಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ನನ್ನ ಬಗ್ಗೆ ಇಲ್ಲ ಸಲ್ಲದ ಆರೋಪಗಳನ್ನು ಮಾಡಿದರೆ ನಾನು ಸುಮ್ಮನಿರುವುದಿಲ್ಲ. ಮಾಜಿ ಶಾಸಕರು ನನ್ನ ಬಗ್ಗೆ ಮಾತನಾಡಿದ್ದಾರೆ. ಶಾಸಕರು ಪೌರ ಕಾರ್ಮಿಕರ ಜೊತೆ ತಿಂಗಳಿಗೊಮ್ಮೆ ಕಸ ಗುಡಿಸಲು ಹೋಗುತ್ತಿದ್ದರು ಎಂದು ಕೇಳಿದ್ದಾರಂತೆ. ಪ್ರಧಾನಿ ನರೇಂದ್ರ ಮೋದಿ ಅವರು ಸ್ವಚ್ಛ ಭಾರತ್ ಯೋಜನೆಯಲ್ಲಿ ಕಸಗುಡಿಸುತ್ತಾರೆಯೇ, ಯೋಗ ದಿನಾಚರಣೆ ಮಾಡುತ್ತಾರಲ್ಲ ಅದು ಪ್ರಚಾರಕ್ಕಾಗಿ ಮಾಡುತ್ತಾರೆಯೇ ಎಂದು ಮಾಜಿ ಶಾಸಕರಿಗೆ ಖಾರವಾಗಿ ಪ್ರಶ್ನಿಸಿದರು. ಕಳೆದ 30 ವರ್ಷಗಳ ಹಿಂದೆ ಚಿತ್ರದುರ್ಗದಲ್ಲಿ ಸಾಹಿತ್ಯ ಸಮ್ಮೇಳನ ನಡೆದಿತ್ತು. ನಾನು ಸಾಹಿತ್ಯ ಸಮ್ಮೇಳನವನ್ನು ತಾಲ್ಲೂಕಿನಲ್ಲಿ ನಡೆಸಿ ಯಶಸ್ವಿಯಾಗಿದ್ದೇನೆ. ಇದನ್ನು ಸಹಿಸಿಕೊಳ್ಳಲಾಗದೆ ಕೆಲವರು ಅಪಪ್ರಚಾರ ಮಾಡಿದರು ಎಂದು ಗುಡುಗಿದರು.

ಪಟ್ಟಣದ ಅಭಿವೃದ್ಧಿ ಕಾಮಗಾರಿಗಳಿಗೆ ಪಟ್ಟಣದ ಪ್ರಥಮ ಪ್ರಜೆ ಪ.ಪಂ. ಅಧ್ಯಕ್ಷ ನವೀನ್ ಕುಮಾರ್ ಅವರ ಗೈರು ಬೇಸರ ತಂದಿದೆ. ಜನರಿಂದ ಆಯ್ಕೆಯಾಗಿರುವ ಅವರು ಕೇವಲ ರಾಜಕೀಯ ಮಾಡಲು ಅಧ್ಯಕ್ಷರಾಗಿದ್ದಾರಾ ? ಎಂದು ಪ್ರಶ್ನಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಶೀರ್ ಮಾತನಾಡಿ, ಶಾಸಕರು ತಾಲ್ಲೂಕಿಗೆ 600 ಕೋಟಿ ರೂ. ಅನುದಾನ ತಂದಿದ್ದಾರೆ. ಸುಮಾರು 15 ವರ್ಷಗಳಿಂದ ಆಗದೇ ಇರುವ ರಸ್ತೆಗಳು. ಪ್ರತಿ ವಾರ್ಡ್ ಗಳಲ್ಲಿ ಸಿಸಿ ರಸ್ತೆ ಚರಂಡಿ ನಿರ್ಮಾಣ ಮಾಡಲಾಗುತ್ತಿದೆ. ಶಾಸಕರು ಮಾಡುತ್ತಿರುವ ಅಭಿವೃದ್ಧಿ ಕೆಲಸಗಳು ಜನರ ಕಣ್ಣಿಗೆ ಕಾಣುತ್ತಿವೆ ಎಂದು ತಿಳಿಸಿದರು. ಸಮಾರಂಭದಲ್ಲಿ ಪ.ಪಂ. ಸದಸ್ಯರಾದ ರಮೇಶ್‌ರೆಡ್ಡಿ, ಮಂಜುನಾಥ್, ಮಹಮದ್‌ಅಲಿ, ಆದರ್ಶ, ಕುರಿ ಜಯಣ್ಣ, ಪಾಪ ಲಿಂಗಪ್ಪ, ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ್, ಎಇಇ ಶಿವಮೂರ್ತಿ, ಎ.ಇ. ವಿಜಯ್‌ಕುಮಾರ್ ನಾಯ್ಕ್, ಅಲ್ಪಸಂಖ್ಯಾತರ ಇಲಾಖೆ ಎಇ ನಿರಂಜನ್, ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ.ಕೀರ್ತಿಕುಮಾರ್, ಪಲ್ಲಾಗಟ್ಟೆ ಶೇಖರಪ್ಪ, ಬಿ.ಮಹೇಶ್ವರಪ್ಪ ಸೇರಿದಂತೆ ಅನೇಕರು ಇದ್ದರು.

## ವಿಶೇಷ ಮಕ್ಕಳನ್ನು ಸ್ವಾವಲಂಬಿಯಾಗಿಸಿ




**ಗದಗ:** ವಿಶೇಷ ಲಾಲನೆ, ಪೋಷಣೆ ಅಗತ್ಯವುಳ್ಳ ಮಕ್ಕಳಿಗೆ ಕಲಿಕಾ ಕೇಂದ್ರದ ಜತೆಗೆ ಪಾಲಕರಾದವರೂ ಕೂಡ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಶ್ರಮವಹಿಸಬೇಕು. ಇದಕ್ಕಾಗಿ ಸಮಯ ಮೀಸಲಿಟ್ಟು, ಅಗತ್ಯ ಚಿಕಿತ್ಸೆ, ವಿವಿಧ ವ್ಯಾಯಾಮಗಳ ಮೂಲಕ ಅವರನ್ನು ಸ್ವಾವಲಂಬಿಯಾಗಿ ಬದುಕುವಂತೆ ಪ್ರೇರೇಪಿಸಬೇಕು ಎಂದು ಜಿಮ್ಸ್‌ನ ಮನೋವೈದ್ಯಾಧಿಕಾರಿ ಡಾ.ಸೋಮಶೇಖರ ಬಿಜ್ಜಳ ಹೇಳಿದರು.

ಅವರು ಇಲ್ಲಿನ ಮುಳಗುಂದ ನಾಕಾ ಸಮೀಪದ ಬಿ ಡಿ ತಟ್ಟಿ (ಅಣ್ಣಾವರು) ಮೆಮೋರಿಯಲ್ ಚಾರಿಟೇಬಲ್ ಟ್ರಸ್ಟ್ ಆಶ್ರಯದಲ್ಲಿ ನಡೆಯುತ್ತಿರುವ 'ಏಕ್ ಪ್ರಯಾಸ್ ವಿಶೇಷ ಮಕ್ಕಳ ಕಲಿಕಾ ಕೇಂದ್ರ'ದಲ್ಲಿ ಗುರುವಾರ ಆಯೋಜಿಸಿದ್ದ 'ವಿಶ್ವ ಪರಿಸರ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ, ಅವರನ್ನು ವಿವಿಧ ಚಟುವಟಿಕೆಯಲ್ಲಿ ಪಾಲ್ಗೊಳ್ಳುವಂತೆ ಮನೆಯ ಪ್ರತಿಯೊಬ್ಬ ಸದಸ್ಯರೂ ಸಹಕಾರ ನೀಡಬೇಕು. ಇದು ನಿತ್ಯ ನಿರಂತರವಾಗಿ ನಡೆದಾಗ ಮಾತ್ರ ಮುಂದೊಂದು ದಿನ ಆ ಮಗು ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದರು.

ಲಯನ್ಸ್ ಕ್ಲಬ್‌ನ ಗವರ್ನರ್ ಶ್ರೀಮತಿ ಸುಗ್ಗಲಾ ಯಳಮಲಿ ಅವರು ಮಾತನಾಡಿ, ಇಂತಹ ವಿಶೇಷ ಅಗತ್ಯಯತೆಯುಳ್ಳ ಮಕ್ಕಳ ಆರೋಗ್ಯ ತಪಾಸಣೆಗಾಗಿ ಜಿಮ್ಸ್ ಆಸ್ಪತ್ರೆಯಲ್ಲಿ ಒಂದು ಪ್ರತ್ಯೇಕ ಸಮಯ, ದಿನ ನಿಗದಿಪಡಿಸಬೇಕು. ಅದರಲ್ಲೂ ವಿಶೇಷವಾಗಿ ನಿಯಮಿತವಾಗಿ ವೈದ್ಯರ ತಂಡವೇ ಇಂತಹ ಕೇಂದ್ರಗಳಿಗೆ ಆಗಮಿಸಿ, ತಪಾಸಣೆ ನಡೆಸುವಂತಾಗಬೇಕು ಎಂದರು.

# ಹೆಚ್ಚುತ್ತಿರುವ ಹೃದಯಾಘಾತ : ಸಂಘದ ಆಶ್ರಯದಲ್ಲಿ ತಜ್ಞರ ಜತೆ ಪತ್ರಕರ್ತರ ಸಂವಾದ

**ಚಿಕ್ಕಬಳ್ಳಾಪುರ:** ಹೆತ್ತವರನ್ನು ಆಯ್ಕೆ ಮಾಡಿಕೊಳ್ಳುವ ಹಕ್ಕು ಯಾವ ಮಕ್ಕಳ ಕೈಯಲ್ಲಿಯೂ ಇರುವುದಿಲ್ಲ. ಆದರೆ ಬೆಳೆಯುವಾಗ, ಬೆಳೆದು ಬದುಕು ಕಟ್ಟುಕೊಳ್ಳುವಾಗ ಉತ್ತಮ ಜೀವನ ಶೈಲಿ ಹೊಂದುವುದು, ಆರೋಗ್ಯ ಕಾಪಾಡಿಕೊಳ್ಳುವುದು ನಮ್ಮ ಕೈಯಲ್ಲಿಯೇ ಇರುತ್ತದೆ ಎಂದು ಸತ್ಯಸಾಯಿ ಮಾನವ ಅಭ್ಯುದಯ ವೈದ್ಯಕೀಯ ವಿಶ್ವವಿದ್ಯಾಲಯ ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ.ಸಿ.ಎಸ್. ಹಿರೇಮಠ್ ತಿಳಿಸಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಹುಣ್ಣಿಮೆ ಅಂಗವಾಗಿ ನಡೆದ ಪತ್ರಕರ್ತರ ಸಾಂಸ್ಕೃತಿಕ ಚಿಂತನಾ ಸಮ್ಮಿಲನದ ಭಾಗವಾಗಿ ಎರಡನೇ ತಿಂಗಳ ಕಾರ್ಯಕ್ರಮದಲ್ಲಿ ಹೆಚ್ಚುತ್ತಿರುವ ಹೃದಯಾಘಾತ ಸಂಬಂಧ ತಜ್ಞರ ಜತೆ ಸಂವಾದಕ್ಕೆ ಚಾಲನೆ ನೀಡಿ ಅವರು ಮಾತನಾಡಿ ದರು.

ಯುವಕರು ಮತ್ತು ಮಕ್ಕಳಲ್ಲಿ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಹುಣ್ಣಿಮೆ ಅಂಗವಾಗಿ ತಜ್ಞವೈದ್ಯರು ಮತ್ತು ಮತ್ರಕರ್ತರ ಜತೆ ಮುಖಾಮುಖಿ ಸಂವಾದ ಏರ್ಪಡಿಸಿ ಈ ಬಗ್ಗೆ ಸಾಕಷ್ಟು ಖಚಿತ ಮಾಹಿತಿಯನ್ನು ಪಡೆದು ಕೊಳ್ಳುವಲ್ಲಿ ಯಶಸ್ವಿಯಾದರು.

ಸಂವಾದಕ್ಕೂ ಮುನ್ನ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಹೃದ್ರೋಗ ತಜ್ಞ ಡಾ.ಸಿ.ಎಸ್.ಹಿರೇಮಠ್, ಕೊರೋನಾ ನಂತರದ ಕಾಲದಲ್ಲಿ ದೇಶದಲ್ಲಿ ಹೃದ್ರೋಗ ಸಮಸ್ಯೆ ಯುವಕರು ಮತ್ತು ಮಕ್ಕಳಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದೆ. ಹೃದಯಸ್ತಂಭನ ಭಾರತದ ಬಹುದೊಡ್ಡ ಸಮಸ್ಯೆಯಾಗಿದೆ. ಇದನ್ನು ಹೋಗಲಾಡಿಸಲು ನಮ್ಮ ಸರಕಾರಗಳು, ಸಮಾಜ, ಮಠ ಮಾನ್ಯಗಳು ಮತ್ತು ಸಂಘಸಂಸ್ಥೆಗಳು ಹೆಚ್ಚಿನ ರೀತಿಯಲ್ಲಿ ಶ್ರಮಿಸುತ್ತಿವೆ. ಜನತೆ ಕೂಡ ಇದನ್ನು ಅರಿತು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಮುಂದಾಗುವುದು ಅಗತ್ಯ ಎಂದರು.

ಆಧುನಿಕ ಜೀವನಶೈಲಿಯಿಂದಾಗಿ ಹಲವಾರು ರೋಗಗಳಿಗೆ ನಾವು ತುತ್ತಾಗುತ್ತಿದ್ದೇವೆ. ಹೃದ್ರೋಗಕ್ಕೆ ಪ್ರಧಾನವಾಗಿ ಹೆಚ್ಚಿನ ರಕ್ತದೊತ್ತಡ, ಹೆಚ್ಚಿನ ಕೊಲೆಸ್ಟ್ರಾಲ್, ಧೂಮಪಾನ, ಮಧುಮೇಹ, ಕರಿದ ಪದಾರ್ಥಗಳು ಮತ್ತು ಕ್ರಿಯಾಶೀಲವಲ್ಲದ ಜೀವನ ಶೈಲಿ ಕಾರಣವಾಗಿದೆ. ಇದನ್ನು ತಪ್ಪಿಸಬೇಕಾದರೆ ಧ್ಯಾನ, ಯೋಗ, ನಿತ್ಯವ್ಯಾಯಾಮ, ಜಂಕ್ ಫುಡ್ ರಹಿತ ಪೌಷ್ಟಿಕ ಆಹಾರ ಸೇವನೆ, ಕಾಲಕಾಲಕ್ಕೆ ತಜ್ಞ ವೈದ್ಯರಿಂದ ತಪಾಸಣೆಯ ಅಗತ್ಯವಿದೆ ಎಂದರು.

ಮುದ್ದೇನಹಳ್ಳಿಯ ಸದ್ಗುರು ಮಧುಸೂದನ್ ಸಾಯಿ ಮಾನವ ಅಭ್ಯುದಯ ಆಸ್ಪತ್ರೆಯಲ್ಲಿ ಪತ್ರಕರ್ತರಿಗಾಗಿ ಒಂದು ದಿನ ಹೃದ್ರೋಗ ತಪಾಸಣೆ ಮಾಡಲು ವ್ಯವಸ್ಥೆ ಮಾಡಲಾಗುವುದು. ಆಸಕ್ತರು ಹೆಸರು ನೊಂದಾಯಿಸಿಕೊಟ್ಟರೆ ಆದಷ್ಟು ಶೀಘ್ರವೇ ಇದಕ್ಕೆ ಬೇಕಾದ ಕ್ರಮಗಳನ್ನು ಮುಗಿಸಲಾಗುವುದು. ಈವೇಳೆ ಹೃದಯಾಘಾತ ಪತ್ತೆ ಹಚ್ಚುವ ಹಾಗೂ ಚಿಕಿತ್ಸೆಪೂರ್ವ ಕೈಗೊಳ್ಳ ಬೇಕಾದ ತಪಾಸಣಾ ಕ್ರಮಗಳ ಬಗ್ಗೆ ತರಬೇತಿ ನೀಡಲಾಗುವುದು ಎಂದರು.

ಹೃದಯಾಘಾತಕ್ಕೆ ಒಳಗಾಗುವ ಯಾರೇ ಆಗಲಿ ಹತ್ತಿರದ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಪಡೆದು ಈ ಘಟನೆ ಆದ 3 ಗಂಟೆಯ ಒಳಗೆ ಸೂಕ್ತ ಮತ್ತು ಸಮರ್ಥ ಆಸ್ಪತ್ರೆಗೆ ರೋಗಿಯನ್ನು ಕರೆದೊಯ್ದ-ರೆ ಮಾತ್ರ ಅಮೂಲ್ಯ ಜೀವ ಉಳಿಸಬಹುದು. ಸತ್ಯಸಾಯಿ ಸರಳ ಮೆಮೋರಿಯಲ್ ಆಸ್ಪತ್ರೆಯಲ್ಲಿ ಕೂಡ ಹೃದಯಾಘಾತಕ್ಕೆ ಚಿಕಿತ್ಸೆ ನೀಡಲಾಗುವುದು. ಈಭಾಗದ ಜನತೆ ಇದರ ಸದುಪಯೋಗ ಪಡಿಸಿಕೊಳ್ಳ ಬಹುದು ಎಂದು ಕೋರಿದರು.

ಮಕ್ಕಳ ಹೃದ್ರೋಗ ತಜ್ಞೆ ಡಾ.ಆನಿ ಮಾತನಾಡಿ, ಮಕ್ಕಳಲ್ಲಿ ವಂಶಪಾರಂಪರ್ಯವಾಗಿ ಬರುವ ಹೃದ್ರೋಗದ ಸಮಸ್ಯೆ, ಕಾರಣ ಪರಿಣಾಮಗಳ ಬಗ್ಗೆ ತಿಳಿಸಿಕೊಟ್ಟರು.

ಸಂಘದ ಜಿಲ್ಲಾಧ್ಯಕ್ಷ ಎಂ.ಜಯರಾಮ್ ಮಾತನಾಡಿ ಬಿಡುವಿಲ್ಲದ ವೇಳೆಯಲ್ಲಿಯೂ ನಮ್ಮ ಮನವಿ ಮೇರೆಗೆ ಹುಣ್ಣಿಮೆ ಕಾರ್ಯಕ್ರಮಕ್ಕೆ ಬಂದು ಹೃದ್ರೋಗ ಸಂಬಂಧಿ ಖಾಯಿಲೆಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿ, ನಂತರ ನಡೆದ ಸಂವಾದದಲ್ಲಿ ಪತ್ರಕರ್ತರು ಎತ್ತಿದ ಹಲವು ಪ್ರಶ್ನೆಗಳಿಗೆ ಸಮಾಧಾನದಿಂದ ಉತ್ತರ ನೀಡಿದ್ದಾರೆ. ಇಬ್ಬರೂ ವೈದ್ಯರಿಗೆ ಸಂಘವು ಆಭಾರಿಯಾಗಿದೆ ಎಂದರು.

ಹುಣ್ಣಿಮೆ ಕಾರ್ಯಕ್ರಮದಲ್ಲಿ ಹಾಡುಗಾರಿಕೆ ನಡೆಸಿಕೊಟ್ಟ ಪ್ರೌಢಶಾಲೆ ಶಿಕ್ಷಕ ನಾರಾಯಣಸ್ವಾಮಿ, ಜನಕಲಾರಂಗದ ವೆಂಕಟರಾಮು, ನಿಲುವುರಾತಹಳ್ಳಿ ನಾರಾಯಣಸ್ವಾಮಿ ಅವರನ್ನು ಇದೇ ವೇಳೆ ಪ್ರಮಾಣಪತ್ರ ನೀಡಿ ಪ್ರೋತ್ಸಾಹಿಸಲಾಯಿತು. 2ನೇ ತಿಂಗಳ ಹುಣ್ಣಿಮೆ ಕಾರ್ಯಕ್ರಮದ ನಿರೂಪಣೆಯನ್ನು ಮುನಿರಾಜು ಎಂ ಅರಿಕೆರೆ ಮಾಡಿದರೆ, ಸದಾಶಿವ ಬಿ ಆರಾಧ್ಯ ಸ್ವಾಗತಿಸಿ ವಂದಿಸಿದರು.

ಈ ವೇಳೆ ಸಂಘದ ಪ್ರಧಾನ ಕಾರ್ಯದರ್ಶಿ ಬಾಲಕೃಷ್ಣ, ಖಜಾಂಚಿ ರವಿಕುಮಾರ್, ಹಿರಿಯ ಪತ್ರಕರ್ತರು, ಸಂಘದ ಎಲ್ಲಾ ಸದಸ್ಯರು ಹಾಜರಿದ್ದರು.

# ಬೆಂಗಳೂರು ಮೆಟ್ರೋಗೆ ಕರ್ನಾಟಕ ಕೇಂದ್ರಕ್ಕಿಂತ ಹೆಚ್ಚಿನ ಹಣ ಖರ್ಚು ಮಾಡುತ್ತಿದೆ: ಸಿದ್ದರಾಮಯ್ಯ

**ಬೆಂಗಳೂರು:** ಬೆಂಗಳೂರಿನ ನಮ್ಮ ಮೆಟ್ರೋ ಜಾಲದ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸಮನಾಗಿ ಹಣಕಾಸು ಒದಗಿಸಬೇಕಿದ್ದರೂ, ರಾಜ್ಯವು ಕೇಂದ್ರಕ್ಕಿಂತ ಹೆಚ್ಚಿನ ಹಣವನ್ನು ಖರ್ಚು ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಹೇಳಿದರು.

ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮೆಟ್ರೋ ಹಂತ-3 ಯೋಜನೆಯ ಶಿಲಾನ್ಯಾಸ ಸಮಾರಂಭದಲ್ಲಿ ವೇದಿಕೆ ಹಂಚಿಕೊಂಡಿದ್ದರು.

ಕೇಂದ್ರ ಸಚಿವರಾದ ಮನೋಹರ್ ಲಾಲ್ ಖಟ್ಟರ್ ಮತ್ತು ಅಶ್ವಿನಿ ವೈಷ್ಣವ್ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಭಾಗವಹಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಸಿದ್ದರಾಮಯ್ಯ, ಒಪ್ಪಂದದ ಪ್ರಕಾರ ಮೆಟ್ರೋ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮಾನವಾಗಿ ಹಣವನ್ನು ನೀಡಬೇಕಾಗಿದೆ. ಆದರೆ, 'ರಾಜ್ಯವು ಈ ಯೋಜನೆಗೆ




ಹೆಚ್ಚಿನ ಹಣ ಖರ್ಚು ಮಾಡುತ್ತಿದೆ' ಎಂದು ಹೇಳಿದರು.

ಅದರಲ್ಲಿ ಹೆಚ್ಚಿನ ಭಾಗ ಸಾಲ ಮತ್ತು ಷೇರುಗಳ ರೂಪದಲ್ಲಿ ಬರುತ್ತದೆ. ಇದನ್ನು ರಾಜ್ಯವು ಬಡ್ಡಿಯೊಂದಿಗೆ ಮರುಪಾವತಿಸಬೇಕು. ಇಲ್ಲಿಯವರೆಗೆ, 3,987 ಕೋಟಿ ರೂ.ಗಳನ್ನು ಮರುಪಾವತಿಸಲಾಗಿದೆ ಎಂದು ಅವರು ಹೇಳಿದರು. ಇದೇ ವೇಳೆ ಕೇಂದ್ರದ ತಾಂತ್ರಿಕ ಮತ್ತು ಆರ್ಥಿಕ ಸಹಾಯವನ್ನು ಶ್ಲಾಘಿಸಿದರು.

ಮುಖ್ಯಮಂತ್ರಿ ಪ್ರಕಾರ, 96.10 ಕಿ.ಮೀ ಮೆಟ್ರೋ ಮಾರ್ಗಗಳು ಪೂರ್ಣಗೊಂಡಿವೆ. ಇದಕ್ಕೆ ರಾಜ್ಯವು 25,387 ಕೋಟಿ ರೂ. ಮತ್ತು ಕೇಂದ್ರವು 7,468.86 ಕೋಟಿ ರೂ. ಖರ್ಚು ಮಾಡಿದೆ. 19.15 ಕಿ.ಮೀ ಉದ್ದದ ಹಳದಿ ಮಾರ್ಗವನ್ನು 7,610 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ಇದು ಪ್ರತಿದಿನ 7.5 ಲಕ್ಷ ಪ್ರಯಾಣಿಕರಿಗೆ ಪ್ರಯೋಜನ ನೀಡುತ್ತದೆ ಎಂದು ಅವರು ಹೇಳಿದರು.

ಸದ್ಯ ಒಂಬತ್ತು ಲಕ್ಷ ಜನರು ಮೆಟ್ರೋ ಬಳಸುತ್ತಿದ್ದು, ಹಳದಿ ಮಾರ್ಗ ಕಾರ್ಯಾರಂಭವಾದ ನಂತರ ಈ ಸಂಖ್ಯೆ 12.5 ಲಕ್ಷಕ್ಕೆ ಏರುವ ನಿರೀಕ್ಷೆಯಿದೆ. ಬೆಂಗಳೂರಿನ ತ್ವರಿತ ಬೆಳವಣಿಗೆ ಮತ್ತು ಭಾರಿ ಸಂಚಾರದಿಂದಾಗಿ ನಗರಕ್ಕೆ ಮೆಟ್ರೋ ಅತ್ಯಗತ್ಯವಾಗಿದೆ. 2030ರ ವೇಳೆಗೆ ಮೆಟ್ರೋ ಜಾಲವನ್ನು 220 ಕಿ.ಮೀಗೆ ವಿಸ್ತರಿಸಲು ಯೋಜಿಸಲಾಗಿದ್ದು, 30 ಲಕ್ಷ ದೈನಂದಿನ ಪ್ರಯಾಣಿಕರಿಗೆ ಅನುಕೂಲವಾಗಲಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಹಂತ 1, 2, 2ಂ ಮತ್ತು 2ಃ ಪೂರ್ಣಗೊಂಡಿವೆ; ಹಂತ-3 ಕ್ಕೆ ಶಿಲಾನ್ಯಾಸ ನೆರವೇರಿಸಲಾಗಿದೆ ಮತ್ತು ಕೇಂದ್ರವು ಅನುಮತಿ ನೀಡಿದ ನಂತರ ಹಂತ-3ಂ ಪ್ರಾರಂಭವಾಗುತ್ತದೆ. ನಾಲ್ಕನೇ ಹಂತದ ಮೆಟ್ರೋ 53 ಕಿ.ಮೀ. ಕ್ರಮಿಸಲಿದೆ ಎಂದರು.

ಮಹಾರಾಷ್ಟ್ರ ಮತ್ತು ಗುಜರಾತ್‌ಗೆ ನೀಡಿದ ಆದ್ಯತೆಯನ್ನು ಕರ್ನಾಟಕಕ್ಕೂ ವಿಸ್ತರಿಸುವಂತೆ ಅವರು ಪ್ರಧಾನಿಯನ್ನು ಒತ್ತಾಯಿಸಿದರು ಮತ್ತು ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲನ್ನು ಪ್ರಾರಂಭಿಸಿದ್ದಕ್ಕಾಗಿ ಧನ್ಯವಾದ ಅರ್ಪಿಸಿದರು.

ಮಹದಾಯಿ ಯೋಜನೆ: ಅನುಮತಿ ನೀಡದಿರಲು ಕೇಂದ್ರದ ನಿರ್ಧಾರ

# ಕರ್ನಾಟಕದ ಜನತೆಗೆ ಬಗೆಯುವ ದ್ರೋಹ–ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ಮಹದಾಯಿ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂಬ ಕೇಂದ್ರ ಸರ್ಕಾರದ ನಿರ್ಧಾರ ಕರ್ನಾಟಕದ ಜನತೆಗೆ ಬಗೆಯುವ ದ್ರೋಹವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಹೇಳಿದ್ದಾರೆ. ಕೇಂದ್ರ ಸರ್ಕಾರದ ನಿರ್ಧಾರವನ್ನು ಕರ್ನಾಟಕ ಸರ್ಕಾರ ಅತ್ಯುಗ್ರವಾಗಿ ಖಂಡಿಸುವುದು ಮಾತ್ರವಲ್ಲ, ಈ ಅನ್ಯಾಯದ ವಿರುದ್ಧ ಸಮಸ್ತ ಕನ್ನಡಿಗರೊಂದಿಗೆ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ, ಮಹದಾಯಿ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂದು ಕೇಂದ್ರ ಪರಿಸರ ಮತ್ತು ಅರಣ್ಯ ಖಾತೆ ಸಚಿವ ಭೂಪೇಂದ್ರ ಯಾದವ್ ಅವರೇ ತಿಳಿಸಿರುವುದಾಗಿ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರು ಹೇಳಿದ್ದಾರೆ. ಕೇಂದ್ರ ಸರ್ಕಾರದ ಈ ನಿರ್ಧಾರ ಕರ್ನಾಟಕದ ಹಿತಾಸಕ್ತಿ ಮೇಲಿನ ಇನ್ನೊಂದು ಪ್ರಹಾರವಾಗಿದೆ ಎಂದು ಎಂದು ವಾಗ್ದಾಳಿ ನಡೆಸಿದ್ದಾರೆ.

2018ರಲ್ಲಿ ಮಹದಾಯಿ ಜಲವಿವಾದ ನ್ಯಾಯಮಂಡಳಿ 13.42 ಟಿಎಂಸಿ ನೀರನ್ನು ನಮ್ಮ ರಾಜ್ಯಕ್ಕೆ ನಿಗದಿಪಡಿಸಿ ಐತೀರ್ಪು ನೀಡಿದ್ದರೂ ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯಿಂದಾಗಿ ಯೋಜನೆಯ ಅನುಷ್ಠಾನ ಸಾಧ್ಯವಾಗುತ್ತಿಲ್ಲ.

ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಗದಗ, ಬಾಗಲಕೋಟೆ ಪ್ರದೇಶದ ಜನತೆಯ ಕುಡಿಯುವ ನೀರಿಗಾಗಿ 40 ಟಿಎಂಸಿ ನೀರನ್ನು ಬಳಸಿಕೊಳ್ಳುವ ಕಳಸಾ–ಬಂಡೂರಿ ಯೋಜನೆ ಈಗಾಗಲೇ ಅನುಷ್ಠಾನಕ್ಕೆ ಸಿದ್ಧಗೊಂಡಿದ್ದು, ಗೋವಾದ ಬಿಜೆಪಿ ಸರ್ಕಾರದ ಜೊತೆ ಷಾಮೀಲಾಗಿ ಕೇಂದ್ರ ಸರ್ಕಾರ ನಿರಂತರವಾಗಿ ಅಡ್ಡಗಾಲು ಹಾಕುತ್ತಿದೆ ಎಂದು ಆರೋಪಿಸಿದ್ದಾರೆ.

ರಾಜ್ಯದ ಬಿಜೆಪಿ ನಾಯಕರಾಗಲಿ, ಕನ್ನಡಿಗರಿಂದಲೇ ಆರಿಸಿ ಹೋಗಿರುವ ಬಿಜೆಪಿ ಮತ್ತು ಜೆಡಿಎಸ್ ಸಂಸದರಾಗಲಿ ಈ ಅನ್ಯಾಯದ ವಿರುದ್ಧ ದನಿ ಎತ್ತಲಾಗದಷ್ಟು ನಿರ್ವೀರ್ಯರಾಗಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ತಿರಸ್ಕರಿಸಿದ ಕರ್ನಾಟಕದ ಜನತೆಯ ವಿರುದ್ಧ ಸೇಡು ತೀರಿಸಿಕೊಳ್ಳುವ ದುರುದ್ದೇಶದಿಂದಲೇ ಮಹದಾಯಿ ಯೋಜನೆಗೆ ಪರಿಸರ ಖಾತೆಯ ಅನುಮತಿಯನ್ನು ನಿರಾಕರಿಸಿರುವುದು ಸ್ಪಷ್ಟವಾಗಿದೆ ಎಂದು ಟೀಕಿಸಿದ್ದಾರೆ.

ತೆರಿಗೆ ಹಂಚಿಕೆ, ಕೇಂದ್ರ ಪ್ರಾಯೋಜಿತ ಯೋಜನೆಗಳಲ್ಲಿ ಅನುದಾನ ಕಡಿತವೂ ಸೇರಿದಂತೆ ನೆಲ–ಜಲ–ಭಾಷೆಯ ವಿಚಾರದಲ್ಲಿ ಕೇಂದ್ರ ಸರ್ಕಾರ ಕರ್ನಾಟಕದ ವಿಚಾರದಲ್ಲಿ ನಿರಂತರವಾಗಿ ಅನ್ಯಾಯ ಎಸಗುತ್ತಿದೆ. ಕೇಂದ್ರ ಸರ್ಕಾರದ ಈ ಮಲತಾಯಿ ಧೋರಣೆ ವಿರುದ್ಧ ನಾಡಿನ ಸಮಸ್ತ ಕನ್ನಡಿಗರನ್ನು ಜೊತೆಯಲ್ಲಿ ಕಟ್ಟಿಕೊಂಡು ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

# ಮಕ್ಕಳಲ್ಲಿ ಪೋಕ್ಸೋ ಮತ್ತು ಬಾಲ್ಯ ವಿವಾಹ ಕಾಯ್ದೆ ಅರಿವು ಅತ್ಯಗತ್ಯ : ನ್ಯಾ.ಸಂತೋಷ್



**ಶಿವಮೊಗ್ಗ:** ಸಾಮಾಜಿಕ ಜಾಲತಾಣದ ಪರಿಣಾಮದಿಂದಾಗಿ ಪ್ರಸ್ತುತ ಮಕ್ಕಳ ಮೇಲಿನ ಅಪರಾಧಗಳು ಹೆಚ್ಚುತ್ತಿರುವುದು ಆತಂಕಕಾರಿಯಾಗಿದ್ದು, ಎಲ್ಲ ಮಕ್ಕಳು ಪೋಕ್ಸೋ ಹಾಗೂ ಬಾಲ್ಯವಿವಾಹದ ಕಾಯ್ದೆ ಬಗ್ಗೆ ತಿಳಿದುಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಸದಸ್ಯಕಾರ್ಯದರ್ಶಿಗಳಾದ ಸಂತೋಷ್ ಎಂ.ಎಸ್ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಕಾನೂನು ಕೋಶ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಗಳ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ಪ್ರೌಢಶಾಲೆಗಳ ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹ ನಿಷೇಧ ಹಾಗೂ ಲೈಂಗಿಕ ದೌರ್ಜನ್ಯ ತಡೆಗಟ್ಟುವ ಬಗ್ಗೆ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ಜಾಲತಾಣಗಳ ಆಕರ್ಷಣೆಗೆ ಒಳಗಾಗಿ ಇತ್ತೀಚೆಗೆ ಚಿಕ್ಕ ವಯಸ್ಸಿನ ಮಕ್ಕಳು ಮನೆ ಬಿಟ್ಟು ಹೋಗಿ ಮದುವೆಯಾಗುತ್ತಿರುವುದು ಹಾಗೂ ಇತರೆ ಅಪರಾಧಗಳನ್ನು ಕಾಣುತ್ತಿದ್ದೇವೆ. 2023–24ರಲ್ಲಿ ನಮ್ಮ ಜಿಲ್ಲಾ ವ್ಯಾಪ್ತಿಯಲ್ಲೇ 247 ಜನ ಬಾಲ ಗರ್ಭಿಣಿಯರ ಪ್ರಕರಣ ದಾಖಲಾಗಿದ್ದು, ಸಾಮಾಜಿಕ ಜಾಲತಾಣಗಳು ಮಕ್ಕಳ ಮನಸ್ಸಿನ ಮೇಲೆ ದುಷ್ಪರಿಣಾಮಗಳನ್ನು ಬೀರುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಕಾನೂನು ನಮ್ಮೆಲ್ಲರಿಗೆ ಹಲವು ಮೂಲಭೂತ ಹಕ್ಕುಗಳನ್ನು, ಸ್ವಾತಂತ್ರ್ಯವನ್ನು ನೀಡಿದೆ. ಅದರ ದುರ್ಬಳಕೆ ಆಗಬಾರದು. ದುರ್ಬಳಕೆಯನ್ನು ತಡೆಯಲು ಕಾಯ್ದೆಗಳ ರೂಪದಲ್ಲಿ ಕೆಲವು ನಿರ್ಬಂಧಗಳನ್ನು ಹಾಕಲಾಗಿದೆ.

ಕಾನೂನಿನ ಕಣ್ಣಿನಲ್ಲಿ ನಾವೆಲ್ಲರೂ ಸಮಾನರು. ಇದು ಸಂವಿಧಾನದಲ್ಲೂ ಅಡಕವಾಗಿದೆ. ನಮ್ಮ ನೆಲದ ಕಾನೂನು ಸಂವಿಧಾನ, ಇದೇ ನಮ್ಮ ತಳಹದಿ ಮತ್ತು ಬುನಾದಿ, ನಾವೆಲ್ಲರು ನಮ್ಮ ನೆಲದ ಕಾನೂನನ್ನು ಅನುಸರಿಸಬೇಕು. ಕಾನೂನು ಎಂದರೆ ಒಂದು ಸಾಮಾನ್ಯ ಜ್ಞಾನ. ಅದನ್ನು ನಾವೆಲ್ಲರೂ ಅರಿತಿರಬೇಕು ಎಂದರು.

ಪೋಕ್ಸೊ ಹಾಗೂ ಬಾಲ್ಯವಿವಾಹ ಕಾಯ್ದೆಗಳ ಬಗ್ಗೆ ಎಲ್ಲ ಮಕ್ಕಳಿಗೆ ಅರಿವು ಇರಬೇಕು. ಗುಡ್ ಟಚ್ ಮತ್ತು ಬ್ಯಾಡ್ ಟಚ್ ಬಗ್ಗೆ ಜ್ಞಾನ ಇರಬೇಕು. ಯಾವುದೋ ಉದ್ದೇಶದಿಂದ ಪುರುಷ/ ಗಂಡು ಮಕ್ಕಳು ಹೆಣ್ಣು ಮಕ್ಕಳನ್ನು ಮುಟ್ಟುವುದು, ಸ್ಪರ್ಶಿಸುವುದರ ಕುರಿತು ಜಾಗೃತೆಯಿಂದರಬೇಕು.

ಪೋಕ್ಸೋ ಹಾಗೂ ಬಾಲ್ಯ ವಿವಾಹ ಕಾಯ್ದೆಗಳಡಿಯಲ್ಲಿ ಹೆಣ್ಣು ಮಕ್ಕಳಿಗೆ ಎಲ್ಲ ರೀತಿಯಲ್ಲಿ ರಕ್ಷಣೆ ಇದೆ. ಅದನ್ನು ಸರಿಯಾದ ಕ್ರಮದಲ್ಲಿ ಬಳಸಿಕೊಳ್ಳಬೇಕು. ಶಾಲೆ ಹಾಗೂ ತಮ್ಮ ಸುತ್ತಮುತ್ತಲಿನಲ್ಲಿ ಬ್ಯಾಡ್ ಟಚ್‌ನಂತಹ ಪ್ರಕರಣಗಳು ಅಥವಾ ಇಂತಹ ಅನುಭವವಾದರೆ ಶಾಲಾ ಶಿಕ್ಷಕರಿಗೆ ಅಥವಾ ತಂದೆ ತಾಯಿಗೆ ಕೂಡಲೇ ತಿಳಿಸಬೇಕು. ನಿಮ್ಮನ್ನು ರಕ್ಷಣೆ ಮಾಡುವ ಸಂಪೂರ್ಣ ಜವಾಬ್ದಾರಿ ಕಾನೂನು ಕೈಗೊಳುತ್ತದೆ ಎಂದು ಕಿವಿ ಮಾತು ಹೇಳಿದರು.

ಮಾಜಿ ರಾಷ್ಟ್ರಪತಿ ಅಬ್ದುಲ್ ಕಲಾಂ ಅವರ ಮಾತಿನಂತೆ "ದೇವರು ಯಾವಾಗಲು ನಮ್ಮ ಜೊತೆ ಇರುತ್ತಾರೆ. ಇವತ್ತು ನನ್ನ ದಿನ, ನಾನು ಇದನ್ನು ಮಾಡುತ್ತೇನೆ, ನಾನೇ ಉತ್ತಮ, ನಾನೇ ವಿಜಯಶಾಲಿ" ಈ 5 ಸೂತ್ರಗಳು ಮಕ್ಕಳು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ನಮ್ಮ ಜ್ಞಾನದ ಮೇಲೆ ನಂಬಿಕೆ ಮತ್ತು ವಿಶ್ವಾಸ ಬೆಳೆಸಿಕೊಳ್ಳಬೇಕು. ಆ ದಿಸೆಯಲ್ಲಿ ಸಾಗಿದರೆ ಯಶಸ್ಸು ಪಡೆಯಬಹುದು ಎಂದು ಮಕ್ಕಳನ್ನು ಉತ್ತೇಜಿಸಿದರು.

ಶಿವಮೊಗ್ಗ ಕ್ಷೇತ್ರ ಶಿಕ್ಷಣಾಧಿಕಾರಿ ರಮೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರಿ ಶಾಲೆಯ ಮಕ್ಕಳಿಗೆ ಪೋಕ್ಸೋ ಹಾಗೂ ಬಾಲ್ಯ ವಿವಾಹ ಕಾಯ್ದೆ ಕುರಿತು ಅರಿವು ಅತ್ಯಗತ್ಯ. ಸರ್ಕಾರಿ ಶಾಲೆಯಲ್ಲಿ ಬಡವರು ಹಾಗೂ ಮಧ್ಯವರ್ಗದ ಮಕ್ಕಳೇ ಹೆಚ್ಚಾಗಿ ಓದುವುದರಿಂದ ಆ ಮಕ್ಕಳ ಕುಟುಂಬದ ತಂದೆತಾಯಿಗಳು ಅನಕ್ಷರಸ್ಥರಾಗಿರುತ್ತಾರೆ. ಇದರಿಂದ ಪೋಕ್ಸೋ ಹಾಗೂ ಬಾಲ್ಯ ವಿವಾಹದಂತಹ ಕಾಯ್ದೆಗಳ ಬಗ್ಗೆ ಕುಟುಂಬಕ್ಕೆ ಮತ್ತು ಮಕ್ಕಳಿಗೆ ಸಾಮಾನ್ಯವಾಗಿ ಅರಿವು ಇರುವುದಿಲ್ಲ. ಈ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ನಗರದ 7 ಕರ್ನಾಟಕ ಪಬ್ಲಿಕ್ ಶಾಲೆಗಳ ಮಕ್ಕಳನ್ನು ಒಟ್ಟಾಗಿ ಸೇರಿಸಿ ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಈ ಮೂಲಕ ಅವರಿಗೆ ಪೋಕ್ಸೋ ಹಾಗೂ ಬಾಲ್ಯವಿವಾಹ ಕಾಯ್ದೆದ ಕುರಿತು ಜಾಗೃತಿ ಮೂಡಿಸಲಾಗುತ್ತಿದ್ದು ಮಕ್ಕಳು ಇದರ ಸದುಪಯೋಗ ಪಡೆಯಬೇಕು ಎಂದರು.

ಈ ವೇಳೆ ಬಾಲ್ಯ ವಿವಾಹ ನಿಷೇಧ ಹಾಗೂ ಪೋಕ್ಸೋ ಕಾಯ್ದೆ ಬಗ್ಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

# ರಾಜ್ಯ ಸರ್ಕಾರಕ್ಕೆ ಸ್ಮಾರ್ಟ್ ಮೀಟರ್ ಕಂಟಕ, ಬರೋಬ್ಬರಿ 15 ಸಾವಿರ ಕೋಟಿ ಹಗರಣ..! ಇಲ್ಲಿದೆ ಸಂಪೂರ್ಣ ಮಾಹಿತಿ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ 2 ವರ್ಷ ತುಂಬುತಿದ್ದಂತೆ ಮತ್ತೊಂದು ಕಂಟಕ ಎದುರಾಗಿದೆ. ಹೌದು, ಅದು ಸ್ಮಾರ್ಟ್ ಮೀಟರ್ ಕಂಟಕ. ಇದು ಒಂದೆರಡು ಕೋಟಿಗಳ ಅವ್ಯವಹಾರ ಅಲ್ಲ, ಬದಕಾಗಿ ಬರೋಬ್ಬರಿ 15 ಸಾವಿರ ಕೋಟಿ ಅವ್ಯವಹಾರ ನಡೆದಿದೆ ಎನ್ನಲಾದ ಆರೋಪವಾಗಿದೆ. ಅದರಲ್ಲೂ ನೇರವಾಗಿ ಇಂಧನ ಇಲಾಖೆಯ ವಿರುದ್ಧನೇ ಅನುಮಾನಗಳು ಬೊಟ್ಟು ಮಾಡುತ್ತಿವೆ. ಇಂಧನ ಸಚಿವ ಕೆ.ಜೆ ಜಾರ್ಜ್ ಈ ಬಗ್ಗೆ ಸ್ಪಷ್ಟನೆ ನೀಡಿದರೂ, ಬಿಜೆಪಿ ಮತ್ತು ಜೆಡಿಎಸ್ ಸ್ಮಾರ್ಟ್ ಆರೋಪಗಳನ್ನು ಮಾಡುತ್ತಿವೆ. ಈ ಹಿನ್ನೆಲೆಯಲ್ಲಿ ಸದ್ಯ ಇದು ಸಂಚಲನ ಸೃಷ್ಟಿಸುತ್ತಿದೆ.

**ಏನಿದು ಸ್ಮಾರ್ಟ್ ಮೀಟರ್?** : ಸ್ಮಾರ್ಟ್ ಮೀಟರ್ ಹಗರಣ ಏನು ಎಂಬುವುದರ ಬಗ್ಗೆ ತಿಳಿಯೋದಕ್ಕೂ ಮುನ್ನ, ಏನಿದು ಸ್ಮಾರ್ಟ್ ಮೀಟರ್ ಎಂಬುವುದು ಸ್ಪಷ್ಟವಾಗಬೇಕಲ್ಲವೇ?. ಹೌದು, ಸ್ಮಾರ್ಟ್ ಮೀಟರ್ ಎಂದರೆ ವಿದ್ಯುತ್ ಬಳಕೆಯನ್ನು ನಿಖವಾಗಿ ದಾಖಲಿಸುವ ಸುಧಾರಿತ ಮಾಪಕ. ಇದು ಅತ್ಯಾಧುನಿಕವಾಗಿದ್ದು, ಗ್ರಾಹಕರು ಮತ್ತು ವಿದ್ಯುತ್ ಸರಬರಾಜು ಕಂಪನಿಗಳಿಗೆ ರಿಯಲ್ ಟೈಂ ಡೇಟಾಗಳನ್ನು ನೀಡುತ್ತದೆ. ಬಳಕೆಯಾದ ವಿದ್ಯುತ್ ಬಗ್ಗೆ ನಿಖರವಾದ ಡೇಟಾಗಳು ರವಾನೆ ಆಗುವುದರಿಂದ ಬಿಲ್ಲಿಂಗ್ ಪ್ರಕ್ರಿಯೆಗೆ ಇದು ಸಾಕಷ್ಟು ಅನುಕೂಲ. ಅಲ್ಲದೆ ದಕ್ಷವಾಗಿ ಕಾರ್ಯನಿರ್ವಹಣೆ ಮಾಡುವ ಯಂತ್ರವಾಗಿದೆ.

ಹಳೆಯ ಮಾದರಿಯ ಮೀಟರ್‌ಗಳಿಗಿಂತ ವಿಶಿಷ್ಟವಾಗಿರುವ ಸ್ಮಾರ್ಟ್ ಮೀಟರ್‌ಗಳು ಜಿಪಿಆರ್‌ಎಸ್/ ಆರ್ ಎಫ್ ಆಧಾರಿತ ಸಂವಹನ ಡೇಟಾ ಸಂಗ್ರಹಣೆಗೆ ಸರ್ವರ್ ಹಾಗೂ ಕ್ಲೌಡ್ ಸಂಪರ್ಕ ಹೊಂದಿರುತ್ತದೆ. ಅಡ್ವಾನ್ಸ್ಡ್ ಮೀಟರಿಂಗ್ ಇನ್ಫ್ರಾಸ್ಟ್ರಕ್ಚರ್ (ಎಎಂಐ) ತಂತ್ರಜ್ಞಾನದ ಸ್ಮಾರ್ಟ್ ಮೀಟರ್‌ಗಳು ವಿದ್ಯುತ್ ಬಳಕೆ ಮಾಹಿತಿಯನ್ನು ಸಂಗ್ರಹಿಸುವ ಮೂಲಕ ಗ್ರಾಹಕರು ಹಾಗೂ ಬೆಸ್ಕಾಂ ನಡುವೆ ನೇರ ಸಂಪರ್ಕ ಕಲ್ಪಿಸಲಿದೆ. ಮೊಬೈಲ್ ಅಪ್ಲಿಕೇಶನ್ ಮೂಲಕ ನೈಜ ಸಮಯದ ವಿದ್ಯುತ್ ಬಳಕೆ, ವೊಲ್ಟೇಜ್, ಪವರ್ ಫ್ಯಾಕ್ಟರ್ ಮಾಹಿತಿ ಹಾಗೂ ರೀಚಾರ್ಜ್ ಸೌಲಭ್ಯ ಪಡೆಯಬಹುದಾಗಿದೆ. ಮುಂಚಿತವಾಗಿ ಹಣ ಪಾವತಿಸಿ ತಮ್ಮ ಆಯ್ಕೆಯ ದಿನಗಳ ಅವಧಿಗೆ ರಿಜಾರ್ಜ್ ಮಾಡಿಕೊಳ್ಳಬಹುದು. ಒಂದು ವೇಳೆ ವಿದ್ಯುತ್ ಕಡಿತಗೊಂಡರೆ ಗ್ರಾಹಕರು ಬಿಲ್ ಪಾವತಿಸಿದ ತಕ್ಷಣ ವಿದ್ಯುತ್ ಸಂಪರ್ಕ ಪಡೆದುಕೊಳ್ಳಬಹುದಾಗಿದೆ.

ಯಾವಾಗ ಅಳವಡಿಸಿಕೊಳ್ಳಬೇಕು?

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಆದೇಶದಂತೆ ಬೆಸ್ಕಾಂ ವ್ಯಾಪ್ತಿಯ ಗ್ರಾಮಾಂತರ ಪ್ರದೇಶಗಳಲ್ಲಿ 2025ರ ಜುಲೈ 1ರಿಂದ ಹೊಸ ಮತ್ತು ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯುವ ಗ್ರಾಹಕರು ಸ್ಮಾರ್ಟ್ ಮೀಟರ್ ಅಳವಡಿಸಬೇಕಿದೆ. ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕಗಳಿಗೆ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯಗೊಳಿಸಿ ಬೆಸ್ಕಾಂ ಆದೇಶ ಹೊರಡಿಸಿದೆ.

ಬೆಸ್ಕಾಂ ವ್ಯಾಪ್ತಿಯ ಬೆಂಗಳೂರು ನಗರ ಸೇರಿದಂತೆ ಎಲ್ಲಾ ನಗರ ಪ್ರದೇಶಗಳಲ್ಲಿ 2025ರ ಫೆಬ್ರವರಿ 15ರಿಂದ ಸ್ಮಾರ್ಟ್ ಮೀಟರ್ ಅಳವಡಿಕೆ ಆರಂಭಗೊಂಡಿದ್ದು, ಈಗ ಬೆಸ್ಕಾಂ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಿಗು ಕೂಡಾ ಯೋಜನೆ ವಿಸ್ತರಿಸಲಾಗಿದೆ. ಹೊಸ ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕಗಳಿಗೆ ಗ್ರಾಹಕರು ಅರ್ಜಿ ಸಲ್ಲಿಸಿ, ಬೆಸ್ಕಾಂನ ನೋಂದಾಯಿತ ಮಳಿಗೆಗಳಿಂದ ಸ್ಮಾರ್ಟ್ ಮೀಟರ್‌ಗಳನ್ನು ಖರೀದಿಸಿ ವಿದ್ಯುತ್ ಸಂಪರ್ಕ ಪಡೆಯಬಹುದು ಎಂದು ಬೆಸ್ಕಾಂ ತಿಳಿಸಿದೆ.

**ಯಾವ ರಾಜ್ಯಗಳಲ್ಲಿ ಬಳಕೆಯಲ್ಲಿದೆ ಸ್ಮಾರ್ಟ್ ಮೀಟರ್?** : ಬಿಹಾರ, ಅಸ್ಸಾಂ, ಉತ್ತರ ಪ್ರದೇಶ, ಮಧ್ಯಪ್ರದೇಶ, ಹರಿಯಾಣ, ಗುಜರಾತ್ ಸೇರಿದಂತೆ ಹಲವು ರಾಜ್ಯಗಳಲ್ಲಿ ಸ್ಮಾರ್ಟ್ ಮೀಟರ್ ಬಳಕೆಯಲ್ಲಿದೆ. ಈ ನಿಟ್ಟಿನಲ್ಲಿ ಕರ್ನಾಟಕದಲ್ಲೂ ಸ್ಮಾರ್ಟ್ ಮೀಟರ್ ಬಳಕೆ ಮಾಡಬೇಕು ಎಂಬ ನಿಟ್ಟಿನಲ್ಲಿ ಇಂಧನ ಇಲಾಖೆ ಮುಂದಾಗಿದೆ. ಆದರೆ ಇಂಧನ ಇಲಾಖೆಯ ಈ ಯೋಜನೆ ಬಗ್ಗೆ ಆರಂಭಿಕ ಹಂತದಲ್ಲೇ ಆರೋಪಗಳು ಕೇಳಿಬರುತ್ತಿವೆ.



**ಸ್ಮಾರ್ಟ್ ಮೀಟರ್ ಹಗರಣ ಏನು?** : ಸ್ಮಾರ್ಟ್ ಮೀಟರ್ ಹಗರಣವನ್ನು ಮೊದಲಿಗೆ ಬಯಲಿಗೆಳಿದಿದ್ದು ಮಾಜಿ ಸಚಿವ ಅಶ್ವತ್ಥ ನಾರಾಯಣ. ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು, ಸ್ಮಾರ್ಟ್ ಮೀಟರ್ ಅಳವಡಿಕೆಯಲ್ಲಿ ಏನೆಲ್ಲಾ ಅವ್ಯವಹಾರಗಳು ನಡೆದಿವೆ ಎಂಬ ಬಗ್ಗೆ ಆರೋಪಗಳನ್ನು ಮಾಡಿದರು. ಇಂಚಿಂಚಾಗಿ ಅಕ್ರಮಗಳ ಬಗ್ಗೆ ಅವರು ವಿವರ ನೀಡಿದ್ದರು.

**ಅಶ್ವತ್ಥನಾರಾಯಣ ಆರೋಪ ಏನೆಲ್ಲಾ?**: ಎಸ್ಕಾಂಗಳು ಕೆಇಆರ್‌ಸಿ ನಿಯಮಗಳಿಗೆ ಬದ್ಧವಾಗಿರಬೇಕು ಆದರೆ ಈ ನಿಯಮಗಳಲ್ಲಿ ಸ್ಮಾರ್ಟ್ ಮೀಟರ್ ಕಡ್ಡಾಯಗೊಳಿಸಿಲ್ಲ. ತಾತ್ಕಾಲಿಕ ಸಂಪರ್ಕಕ್ಕೆ ಮಾತ್ರ ಸ್ಮಾರ್ಟ್ ಮೀಟರ್ ಕಡ್ಡಾಯ ಹೊರತು ಖಾಯಂ ಗ್ರಾಹಕರು ಹಾಗೂ ಹೊಸ ಗ್ರಾಹಕರಿಗೆ ಇದನ್ನು ಅಳವಡಿಸುವುದು ಕಡ್ಡಾಯ ಮಾಡುವಂತಿಲ್ಲ.

ಸ್ಮಾರ್ಟ್ ಮೀಟರ್ ಅಳವಡಿಕೆ ಯೋಜನೆಯಲ್ಲಿ ಸುಮಾರು 15,000 ಕೋಟಿ ಅವ್ಯವಹಾರ ನಡೆದಿದೆ. ಕೆಟಿಪಿಪಿ ಕಾಯ್ದೆ ಅಡಿಯಲ್ಲಿ ಬಿಡ್ ಪ್ರಮಾಣ ಎಷ್ಟು ಎಂಬುವುದನ್ನು ಟೆಂಡರ್ ನಲ್ಲಿ ತಿಳಿಸಿಲ್ಲ. ಅದು 6,800 ಕೋಟಿ ಇರಬೇಕಿತ್ತು. ಬಿಡ್ಡಿಂಗ್ ಸಾಮರ್ಥ್ಯ ಇಲ್ಲದಿರುವುದೇ ಹಗರಣ.

ಸರ್ಕಾರದ ಯೋಜನೆಗಳ ಜಾರಿಯನ್ನು ಯಾವುದೇ ಬ್ಲ್ಯಾಕ್‌ಲಿಸ್ಟ್ ಆದ ಕಂಪೆನಿಗೆ ಕೊಡುವುದಕ್ಕೆ ಅವಕಾಶ ಇಲ್ಲ. ಆದರೆ ಇಂಧನ ಇಲಾಖೆಯು ಉತ್ತರ ಪ್ರದೇಶದಲ್ಲಿ ಬ್ಲ್ಯಾಕ್ ಲಿಸ್ಟ್ ಆದ ಬಿಸಿಐಟಿಎಸ್ ಅನ್ನು ಇಲ್ಲಿ ಪರಿಗಣಿಸಿದ್ದಾರೆ.

ಟೆಂಡರ್ ಪ್ರಕ್ರಿಯೆಯ ಸಂದರ್ಭದಲಿ ಕೇಂದ್ರ ಸರ್ಕಾರದ ನಿಯಮಾವಳಿಯನ್ನೂ ಜಾರಿ ಮಾಡಿಲ್ಲ. ಸ್ಮಾರ್ಟ್ ಮೀಟರ್ ತಯಾರಿಸದ ಹಾಗೂ ಅಳವಡಿಸದ, ಡಿಜಿಟಲ್ ಮೀಟರ್ ಅಳವಡಿಸಿದ ವ್ಯಕ್ತಿಯನ್ನು ಗುತ್ತಿಗೆ ನೀಡುವ ಸಂದರ್ಭದಲ್ಲಿ **ಪರಿಗಣಿಸಿದ್ದಾರೆ.**

**ಇದರ ಉದ್ದೇಶ ಏನು?** : ಕಾಂಗ್ರೆಸ್ ಆಡಳಿತ ನಡೆಸುವ ಹಿಮಾಚಲ ಪ್ರದೇಶ, ತೆಲಂಗಾಣ ಹಾಗೂ ಕಮ್ಯುನಿಷ್ಟ್ ಆಡಳಿತದ ಕೇರಳದಲ್ಲಿ ಕಡಿಮೆ ಮೊತ್ತಕ್ಕೆ ಸ್ಮಾರ್ಟ್ ಮೀಟರ್ ಅಳವಡಿಸಲಾಗಿದೆ. ಹೀಗಿರುವಾಗ ಕರ್ನಾಟದಲ್ಲಿ ಒಂದು ಮೀಟರ್ ಅಳವಡಿಸಲು 17 ಸಾವಿರ ಆಗುತ್ತದೆ. ಬೇರೆ ರಾಜ್ಯದಲ್ಲಿ 7,740 ರೂ ವೆಚ್ಚ ಆಗಲಿದೆ. ಸುಮಾರು 9,260 ರೂ ವ್ಯತ್ಯಾಸ ಯಾಕಾಗಿ?

**ಟೆಂಡರ್ ಪ್ರಕ್ರಿಯೆ ಅನುಮಾನಕ್ಕೆ ಕಾರಣ!** :

ಸ್ಮಾರ್ಟ್ ಮೀಟರ್ ಅಳವಡಿಕೆಯ ಟೆಂಡರ್ ಪ್ರಕ್ರಿಯೆ ಹಲವು ಅನುಮಾಗಳಿಗೆ ಎಡೆಮಾಡಿಕೊಟ್ಟಿದ ಎಂಬ ಆರೋಪ ಇದೆ. ಟೆಂಡರ್ ಪ್ರಕ್ರಿಯೆ ಕರ್ನಾಟಕ ಪಾದರ್ಶಕತೆ ಕಾಯ್ದೆಯನ್ನು ಉಲ್ಲಂಘನೆ ಮಾಡಿದೆ ಎಂಬ ಆರೋಪ ಇಂಧನ ಇಲಾಖೆಯ ವಿರುದ್ಧ ಕೇಳಿ ಬಂದಿದೆ. 200 ಕೋಟಿಗಿಂತ ಹೆಚ್ಚು ಮೊತ್ತದ ಟೆಂಡರ್ ಮೊತ್ತ ಇದ್ದಲ್ಲಿ ಜಾಗತಿಕ ಟೆಂಡರ್ ಕರೆಯಬೇಕೆಂಬ ನಿಯಮ ಇದೆ. ಆದರೆ ಅದನ್ನು ಪಾಲನೆ ಮಾಡಿಲ್ಲ ಎಂಬುವುದು ಆರೋಪವಾಗಿದೆ.

ಅಷ್ಟೇ ಅಲ್ಲದೆ, ಅರ್ಹತೆ ಇಲ್ಲದೆ ಇರುವ ಕಂಪನಿಗೆ ಗುತ್ತಿಗೆ ನೀಡಲಾಗಿದೆ ಎಂಬುವುದು ಪ್ರಮುಖವಾಗಿ ಕೇಳಿಬರುತ್ತಿರುವ ಆರೋಪವಾಗಿದೆ. ಕೇವಲ 354 ಕೋಟಿ ವ್ಯವಹಾರ ನಡೆಸಲು ಸಾಮರ್ಥ್ಯ ಹೊಂದಿರುವ ರಾಜಶ್ರೀ ಎಲೆಕ್ಟ್ರಿಕಲ್ಸ್ ಕಂಪನಿಗೆ 10,000 ಕೋಟಿಗೂ ಮೊತ್ತದ ಗುತ್ತಿಗೆ ಕೊಡಲಾಗಿದೆ ಎಂಬ ಆರೋಪ ಕೇಳಿಬಂದಿದೆ.

**ವಿರೋಧ ಪಕ್ಷಗಳ ನಾಯಕರು ಏನಂತಾರೆ?** :

"ಸ್ಮಾರ್ಟ್ ಮೀಟರ್ ಹೆಸರಲ್ಲಿ ಮತ್ತೊಂದು ಸ್ಕ್ಯಾಮ್ ನಡೆಯುತ್ತಿದೆ. ಆರ್ಥಿಕವಾಗಿ ದಿವಾಳಿಯಾಗಿರುವ ಕಾಂಗ್ರೆಸ್ ಸರ್ಕಾರ ಜನರನ್ನು ಸುಲಿಗೆ ಮಾಡಲು ಸ್ಮಾರ್ಟ್ ಮೀಟರ್ ಅಳವಡಿಸುವುದನ್ನು ಕಡ್ಡಾಯಗೊಳಿಸಿ ಶೇ.400–800ರಷ್ಟು ದರ ಏರಿಕೆ ಮಾಡಿದ್ದಾಯ್ತು. ಈಗ ಸ್ಮಾರ್ಟ್ ಮೀಟರ್ ಜಾರಿ ಮಾಡುವ ನೆಪದಲ್ಲಿ ಸ್ಥಳೀಯ ಸಂಸ್ಥೆಗಳ ಮೂಲಕ ವಿಶೇಷ ತೆರಿಗೆ ವಿಧಿಸಲು ಹೊರಟಿದ್ದು, ಸಿಎಂ ಸಿದ್ದರಾಮಯ್ಯ ಸರ್ಕಾರ ಇಂಧನ ಇಲಾಖೆಯ ಮೂಲಕ ಮತ್ತೊಮ್ಮೆ ಹಗಲು ದರೋಡೆಗೆ ಇಳಿದಿದೆ" ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

**ಸದನದಲ್ಲಿ ಪ್ರಸ್ತಾಪಕ್ಕೆ ನಿರ್ಧಾರ** : ಸ್ಮಾರ್ಟ್ ಮೀಟರ್ ಅಳವಡಿಕೆಯಲ್ಲಿ 15,000 ಕೋಟಿ ಹಗರಣ ಆಗಿದೆ ಎಂದು ಆರೋಪ ಮಾಡಿರುವ ಬಿಜೆಪಿ ವಿಧಾನಮಂಡಲ ಅಧಿವೇಶನದಲ್ಲಿ ಇದನ್ನು ಪ್ರಸ್ತಾಪ ಮಾಡಲು ಮುಂದಾಗಿದೆ. ವಿಧಾನಸಭೆಯಲ್ಲಿ ದಾಖಲೆಗಳ ಜೊತೆಗೆ ಇದನ್ನು ಪ್ರಸ್ತಾಪ ಮಾಡಿ ಇಂಧನ ಸಚಿವರ ಸ್ಪಷ್ಟನೆಯನ್ನು ಕೇಳಲು ಬಿಜೆಪಿ ಮುಂದಾಗಿದೆ.

**ಹೈಕೋರ್ಟ್ ಸಲಹೆ** : ಸ್ಮಾರ್ಟ್ ಮೀಟರ್ ಸಂಬಂಧಿಸಿದಂತೆ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಮಾರ್ಗಸೂಚಿಗಳಿಗೆ ಅನುಗುಣವಾಗಿ ಅಳವಡಿಸಲು ಮುಂದಾಗಿದೆ. ಆದರ ಹೊರತಾಗಿ ಪ್ರೀ ಪೇಯ್ಡ್, ಪೋಸ್ಟ್ ಪೇಯ್ಡ್ ಎಂದು ಗ್ರಾಹಕರನ್ನು ಗೊಂದಲದ ಗೂಡಿಗೆ ತಳ್ಳಬೇಡಿ ಎಂದು ಇಂಧನ ಇಲಾಖೆಗೆ ಕರ್ನಾಟಕ ಹೈಕೋರ್ಟ್ ಸಲಹೆ ನೀಡಿದೆ.

**ಸರ್ಕಾರದ ಸಮರ್ಥನೆ ಏನು?**: ಸ್ಮಾರ್ಟ್ ಮೀಟರ್ ಕುರಿತಾಗಿ ಕೇಳಿಬಂದ ಆರೋಪಗಳನ್ನು ಇಂಧನ ಸಚಿವ ಕೆಜೆ ಜಾರ್ಜ್ ನಿರಾಕರಿಸಿದ್ದಾರೆ. ಸ್ಮಾರ್ಟ್ ಮೀಟರ್ ವೆಚ್ಚ ಪ್ರತಿ ಮೀಟರ್ 4,998 ಮಾತ್ರ ಎಂದು ಸ್ಪಷ್ಟಪಡಿಸಿದ್ದಾರೆ ಮತ್ತು ಹೆಚ್ಚುವರಿ ಶುಲ್ಕಗಳನ್ನು ವಿಧಿಸಲಾಗುವುದಿಲ್ಲ ತಿಳಿಸಿದ್ದಾರೆ. ಅಲ್ಲದೆ ಯೋಜನೆಯ ಅಂದಾಜು ವೆಚ್ಚ 997 ಕೋಟಿ ರೂಪಾಯಿ ಆಗಿರುವಾಗ 15,000 ಕೋಟಿ ಹಗರಣ ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. ಟೆಂಡರ್ ಪ್ರಕ್ರಿಯೆಯು ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೆಟಿಪಿಪಿ ಕಾಯ್ದೆ ಉಲ್ಲಂಘನೆ ಆಗಿಲ್ಲ. ಬದಲಾಗಿ ಕಾಯ್ದೆಯ ಅನುಗುಣವಾಗಿದೆ ನಡೆದಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

# ಸದ್ಯ ರನ್ಯಾ ಬಿಡುಗಡೆ ಅಸಾಧ್ಯ


## ಕಾಫಿಪೋಸಾ ಅಡಿ ಬಂಧನ ಕಾಯಂಗೊಳಿಸಿದ ಹೈಕೋರ್ಟ್ ಸಲಹಾ ಮಂಡಳಿ

**ಬೆಂಗಳೂರು:** ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟಿ ರನ್ಯಾ ರಾವ್ ಅವರನ್ನು ವಿದೇಶಿ ವಿನಿಮಯ ನಿಯಂತ್ರಣ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆ ಕಾಯಿದೆ (ಕಾಫಿಪೋಸಾ)ಯಡಿ ಕಂದಾಯ ಗುಪ್ತಚರ ನಿರ್ದೇಶನಾಲಯವು ಬಂಧಿಸಿರುವ ಆದೇಶವನ್ನು ಹೈಕೋರ್ಟ್‌ನ ಸಲಹಾ ಮಂಡಳಿಯು ಕಾಯಂಪಡಿಸಿದೆ. ಹಾಗಾಗಿ, ರನ್ಯಾ ರಾವ್ ಬಿಡುಗಡೆ ಸದ್ಯಕ್ಕೆ ಅಸಾಧ್ಯ ಎನ್ನುವಂತಾಗಿದೆ.

ಕಾಫಿಪೋಸಾ ಕಾಯಿದೆಯಡಿ ರನ್ಯಾ ಬಂಧನ ಪ್ರಶ್ನಿಸಿ ಆಕೆಯ ಮಲತಾಯಿ ಎಚ್.ಪಿ.ರೋಹಿಣಿ ಸಲ್ಲಿಸಿದ್ದ ಹೇಬಿಯಸ್ ಕಾರ್ಪಸ್ ಅರ್ಜಿಯು ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಮತ್ತು ಪಿ.ಮನ್ಮಥ ರಾವ್ ನೇತೃತ್ವದ ವಿಭಾಗೀಯ ಪೀಠದ ಮುಂದೆ ಬುಧವಾರ ವಿಚಾರಣೆಗೆ ಬಂದಿತು.

ಅರ್ಜಿದಾರರ ಪರ ಹಿರಿಯ ವಕೀಲ ಕಿರಣ್ ಜವಳಿ, "ಹೈಕೋರ್ಟ್‌ನ ಸಲಹಾ ಮಂಡಳಿಯು ಕಾಫಿಪೋಸಾದಡಿ ರನ್ಯಾ ಬಂಸಿರುವುದನ್ನು ಖಚಿತಪಡಿಸಿದೆ ಎಂಬ ಮಾಹಿತಿಯನ್ನು ನ್ಯಾಯಪೀಠಕ್ಕೆ ನೀಡಿ, ಅರ್ಜಿಯನ್ನು ಮೆರಿಟ್ ಮೇಲೆ ವಿಚಾರಣೆ ನಡೆಸಬೇಕು," ಎಂದು ಕೋರಿದರು.

ಆಗ ಕೇಂದ್ರ ಸರಕಾರ ಪರ ವಾದ ಮಂಡನೆಗೆ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್



ಕೆ.ಅರವಿಂದ್ ಕಾಮತ್, "ಅರ್ಜಿದಾರರು ಈಗಷ್ಟೇ ಮೆಮೋ ನೀಡಿದ್ದಾರೆ. ಅದಕ್ಕೆ ಆಕ್ಷೇಪಣೆ ಸಲ್ಲಿಸಲು ಸ್ವಲ್ಪ ಸಮಯ ನೀಡಬೇಕು," ಎಂದು ಮನವಿ ಮಾಡಿದರು. ಹಾಗಾಗಿ, ನ್ಯಾಯಾಲಯ ಎರಡೂ ಕಡೆಯ ವಕೀಲರ ವಾದ ದಾಖಲಿಸಿ ವಿಚಾರಣೆಯನ್ನು ಆ.28ಕ್ಕೆ ನಿಗದಿಪಡಿಸಿತು.

ಕಳೆದ ತಿಂಗಳು ವಿಚಾರಣಾ ನ್ಯಾಯಾಲಯ ನಿಗದಿತ ಸಮಯದಲ್ಲಿ ಡಿಆರ್‌ಐ ಆರೋಪ ಪಟ್ಟಿ ಸಲ್ಲಿಸದ ಕಾರಣಕ್ಕೆ ರನ್ಯಾಗೆ ಜಾಮೀನು ಮಂಜೂರು ಮಾಡಿತ್ತು. ಆದರೆ, ಕಾಫಿಪೋಸಾದಡಿ ಬಂಧನವಾಗಿರುವುದರಿಂದ ಅವರು ಬಿಡುಗಡೆಯಾಗಲು ಸಾಧ್ಯವಿಲ್ಲ.

**ಪ್ರಕರಣದ ಹಿನ್ನೆಲೆ :** ಕೇಂದ್ರ ಕಂದಾಯ ಗುಪ್ತಚರ ಅಧಿಕಾರಿಗಳು ಮಾ.3ರ ಸಂಜೆ 6.30ಕ್ಕೆ ದುಬೈನಿಂದ ಬೆಂಗಳೂರಿಗೆ ಎಮಿರೇಟ್ಸ್ ವಿಮಾನದಲ್ಲಿ ಬಂದಿಳಿದಿದ್ದ ರನ್ಯಾರನ್ನು ಪರಿಶೀಲಿಸಿದ್ದರು. ಮೊದಲಿಗೆ ರನ್ಯಾ ಕೈಚೀಲ ಪರಿಶೀಲಿಸಿದಾಗ ಏನೂ ಪತ್ತೆಯಾಗಿರಲಿಲ್ಲ. ನಂತರ ಇಡೀ ದೇಹ ತಪಾಸಣೆ ನಡೆಸಲು ಮಹಿಳಾ ಡಿಆರ್‌ಐ ತನಿಖಾಕಾರಿಗಳು ಲಿಖಿತ ಒಪ್ಪಿಗೆ ಪಡೆದಿದ್ದರು.

ತಪಾಸಣೆ ವೇಳೆ ಆಕೆಯ ನಡುವಿನ ಭಾಗ, ಮಂಡಿಯ ಕೆಳಭಾಗ, ತೊಡೆಗೆ ಚಿನ್ನದ ಬಾರ್‌ಗಳನ್ನು ಮೆಡಿಕಲ್ ಅಡ್ಹೆಸಿವ್ ಬ್ಯಾಂಡೇಜ್ ಬಳಸಿ ಅಂಟಿಸಲಾಗಿತ್ತು. ತಪಾಸಣೆಯ ಸಂದರ್ಭದಲ್ಲಿರನ್ಯಾ ಬಳಿ 12,56,43,362 ರೂ. ಮೌಲ್ಯದ ಚಿನ್ನ ಪತ್ತೆಯಾಗಿತ್ತು. ಅದನ್ನು ಆಧರಿಸಿ ಕಸ್ಟಮ್ಸ್ ಕಾಯಿದೆ 1962ರ ಸೆಕ್ಷನ್ 135 (1)(ಎ) ಮತ್ತು 135(1)(ಬಿ) ಅಡಿ ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.

**ಹೈಕೋರ್ಟ್ ಮೊರೆ ಹೋದ ರನ್ಯಾ ತಾಯಿ :** ನಟಿ ರನ್ಯಾ ರಾವ್ ಅವರ ತಾಯಿ ತಮ್ಮ ಮಗಳ ಬಂಧನವನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ವಿದೇಶಿ ವಿನಿಮಯ ಸಂರಕ್ಷಣೆ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯಿದೆಯ (ಅಔಈಇ–ಕಔಖಂ) ಅಡಿಯಲ್ಲಿ ರನ್ಯಾ ರಾವ್ ಅವರ ಬಂಧನ ಕಾನೂನುಬಾಹಿರ ಎಂದು ಅವರು ವಾದಿಸಿದ್ದಾರೆ. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯವು, ಕೇಂದ್ರ ಸರ್ಕಾರಕ್ಕೆ ಆಕ್ಷೇಪಣೆ ಸಲ್ಲಿಸಲು ನಾಲ್ಕು ವಾರಗಳ ಕಾಲಾವಕಾಶ ನೀಡಿದೆ. ದುಬೈನಿಂದ ಅಕ್ರಮವಾಗಿ ಚಿನ್ನ ಸಾಗಣೆ ಮಾಡುತ್ತಿದ್ದ ಆರೋಪದ ಮೇಲೆ ರನ್ಯಾ ರಾವ್ ಅವರನ್ನು ಬಂಧಿಸಲಾಗಿದ್ದು, ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ.

ರನ್ಯಾ ಕೇಸ್ ನಲ್ಲಿ ಜಾರಿ ನಿರ್ದೇಶನಾಲಯ ಎಂಟ್ರಿ

ಮುಂಬೈನಲ್ಲಿ ನಡೆದ ಚಿನ್ನ ಕಳ್ಳಸಾಗಣೆ ಪ್ರಕರಣಗಳು, ವಿಶೇಷವಾಗಿ ನಟಿ ರನ್ಯಾ ರಾವ್ ಪ್ರಕರಣದ ಹಿಂದೆ ಹವಾಲಾ ಸಿಂಡಿಕೇಟ್ ಪಾತ್ರ ಪತ್ತೆಯಾದ ನಂತರ ಜಾರಿ ನಿರ್ದೇಶನಾಲಯ (ಇ.ಡಿ) ಕಾರ್ಯಾಚರಣೆಯನ್ನು ತೀವ್ರಗೊಳಿಸಿದೆ. ಇದರ ಭಾಗವಾಗಿ, ಇ.ಡಿ ಅಧಿಕಾರಿಗಳು ದೇಶದ 8 ನಗರಗಳಲ್ಲಿ ದಾಳಿ ನಡೆಸಿದ್ದಾರೆ. ಗುರುವಾರ, ಇ.ಡಿ.ಯ ಪ್ರತ್ಯೇಕ ತಂಡಗಳು ಬೆಂಗಳೂರಿನಲ್ಲಿರುವ ನಟಿ ರನ್ಯಾ ರಾವ್ ಅವರ ಲ್ಯಾವೆಲ್ಲೆ ರಸ್ತೆಯ ಅಪಾರ್ಟ್‌ಮೆಂಟ್, ಆಡುಗೋಡಿಯಲ್ಲಿರುವ ಅವರ ಪತಿ ಜತಿನ್ ಅವರ ಫ್ಲಾಟ್, ಹಾಗೂ ತರುಣ್ ರಾಜ್‌ಗೆ ಸೇರಿದ ಎರಡು ಮನೆಗಳು ಸೇರಿದಂತೆ ನಗರದ 8 ಸ್ಥಳಗಳ ಮೇಲೆ ದಾಳಿ ನಡೆಸಿ, ಮಹತ್ವದ ದಾಖಲೆಗಳನ್ನು ಜಪ್ತಿ ಮಾಡಿದ್ದಾರೆ.

# ಭಾರತದೊಂದಿಗೆ 'ಅರ್ಥಪೂರ್ಣ ಮಾತುಕತೆಗೆ' ಪಾಕಿಸ್ತಾನ ಸಿದ್ಧ

## ಪ್ರಧಾನಿ ಶೆಹಬಾಜ್ ಷರೀಫ್



**ಇಸ್ಲಾಮಾಬಾದ್:** ಧೀರ್ಘಕಾಲದಿಂದ ಬಾಕಿ ಇರುವ ಎಲ್ಲಾ ವಿವಾದಗಳನ್ನು ಬಗೆಹರಿಸಿಕೊಳ್ಳಲು ಭಾರತದೊಂದಿಗೆ 'ಅರ್ಥಪೂರ್ಣ ಮಾತುಕತೆ' ಯಲ್ಲಿ ತೊಡಗಿಸಿಕೊಳ್ಳುವ ಪಾಕಿಸ್ತಾನದ ಇಚ್ಛೆಯನ್ನು ಪ್ರಧಾನಿ ಶೆಹಬಾಜ್ ಷರೀಫ್ ಬುಧವಾರ ಪುನರುಚ್ಚರಿಸಿದ್ದಾರೆ.

ಬ್ರಿಟಿಷ್ ಹೈಕಮಿಷನರ್ ಜೇನ್ ಮ್ಯಾರಿಯೊಟ್ ಅವರನ್ನು ಪ್ರಧಾನ ಮಂತ್ರಿ ಭವನದಲ್ಲಿ ಭೇಟಿಯಾದ ಸಂದರ್ಭದಲ್ಲಿ ಶೆಹಬಾಜ್ ಷರೀಫ್ ಈ ರೀತಿಯ ಹೇಳಿಕೆ ನೀಡಿದ್ದಾರೆ ಎಂದು ಅಧಿಕೃತ ಹೇಳಿಕೆಯೊಂದು ತಿಳಿಸಿದೆ.

ಉಭಯ ನಾಯಕರು ದಕ್ಷಿಣ ಏಷ್ಯಾ, ಮಧ್ಯಪ್ರಾಚ್ಯದಲ್ಲಿನ ಪ್ರಾದೇಶಿಕ ಬೆಳವಣಿಗೆಗಳು ಮತ್ತು ಪಾಕಿಸ್ತಾನ–ಯುನೈಟೆಡ್ ಕಿಂಗ್‌ಡಮ್ ನಡುವೆ ನಡೆಯುತ್ತಿರುವ ದ್ವಿಪಕ್ಷೀಯ ಸಹಕಾರದ ಕುರಿತು ಚರ್ಚಿಸಿದ್ದಾರೆ. ಇತ್ತೀಚಿನ ಪಾಕಿಸ್ತಾನ–ಭಾರತ ಬಿಕ್ಕಟ್ಟಿನ ಸಂದರ್ಭದಲ್ಲಿ ಉದ್ವಿಗ್ನತೆ ಕಡಿಮೆ ಮಾಡುವಲ್ಲಿ ಯುಕೆಯ ನೆರವಿಗೆ ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಬಾಕಿ ಇರುವ ಎಲ್ಲಾ ವಿವಾದಗಳನ್ನು ಬಗೆಹರಿಸಿಕೊಳ್ಳಲು ಭಾರತದೊಂದಿಗೆ ಅರ್ಥಪೂರ್ಣ ಮಾತುಕತೆಗೆ ಪಾಕಿಸ್ತಾನ ಸಿದ್ಧವಿರುವುದಾಗಿ ಪುನರುಚ್ಚರಿಸಿದರು ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಟ್ಟುಕೊಂಡು ಭಾರತ ಮೇ 7 ರಂದು 'ಆಪರೇಷನ್ ಸಿಂಧೂರ್' ಆರಂಭಿಸಿದ ನಂತರ ಉದ್ವಿಗ್ನತೆ ಉಂಟಾಗಿತ್ತು. ನಾಲ್ಕು ದಿನಗಳ ಮಿಲಿಟರಿ ಕಾರ್ಯಾಚರಣೆ ಬಳಿಕ ಮೇ 10 ರಂದು ಕದನ ವಿರಾಮ ಒಪ್ಪಂದಕ್ಕೆ ಉಭಯ ರಾಷ್ಟ್ರಗಳು ಸಮ್ಮತಿ ನೀಡಿದ್ದವು.

ಆದಾಗ್ಯೂ, ಪಾಕಿಸ್ತಾನ ಜೊತೆಗಿನ ಯಾವುದೇ ಮಾತುಕತೆಯು ಭಯೋತ್ಪಾದನೆಯ ವಿಷಯಗಳು ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ವಾಪಸಾತಿಗೆ ಸೀಮಿತವಾಗಿರಬೇಕು ಎಂದು ಭಾರತ ಹೇಳುತ್ತಿದೆ.

ಪಾಕಿಸ್ತಾನ–ಯುಕೆ ದ್ವಿಪಕ್ಷೀಯ ಸಂಬಂಧಗಳಲ್ಲಿ ಬಲವರ್ಧನೆಯಾಗಿರುವುದಾಗಿ ಹೇಳಿದ ಪ್ರಧಾನಿ ಷರೀಫ್, ಉಭಯ ದೇಶಗಳ ಇತ್ತೀಚಿನ ವ್ಯಾಪಾರ ಮಾತುಕತೆಗಳನ್ನು ಸ್ವಾಗತಿಸಿದ್ದಾರೆ. ಇದರಿಂದ ಪರಸ್ಪರ ಪ್ರಯೋಜನವಾಗಲಿದೆ ಎಂದು ಹೇಳಿದ್ದಾರೆ. ಪಾಕಿಸ್ತಾನ ಇಂಟರ್ ನ್ಯಾಷನಲ್ ಏರ್ ಲೈನ್ಸ್ ವಿಮಾನಗಳನ್ನು ಪುನರಾಂಭಿಸುವ ಯುಕೆ ಸರ್ಕಾರದ ನಿರ್ಧಾರವನ್ನು ಶ್ಲಾಘಿಸಿದ್ದಾರೆ. ಇದು ಬ್ರಿಟಿಷ್ ಪಾಕಿಸ್ತಾನಿ ಜನರ ಸುಲಭ ಪ್ರಯಾಣ ಮತ್ತು ಜನರೊಂದಿಗೆ ವಿನಿಮಯ ಹೆಚ್ಚಿಸುವ ಒಂದು ಪ್ರಮುಖ ಹೆಜ್ಜೆಯಾಗಲಿದೆ ಎಂದು ವಿವರಿಸಿದ್ದಾರೆ.

# ಬೆಳೆ ಸಮೀಕ್ಷೆಗೆ ಮೊಬೈಲ್ ಆ್ಯಪ್ ಬಿಡುಗಡೆ

**ಹೊನ್ನಾಳಿ :** ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಪ್ರಾರಂಭವಾಗಿದ್ದು, ಈ ಸಂಬಂಧ ಕೃಷಿ ಇಲಾಖೆ,ಆ್ಯಪ್ ಬಿಡುಗಡೆ ಮಾಡಿದೆ. ರೈತರು ತಾವೇ ಬೆಳೆ ಸಮೀಕ್ಷೆ ಮಾಡಿ, ಬೆಳೆಗಳ ಚಿತ್ರವನ್ನು ಅಪ್ ಲೋಡ್ ಮಾಡಬಹುದು ಎಂದು ಹೊನ್ನಾಳಿ ಉಪ ವಿಭಾಗ ಕೃಷಿ ನಿರ್ದೇಶಕ ರೇವಣ್ಣ ಸಿದ್ದನಗೌಡ ತಿಳಿಸಿದರು.

ತಾಲೂಕಿನ ಗೊಲ್ಲರಹಳ್ಳಿ ಗ್ರಾಮದ ಜಮೀನಿನಲ್ಲಿ ಬುಧವಾರ ಬೆಳೆ ಚಿತ್ರ ತೆಗೆಯುವ ಬಗ್ಗೆ ಇದ್ದ. ಸಮಸ್ಯೆಗಳನ್ನು ಬಗೆಹರಿಸಿ ರೈತರಿಗೆ ಮನವರಿಕೆ ಮಾಡಿಕೊಟ್ಟರು.

ರೈತರು ಬೆಳೆಯ ಸಮೀಕ್ಷೆಯನ್ನು ತಮ್ಮ ಗ್ರಾಮಗಳ ಪಿ.ಆರ್(ಖಾಸಗಿ ನಿವಾಸಿಗಳ ಜತೆಯಲ್ಲಿ ತಮ್ಮ ಜಮೀನಿನಲ್ಲಿ ಬೆಳೆದ ಬೆಳೆಯನ್ನು ಸಮೀಕ್ಷೆ ಮಾಡಿಸಿಕೊಂಡು ಪಹಣಿಯಲ್ಲಿ ಬೆಳೆ ನಮೂದಾಗುವ ಹಾಗೇ ಜವಾಬ್ದಾರಿ ವಹಿಸಲು ತಿಳಿಸಿದರು.

ಬೆಳೆ ವಿಮೆ, ಬೆಳೆ ಸಾಲ, ಎಪಿಎಂಸಿ ಮಾರುಕಟ್ಟೆಗೆ ಉತ್ಪನ್ನ ಮಾರಲು ಮತ್ತು ಬೆಳೆ ಪರಿಹಾರಕ್ಕಾಗಿ ಮೊಬೈಲ್ ಬೆಳೆ ಸಮೀಕ್ಷೆ ಮಹತ್ತರವಾದ ಪಾತ್ರವಹಿಸಲಿದ್ದು, ಉಪಯೋಗ ಮಾಡಿಕೊಳ್ಳಬೇಕೆಂದು ಇದರ

ಹೊನ್ನಾಳಿ ತಾಲೂಕಿನ ಗೊಲ್ಲರಹಳ್ಳಿ ಗ್ರಾಮದ ಜಮೀನಿನಲ್ಲಿ ಬುಧವಾರ ರೈತರಿಗೆ ಬೆಳೆ ಚಿತ್ರ ತೆಗೆಯುವ ಬಗ್ಗೆ ಇದ್ದ ಸಮಸ್ಯೆಗಳನ್ನು ಹೊನ್ನಾಳಿ ಉಪವಿಭಾಗ ಕೃಷಿ ನಿರ್ದೇಶಕ ರೇವಣ್ಣಸಿದ್ದನಗೌಡ ಬಗೆಹರಿಸಿ ಮನವರಿಕೆ ಮಾಡಿಕೊಟ್ಟರು. ಕೃಷಿ ಅಧಿಕಾರಿ ಅತಿಲ್ಲಾ, ಸಂಜಿವ್ ಹಾಗೂ ಮಂಜುನಾಥ್ ಇದ್ದರು.

ಸಲಹೆ ನೀಡಿದರು. ಕೃಷಿ ಅಧಿಕಾರಿ ಆತೀಶ್ ಉಲ್ಲಾ ಮಾತನಾಡಿ, ಖಾಸಗಿ ನಿವಾಸಿಗಳು ನಮೂದಿಸಿರುವ ಬೆಳೆಯನ್ನು ಪರಿಶೀಲಿಸಲು ಮೊಬೈಲ್ ನಲ್ಲಿ ಬೆಳೆ ದರ್ಶಕ್ ಆ್ಯಪ್ ಡೌನ್ ಲೋಡ್ ಮಾಡಿಕೊಂಡು ಬೆಳೆ ನಮೂದಾಗಿರುವ ಕುರಿತು ಸ್ವತಃ ರೈತರೇ ಪರಿಶೀಲನೆ ಮಾಡಿಕೊಳ್ಳಬಹುದು ಒಂದು ವೇಳೆ

ಬೆಳೆ ವ್ಯತ್ಯಾಸವಾಗಿದಲ್ಲಿ ಆಕ್ಷೇಪಣೆ ಸಲ್ಲಿಸಿ ಗ್ರಾಮಕ್ಕೆ ನೇಮಿಸಿರುವ ಮೇಲ್ವಿಚಾರಕರ ಮೂಲಕ ಬೆಳೆಯನ್ನು ಬದಲಾಯಸಿಕೊಳ್ಳಬಹುದು ಎಂದು ತಿಳಿಸಿದರು. ಸಂಜೀವ್, ಕೃಷಿ ಸಂಜೀವಿನಿ ವಾಹನ ಚಾಲಕ ಮಂಜುನಾರ್ ಇತರರು ಹಾಜರಿದ್ದರು

# ಯೋಜನೆ ಅನುಷ್ಠಾನ ಮಾಡುವ ಗ್ರಾಮಕ್ಕೆ ರೂ.01 ಕೋಟಿ ಅನುದಾನ

**ಹಾಸನ :** ಮಾದರಿ ಸೌರಗ್ರಾಮಯೋಜನೆಯಡಿಯಲ್ಲಿ ಭಾರತ ಸರ್ಕಾರ ಸೌರ ವಿದ್ಯುತ್‌ಉತ್ಪಾದನೆಯ ಪಾಲನ್ನು ಹೆಚ್ಚಿಸುವಗುರಿ ಹೊಂದಿದ್ದು, ಈ ನಿಟ್ಟಿನಲ್ಲಿ ಹಾಸನ ಜಿಲ್ಲೆಯ 08 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ.

ಎಂಎನ್‌ಆರ್‌ಇ ಮಾದರಿ ಸೂಚಿಯಂತೆ ಪ್ರತಿಜಿಲ್ಲೆಯಲ್ಲಿ 5 ಸಾವಿರಕ್ಕಿಂತ ಹೆಚ್ಚಿನಜನಸಂಖ್ಯೆ ಹೊಂದಿರುವ ಹಾಲಿ ವಿದ್ಯುತ್‌ಜಾಲದಿಂದ ಸಂಪರ್ಕ ಹೊಂದಿರುವಕಂದಾಯ ಗ್ರಾಮಗಳು ಸ್ಪರ್ಧಿಸುವ ಅವಕಾಶ ಇರುವುದರಿಂದ ಬೇಲೂರುತಾಲೂಕಿನ ಹಳೇಬೀಡು, ಚನ್ನರಾಯಪಟ್ಟಣತಾಲೂಕಿನ ಶ್ರವಣಬೆಳಗೊಳ, ಹಿರೀಸಾವೆ ಅರಸೀಕೆರೆ ತಾಲೂಕಿನ ಬಾಣಾವರ, ಜಾವಗಲ್, ಹಾರನಹಳ್ಳಿ ಹೊಳೆನರಸೀಪುರ ತಾಲೂಕಿನ ಹಳ್ಳಿಮೈಸೂರು ವ ತ್ತುಅರಕಲಗೂಡುತಾಲೂಕಿನಕೊಣನೂರು ಗ್ರಾಮಗಳನ್ನು ಪೊಟೆನ್ಸಿಯಲ್‌ಕ್ಯಾಂಡಿಡೇಟ್ ಗ್ರಾಮಗಳಾಗಿ ಗುರುತಿಸಲಾಗಿದೆ.

ಪೊಟೆನ್ಸಿಯಲ್‌ಕ್ಯಾಂಡಿಡೇಟ್ ಗ್ರಾಮಗಳಾಗಿ ಆಯ್ಕೆಯಾಗಿರುವ ಗ್ರಾಮಗಳಿಗೆ 2025 ರಜುಲೈ 01 ರಿಂದ 6 ತಿಂಗಳ ಅವಧಿ (31-12-2025)

ನೀಡಲಾಗಿದ್ದು, ಈ ಅವಧಿಯಲ್ಲಿ ವಿವಿಧ ಯೋಜನೆಗಳನ್ನು ಗರಿಷ್ಠ ಮಟ್ಟದಲ್ಲಿಅನುಷ್ಠಾನಗೊಳಿಸಿ ಹೆಚ್ಚಿನ ನವೀಕರಿಸಬಹುದಾದ ಸೌರವಿದ್ಯುತ್‌ಉತ್ಪಾದನೆಯಗುರಿಯನ್ನು ಸಾಧಿಸುವಗ್ರಾಮವನ್ನು ಮಾದರಿ ಸೌರಗ್ರಾಮಎಂದುಆಯ್ಕೆ ಮಾಡಲಾಗುವುದು. ಆಯ್ಕೆ ಆಗುವ ಮಾದರಿ ಸೌರಗ್ರಾಮಕ್ಕೆರೂ. 1 ಕೋಟಿಕೇಂದ್ರಿಯ ಹಣಕಾಸಿನ ಸಹಾಯ (ಸಿಎಫ್‌ಎ) ಅನುದಾನ ನೀಡಲಾಗುವುದು. ಈ ಚಟುವಟಿಕೆಗಳನ್ನು ಆಯಾಯ ಪಂಚಾಯತ್ ಕಾರ್ಯದರ್ಶಿಗಳ ನೇತೃತ್ವದಲ್ಲಿಗ್ರಾಮ ಮಟ್ಟದಟಾಸ್ಕ್ ಫೋರ್ಸ್ ಸಮಿತಿರಚಿಸಲಾಗುವುದು.

ಈ ಹಿನ್ನಲೆಯಲ್ಲಿಜನಸಾಮಾನ್ಯರು ಹೆಚ್ಚಿನ ಸಂಖ್ಯೆಯಲ್ಲಿಕೇಂದ್ರ ಸರ್ಕಾರದಿಂದ ಹೊರಡಿಸಿರುವ ಪಿ.ಎಂ.ಸೂರ್ಯಘರ್-ಮುಫ್ತ್ ಬಿಜಲಿ ಯೋಜನೆ, ಕುಸುಮ-ಬಿ, ಕುಸುಮ-ಸಿ ಯೋಜನೆಗಳ ವಿದ್ಯುತ್ ಸವಲತ್ತುಗಳನ್ನು ಪಡೆಯುವುದು. ಮುಂದುವರೆದು ಈ ನಿಟ್ಟಿನಲ್ಲಿ ಪಂಚಾಯತ್‌ಗಳು

ನಿರೀಕ್ಷಿತ ಫಲಾನುಭವಿಗಳು, ಬ್ಯಾಂಕ್‌ಗಳು, ಅನುಮೋದನೆ ಹೊಂದಿರುವ ಮಾರಾಟಗಾರರ ನಡುವೆ ಸಂಪರ್ಕಕಲ್ಪಿಸುವುದುಆಗಿದೆ. ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಈ ಯೋಜನೆಅನುಷ್ಠಾನಕ್ಕೆ ಮಾರ್ಗಸೂಚಿಯಂತೆ ಸಮಿತಿಯನ್ನುರಚಿಸಲಾಗಿದೆ. ಜಿಲ್ಲಾಧಿಕಾರಿರವರುಅಧ್ಯಕ್ಷರಾಗಿದ್ದು, ಜಿಲ್ಲಾ ಪಂಚಾಯತ್ ಸಿಇಒ, ತಹಶೀಲ್ದಾರರು, ಚಾವಿಸನಿನಿ ಇಂಜಿನಿಯರ್‌ಗಳು, ಪಂಚಾಯತ್‌ಅಭಿವೃದ್ಧಿ ಅಧಿಕಾರಿಗಳು, ಇತರರು ಸದಸ್ಯರಾಗಿಕಾರ್ಯ ನಿರ್ವಹಿಸಲಿದ್ದಾರೆಎಂದು ಚಾವಿಸನಿನಿ ಹಾಸನ ಕಾರ್ಯ ಮತ್ತು ಪಾಲನಾ ವೃತ್ತದಅಧೀಕ್ಷಕಇಂಜಿನಿಯರ್ ತಿಳಿಸಿದ್ದಾರೆ.

# ಕಂಪ್ಯೂಟರೈಸ್ಡ್ ಅಕೌಂಟಿಂಗ್ ಕುರಿತ ಉಚಿತ ತರಬೇತಿ

**ಚಿಕ್ಕಮಗಳೂರು:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಕಂಪ್ಯೂಟರೈಸ್ಡ್ ಅಕೌಂಟಿಂಗ್ (ಜಿಎಸ್‌ಟಿ ಟ್ಯಾಲಿ) ಕುರಿತ 38 ದಿನಗಳ ಉಚಿತ ತರಬೇತಿಯನ್ನು ಆಗಸ್ಟ್ 23 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿಯನ್ನು ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರಬೇಕು. ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9481506564, 9113880324 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷ್ಣಾ-ತುಂಗಭದ್ರಾ ಪಾತ್ರದಲ್ಲಿ ಪ್ರವಾಹ

## ನದಿ ತೀರದ ಗ್ರಾಮಗಳಿಗೆ ಜಲದಿಬ್ಬಂಧನ । ಎರಡು ಸೇತುವೆ ಮುಳುಗಡೆ । ಹಲವೆಡೆ ಮಳೆ ಕ್ಷೀಣ

**ಬೆಂಗಳೂರು:** ಮಲೆನಾಡು ಹಾಗೂ ಮಹಾರಾಷ್ಟ್ರ ಭಾಗದಲ್ಲಿ ಹೆಚ್ಚಿನ ಮಳೆಯಾಗುತ್ತಿ. ರುವುದರಿಂದ ತುಂಗಭದ್ರಾ ಹಾಗೂ ಕೃಷ್ಣಾನದಿ ತೀರದಲ್ಲಿ ಪ್ರವಾಹ ಭೀತಿ ಉಂಟಾಗಿದೆ. ತುಂಗಭದ್ರಾ ಜಲಾಶಯದಿಂದ ನದಿಗೆ 1.30 ಲಕ್ಷ ಕ್ಯೂಸೆಕ್ ಹಾಗೂ ನಾರಾಯಣಪುರ ಜಲಾಶಯದಿಂದ ಕೃಷ್ಣಾನದಿಗೆ 2.60 ಲಕ್ಷ ಕ್ಯೂಸೆಕ್ ನೀರು ಹರಿ ಬಿಟ್ಟಿರುವುದರಿಂದ ನದಿ ಪಾತ್ರದ ಹೊಲ ಗದ್ದೆಗಳು ಸಂಪೂರ್ಣ ಜಲಾವೃತವಾಗಿವೆ. ಎರಡೂ ನದಿಗಳಲ್ಲಿ ನೀರಿನ ಹರಿವು ಹೆಚ್ಚುವ ಹಿನ್ನೆಲೆಯಲ್ಲಿ ಜಿಲ್ಲೆಗೆ ಎನ್‌ಡಿಆರ್‌ಎಫ್ ತಂಡ ಆಗಮಿಸಿದ್ದು, ಪ್ರವಾಹ ವೇಳೆ ನದಿ ಪಾತ್ರದ ಜನರ ರಕ್ಷಣೆಗೆ ಮತ್ತು ಪರಿಸ್ಥಿತಿ ನಿಭಾಯಿಸಲು ಈ ತಂಡ ಅಗತ್ಯ ಸಿದ್ಧತೆ ಮಾಡಿಕೊಂಡಿದೆ.

**ಸಂಕಷ್ಟದಲ್ಲಿ ರಾಯಚೂರು:** ರಾಯಚೂರು ಜಿಲ್ಲೆಯು ಎರಡುನದಿಗಳನ್ನು ಒಳಗೊಂಡ ದೊಹಬ್ ಪ್ರದೇಶವೆಂದೇ ಗುರುತಿಸಿ ಕೊಂಡಿದ್ದು, ಕೃಷ್ಣಾ ನದಿ ವ್ಯಾಪ್ತಿಗೆ ಲಿಂಗಸುಗೂರು, ದೇವದುರ್ಗ ಹಾಗೂ ರಾಯಚೂರು ತಾಲೂಕಿನಲ್ಲಿ ಒಟ್ಟು 72 ಗ್ರಾಮಗಳು ಬರುತ್ತವೆ. ಈ ಪೈಕಿ ಲಿಂಗಸೂಗೂರು ತಾಲೂಕಿನ 13. ದೇವದುರ್ಗ ತಾಲೂಕಿನ 42 ಗ್ರಾಮಗಳಿಗೆ ಕೃಷ್ಣಾ ನದಿಯಿಂದ 4.5 ರಿಂದ 7 ಲಕ್ಷ ಕ್ಯೂಸೆಕ್, ರಾಯಚೂರು ತಾಲೂಕಿನ 17 ಗ್ರಾಮಗಳಿಗೆ 6 ರಿಂದ 7 ಲಕ್ಷ ಕ್ಯೂಸೆಕ್ ನೀರು ಬಂದರೆ ಪ್ರವಾಹ ಉಂಟಾಗುತ್ತದೆ. ಇನ್ನು ತುಂಗಭದ್ರಾ ಡ್ಯಾಂನಿಂದ ನದಿಗೆ 3 ರಿಂದ 5 ಲಕ್ಷ ಕ್ಯೂಸೆಕ್ ನೀರು ಬಿಟ್ಟರೆ ಜಿಲ್ಲೆಯ 33 ಗ್ರಾಮಗಳಲ್ಲಿ ಪ್ರವಾಹ ಪರಿಸ್ಥಿತಿ ಎದುರಾಗುತ್ತದೆ. ಈ ಪೈಕಿ ಸಿಂಧನೂರು ತಾಲೂಕಿನ 13, ಮಾನ್ವಿ ತಾಲೂಕಿನ 11 ಹಾಗೂ



ರಾಯಚೂರು ತಾಲೂಕಿನ 9 ಗ್ರಾಮಗಳು ಪ್ರವಾಹ ಭೀತಿ ಎದುರಿಸಬೇಕಾಗುತ್ತದೆ. ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಹೆಚ್ಚು ಮಳೆಯಾಗುತ್ತಿರುವುದರಿಂದ ನದಿ ತಟದ ಪ್ರದೇಶದಲ್ಲಿ ಅಪಾರ ಬೆಳೆ ಜಲಾವೃತಗೊಂಡು ನಷ್ಟ ಸಂಭವಿಸಿದೆ. ವಿವಿಧ ಕೃಷಿ, ತೋಟಗಾರಿಕೆ ಬೆಳೆಗಳು ಜಲಾವೃತಗೊಂಡಿವೆ. ತಾಲೂಕಿನ ತುಂಗಭದ್ರಾ ನದಿ ತೀರದ ಬಿಚ್ಚಾಲಿಯಲ್ಲಿರುವ ರಾಯರ ಏಕಶಿಲಾ ವೃಂದಾವನ ಜಲಾ ವೃತವಾಗಿದೆ.

ಪಶ್ಚಿಮಘಟ್ಟ ಹಾಗೂ ಜಿಲ್ಲೆಯಲ್ಲಿ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ ಚಿಕ್ಕೋಡಿ ಉಪ ವಿಭಾಗದ ನದಿಗಳು ಉಕ್ಕಿ ಹರಿಯುತ್ತಿದ್ದು, ಕೃಷ್ಣಾ ನದಿಗೆ 1.47 ಲಕ್ಷ ಕ್ಯೂಸೆಕ್ ನೀರು ಹರಿದು ಬರುತ್ತಿರುವುದರಿಂದ ನದಿ ತೀರದ ಗ್ರಾಮಗಳಲ್ಲಿ ಪ್ರವಾಹದ ಭೀತಿ ಎದುರಾಗಿದೆ. ನಿಪ್ಪಾಣಿ ತಾಲೂಕಿನ ವೇದಗಂಗಾ ನದಿ ಹುನರಗಿ ಗ್ರಾಮಕ್ಕೆ ನೀರು ನುಗ್ಗಿದ್ದರಿಂದ 40 ಕುಟುಂಬಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಜಿಲ್ಲೆಯಲ್ಲಿ ನದಿಗಳ ನೀರಿನಮಟ್ಟ ಹೆಚ್ಚಳದಿಂದ ಒಟ್ಟು 26 ಸೇತುವೆ ಜಲಾವೃತಗೊಂಡಿದ್ದು, ಮಾರ್ಕಂಡೇಯ, ಘಟಪ್ರಭಾ ಮತ್ತು ಹಿರಣ್ಯಕೇಶಿ ನದಿಗಳು ಅಪಾಯಮಟ್ಟ ಮೀರಿ ಹರಿಯುತ್ತಿರುವುದರಿಂದ ಗೋಕಾಕ ನಗರದ 200 ಕುಟುಂಬಗಳನ್ನು ಸ್ಥಳಾಂತರಿಸಲಾಗಿದೆ. ರಾಮದುರ್ಗ ಪಟ್ಟಣದ ಮಣ್ಣಿನ ಮನೆಯ ಛಾವಣಿ ಕುಸಿದು ವೃದ್ಧ ನಿಂಗಾಪೂರ ಪೇಟೆಯ ನಿವಾಸಿ ವಾಮನ ಬಾಪೂ ಪವಾರ (75) ಮೃತಪಟ್ಟಿದ್ದಾರೆ.

ಉಕ್ಕುತ್ತಿವೆ ಘಟಪ್ರಭೆ, ಮಲಪ್ರಭೆ: ಬಾಗಲಕೋಟೆ ಜಿಲ್ಲೆಯಲ್ಲಿ ಒಂದು ಕಡೆ ಪ್ರವಾಹ, ಮತ್ತೊಂದು ಕಡೆ ಅತಿವೃಷ್ಟಿ ಉಂಟಾಗಿದೆ. ಕೃಷ್ಣ, ಘಟಪ್ರಭಾ ಮತ್ತು ಮಲಪ್ರಭಾ ನದಿಗಳು ಏಕಕಾಲಕ್ಕೆ ಉಕ್ಕಲು ಆರಂಭಿಸಿವೆ. ಘಟಪ್ರಭಾ ನದಿ ಒಡಲು ಹಾಗೂ ಮಲಪ್ರಭಾ ತೀರದಲ್ಲಿ ಪ್ರವಾಹ ಭೀತಿ ಶುರುವಾಗಿದೆ.

### ವಿದ್ಯುತ್ ದೀಪಗಳಿಂದ ಹೆಚ್ಚಿದ ಜಲರಾಶಿಯ ಸೊಬಗು

ಸಾಗರ ತಾಲೂಕು ಲಿಂಗನಮಕ್ಕಿ ಅಣೆಕಟ್ಟೆಯ ರೇಡಿಯಲ್ ಗೇಟ್‌ಗೆ ಕೆಪಿಸಿ ಅಧಿಕಾರಿಗಳು ವಿದ್ಯುತ್ ದೀಪಗಳನ್ನು ಅಳವಡಿಸಿದ್ದು, ಹೊರ ಹರಿಯುತ್ತಿರುವ ಜಲರಾಶಿಯು ವಿದ್ಯುತ್ ದೀಪಗಳ ಸ್ಪರ್ಶದಿಂದ ಸೌಂದರ್ಯ ಹೆಚ್ಚಿಸಿದೆ.

ಹಲವೆಡೆ ಮಳೆ ಕ್ಷೀಣ ಹಲವು ದಿನಗಳಿಂದ ರಾಜ್ಯದಲ್ಲಿ ಆರ್ಭಟಿಸುತ್ತಿದ್ದ

ರಾಜ್ಯದೆಲ್ಲೆಡೆ ಮಳೆ, ಬುಧವಾರದಿಂದ ಇಳಿಮುಖವಾಗಿದೆ. ಇಳಿಮುಖ

ಕರಾವಳಿ, ಮಲೆನಾಡು ಮತ್ತು ಉತ್ತರ ಕರ್ನಾಟಕ ಸೇರಿ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಆ.21ರಿಂದ ಆ.26ರವರೆಗೆ ಒಣಹವೆ ಕಾಣಿಸಿಕೊಳ್ಳಲಿದೆ. ಈ ಅವಧಿಯಲ್ಲಿ ಕೆಲ ಜಿಲ್ಲೆಗಳಲ್ಲಿ ಮಾತ್ರ ಸಾಧಾರಣ ಮಳೆ ಸುರಿಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ಕೊಟ್ಟಿದೆ. ಮುಂಗಾರು ಪ್ರಬಲವಾಗಿದ್ದ ಕಾರಣ 20 ದಿನದಲ್ಲಿ ವಾಡಿಕೆಗಿಂತ ಶೇ.18 ಅಧಿಕ ಮಳೆಯಾಗಿದೆ. ಕರಾವಳಿ, ಮಲೆನಾಡು ವ್ಯಾಪ್ತಿಯ ಪ್ರದೇಶಗಳಲ್ಲಿ ಶೇ.20 ಮಳೆ ಕೊರತೆ ಉಂಟಾಗಿದೆ. ಜು.25ರವರೆಗೆ ರಾಜ್ಯಾದ್ಯಂತ 63.19 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಬಿತ್ತನೆಯಾಗಿದೆ.

### ಕಡರನಾಯ್ಕನಹಳ್ಳಿ: ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ಚಿತ್ರ, ವಿಡಿಯೊ


# ಚಿರತೆ ವದಂತಿ: ಗ್ರಾಮಗಳಲ್ಲಿ ನೀಗದ ಭೀತಿ

**ಕಡರನಾಯ್ಕನಹಳ್ಳಿ:** ಸಮೀಪದ ನಂದಿಗಾವಿ ಬಳಿ ಚಿರತೆ ಮರಿಗಳು: ಸಿಕ್ಕಿವೆ ಎಂಬ ವದಂತಿ ಕಾಡಿಚ್ಚಿನಂತೆ ಎಲ್ಲೆಡೆ ಹರಡಿದೆ. ಚಿರತೆ ಇದೆ ಎಂಬುದಾಗಿ ದಿನಕ್ಕೊಂದು ಕಡೆಯಿಂದ ಸುದ್ದಿಗಳು ಹರಡುತ್ತಿವೆ. ಕೃಷಿ ಚಟುವಟಿಕೆಯಲ್ಲಿ ತೊಡಗಿರುವ ರೈತರು ಆತಂಕದಲ್ಲೇ ದಿನ ದೂಡುವಂತಾಗಿದೆ.

ಹೊಳೆಸಿರಿಗೆರೆ ಯಲವಟ್ಟಿ ರಸ್ತೆಯ ಅಡಿಕೆ ತೋಟದಲ್ಲಿ ಇತ್ತೀಚೆಗೆ 20 ಕುರಿಗಳನ್ನು ಚಿರತೆಗಳು ಬಲಿ ತಗೆದುಕೊಂಡ ಬಳಿಕ ನಂದಿಗಾವಿ ಸೇರಿದಂತೆ ನಾಲ್ಕು ಕಡೆ ಚಿರತೆ ಸೆರೆಗೆ ಬೋನು ಅಳವಡಿ ಸಲಾಗಿದೆ. ಈ ಮಧ್ಯೆ, ಚಿರತೆಯದ್ದು ಎನ್ನಲಾದ ಎರಡು ಮರಿಗಳು

ಈವರೆಗೆ ಚಿರತೆಯ ಹೆಜ್ಜೆ ಗುರುತು ಕಂಡುಬಂದಿಲ್ಲ.

ಮಳೆ ಬರುತ್ತಿರುವುದರಿಂದ ಹೊಲಗದ್ದೆಗಳಲ್ಲಿ ಕೆಸರು ಇದ್ದು, ನರಿ, ನಾಯಿಗಳ ಹೆಜ್ಜೆಗಳು ಜನರಲ್ಲಿ ಗೊಂದಲ



ಮೂಡಿಸುತ್ತಿವೆ. ಅರಣ್ಯ ಇಲಾಖೆ ತೀವ್ರ ನಿಗಾ ವಹಿಸಿದೆ

ನಂದಿಗಾವಿ ಬಳಿ ದೊರೆತಿವೆ ಎಂದು ಗ್ರಾಮಸ್ಥರು ಹೇಳಿರುವ ವಿಡಿಯೊ, ಫೋಟೊಗಳು ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿವೆ. ಈ ಸುದ್ದಿ ಸುತ್ತಮುತ್ತಲಿನ

ಗ್ರಾಮಗಳಲ್ಲಿ ಆತಂಕ ಸೃಷ್ಟಿಸಿದೆ. 'ಚಿರತೆಯು ಭಾನುವಳ್ಳಿ ಬಳಿ ಇದೆ, ಕಮಲಾಪುರ ರಸ್ತೆಯಲ್ಲಿ ಕಾಣಿಸಿದೆ'

ಸಿಕ್ಕಿರುವುದು ಚಿರತೆಯ ಮರಿಗಳಲ್ಲ. ಅವು ಕಾಡು ಬೆಕ್ಕಿನ ಮರಿಗಳು.

ಮರಿಗಳನ್ನು ಅಲ್ಲಿಯೇ ಬಿಟ್ಟರೆ ತಾಯಿ ಬೆಕ್ಕು ತೆಗೆದುಕೊಂಡು ಹೋಗುತ್ತದೆ. ನಮ್ಮಿಂದ ಅವುಗಳ ಪ್ರಾಣಕ್ಕೆ ತೊಂದರೆ ಆಗಬಾರದು ಡಾ ಬಾಬಾಬುಡನ್, ಪಶು ವೈದ್ಯಾಧಿಕಾರಿ, ಹೊಳೆ ಸಿರಿಗೆರೆಪರಿಶೀಲಿಸುತ್ತಿದ್ದಾರೆ.

ಕಡರನಾಯ್ಕನಹಳ್ಳಿ ಸಮೀಪದ ನಂದಿಗಾವಿ ಬಳಿ ಸಿಕ್ಕಿರುವ ಕಾಡು ಬೆಕ್ಕಿನ ಮರಿ ಎಂಬ ಕರೆಗಳು ಅರಣ್ಯ ಇಲಾಖೆಯನ್ನು ತಲುಪುತ್ತಿವೆ. ಡಿಆರ್‌ಎಫ್‌ಒ ಹಸನ್ ಭಾಷಾ ಮತ್ತು ಸಿಬ್ಬಂದಿ ಈ ಕುರಿತು

ಕಡರನಾಯ್ಕನಹಳ್ಳಿ ಹೊಸಪಾಳ್ಯ ರಸ್ತೆಯಲ್ಲಿ ಚಿರತೆ ನೋಡಿದ್ದಾಗಿ ರೈತರೊಬ್ಬರು ಹೇಳಿದ್ದರಿಂದ ಗ್ರಾಮ ಪಂಚಾಯಿತಿ ವತಿಯಿಂದ ಧ್ವನಿ ವರ್ಧಕಗಳ ಮೂಲಕ ಎಚ್ಚರಿಸಲಾಗಿದೆ. ಜನ ಸಾಮಾನ್ಯರು ಭಯ, ಆತಂಕದಲ್ಲೇ ಇದ್ದು, ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದೆ.

### ಸಿಮ್ಸ್ ವಿದ್ಯಾರ್ಥಿಗಳಿಬ್ಬರ ಸಾವು

**ಶಿವಮೊಗ್ಗ:** ಇಲ್ಲಿನ ಸಾಗರ ರಸ್ತೆಯ ಸರ್ಕ್ಯೂಟ್ ಹೌಸ್ ವೃತ್ತದಲ್ಲಿ ಬುಧವಾರ ಬೆಳಗಿನ ಜಾವ ಬೈಕ್ ಹಾಗೂ ನಂದಿನಿ ಹಾಲು ಸಾಗಣೆ ವಾಹನದ ನಡುವೆ ಮುಖಾಮುಖಿ ಡಿಕ್ಕಿಯಲ್ಲಿ ಇಬ್ಬರು ವೈದ್ಯಕೀಯ ವಿದ್ಯಾರ್ಥಿಗಳು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಬೈಕ್‌ನಲ್ಲಿದ್ದ ಇಲ್ಲಿನ ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ (ಸಿಮ್ಸ್) ಮೂರನೇ ವರ್ಷದ ಎಂಬಿಬಿಎಸ್ ವಿದ್ಯಾರ್ಥಿಗಳಾದ ಉಡುಪಿ ಬಳಿಯ ಕಟಪಾಡಿಯ ದೇವಪ್ಪ ದೊಡ್ಡಮನಿ ಅವರ ಪುತ್ರ ಆದಿತ್ಯ

(21) ಮತ್ತು ದಾವಣಗೆರೆ ಜಿಲ್ಲೆ ನ್ಯಾಮತಿಯ ನಿವೃತ್ತ ವೆಟರ್ನರಿ ಇನ್‌ಸ್ಪೆಕ್ಟರ್ ಸುರೇಶಪ್ಪ ಅವರ ಪುತ್ರ ಸಂದೀಪ್ (21) ಮೃತಪಟ್ಟವರು. ಮಕ್ಕಳ ಶವ ಕೊಂಡೊಯ್ಯಲು ಬಂದ ಪೋಷಕರ ದುಃಖ ಮುಗಿಲುಮುಟ್ಟಿತ್ತು. ಇಂಟರ್ನಲ್

ಇದ್ದ ಕಾರಣ ರಾತ್ರಿಯಿಡೀ ಓದಿಕೊಂಡಿದ್ದ ಸ್ನೇಹಿತರು ಬೆಳಗಿನ ಜಾವ ಸಮೀಪದ ಬಂಕ್‌ನಲ್ಲಿ ಪೆಟ್ರೋಲ್ ತುಂಬಿಸಿಕೊಂಡು, ಅಲ್ಲಿಯೇ ಪಕ್ಕದ

ಕ್ಯಾಂಟಿನ್‌ನಲ್ಲಿ ಚಹಾ ಕುಡಿದು ವಾಪಸ್ ಕಾಲೇಜಿನ ಹಾಸ್ಟೆಲ್‌ಗೆ ಮರಳುವಾಗ ಅಪಘಾತ ಸಂಭವಿಸಿದೆ.

'ದೇಹದ ಯಾವುದೇ ಭಾಗದಲ್ಲಿ ಗಾಯದ ಗುರುತು ಇಲ್ಲ. ತಲೆಗೆ ಬಿದ್ದ ತೀವ್ರ ಪೆಟ್ಟಿನಿಂದಾಗಿ ಇಬ್ಬರೂ ಸಾವಿಗೀಡಾಗಿ ದ್ದಾರೆ. ಹೆಲ್ಮೆಟ್ ಹಾಕಿಕೊಂಡಿದ್ದರೆ ಬದು-ಕುಳಿಯುತ್ತಿದ್ದರು' ಎಂದು ಪೊಲೀಸರು ತಿಳಿಸಿದರು.

# ಸಿದ್ದುಗೆ ಖುದ್ದು ಕೃತಜ್ಞತೆ ಸಲ್ಲಿಸಿದ ಮಾದಿಗರು

## ಅಲೆಮಾರಿಗಳನ್ನು ಕೈಬಿಡದಂತೆ ಆಂಜನೇಯ ಆಗ್ರಹ

**ಬೆಂಗಳೂರು :** ಒಳಮೀಸಲಾತಿ ಅಧಿಕೃತವಾಗಿ ಬುಧವಾರ ಜಾರಿಗೊಳ್ಳುತ್ತಿದ್ದಂತೆ ಮಾಜಿ ಸಚಿವ ಎಚ್.ಆಂಜನೇಯ ನೇತೃತ್ವದಲ್ಲಿ ಮುಖ್ಯಮಂತ್ರಿ ನಿವಾಸ ಕಾವೇರಿ ಬಳಿ ನೂರಾರುಸಂಖ್ಯೆಯಲ್ಲಿ ಜಮಾಯಿಸಿದ ಮಾದಿಗ ಸಮುದಾಯದವರು, ಸಿದ್ದರಾಮಯ್ಯ ಬೃಹತ್ ಭಾವಚಿತ್ರಕ್ಕೆ ಹಾಲಿನಾಭಿಷೇಕದ ಜೊತೆಗೆ ಹೂವಿನ ಮಳೆ ಸುರಿಸಿದರು.

ಬಳಿಕ ಸಿಎಂ ನಿವಾಸ ಪ್ರವೇಶಿಸಿದ ಆಂಜನೇಯ ಇತರ ಪ್ರಮುಖ ಮುಖಂಡರು, ಬೃಹತ್ ಹೂವಿನಹಾರದೊಂದಿಗೆ ಸಿದ್ದರಾಮಯ್ಯ ಅವರನ್ನು ಅಭಿನಂದಿಸಿ, ಕೃತಜ್ಞತೆ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಎಚ್. ಆಂಜನೇಯ, ಒಳಮೀಸಲಾತಿ ಕಲ್ಪನೆ ಜನಕರಾದ ಮಾದಿಗ ಸಮುದಾಯದವರು 35 ವರ್ಷ ನಿರಂತರ ಹೋರಾಟ ನಡೆಸಿದ್ದು, ಸುಪ್ರೀಂ ಕೋರ್ಟ್ ತಮ್ಮ ಹಕ್ಕನ್ನುಪ್ರತಿಪಾದಿಸಿದ್ದರು ಎಂದು ತಿಳಿಸಿದರು.ಬಲಾಢ್ಯ ಸಮುದಾಯಗಳ ಮಧ್ಯೆ ಸರ್ಕಾರಿ ಸೌಲಭ್ಯ, ಉನ್ನತ ಉದ್ಯೋಗ-ಶಿಕ್ಷಣ ಪಡೆಯುವುದುಮಾದಿಗರು ಹಾಗೂ ಸಂಬಂಧಿತ ಜಾತಿಗಳಿಗೆ ಗಗನಕುಸುಮವಾಗಿತ್ತು. ಪೌರಕಾರ್ಮಿಕರು, ಸಫಾಯಿಕರ್ಮಚಾರಿಗಳಾಗಿ ಮಾದಿಗ ಸಮುದಾಯ ನೌಕರಿ ಪಡೆಯುವದಕ್ಕಷ್ಟೇ ಮೀಸಲಾತಿ ಸೀಮಿತವಾಗಿತ್ತು.

ಈ ಸತ್ಯವನ್ನು ಸರ್ಕಾರಗಳು ಹಾಗೂ ನ್ಯಾಯಾಂಗಕ್ಕೆ ಮನದಟ್ಟು



ಮಾಡಿಕೊಡಲಾಗಿತ್ತು ಎಂದರು.

ಪರಿಣಾಮ ಆಗಸ್ಟ್ 1, 2024ರಂದು ಒಳಮೀಸಲಾತಿ ಜಾರಿ ಅಧಿಕಾರ ರಾಜ್ಯ ಸರ್ಕಾರಗಳಿಗಿದೆಎಂಬ ತೀರ್ಪನ್ನು ಸುಪ್ರೀಂ ಕೋರ್ಟ್ ನೀಡುತ್ತಿದ್ದಂತೆ ತಾವು ಹೆಚ್ಚು ಕಾಳಜಿ ವಹಿಸಿ,ವೈಜ್ಞಾನಿಕವಾಗಿ ಮೀಸಲಾತಿ ಹಂಚಿಕೆಗೆ ಗಟ್ಟಿ ನಿರ್ಧಾರ ಕೈಗೊಂಡಿದ್ದರ ಫಲ ಇಂದು ಮಾದಿಗರು ಸಂಭ್ರಮಿಸುವಂತಾಗಿದೆ ಎಂದರು.ನ್ಯಾ.ನಾಗಮೋಹನ್ ದಾಸ್ ಆಯೋಗ ವರದಿ ಸಲ್ಲಿಸಿದ ಬಳಿಕ ಒಳಮೀಸಲಾತಿ ಜಾರಿ ಆಗದಂತೆ ಅನೇಕಶಕ್ತಿಗಳು ಅಡ್ಡಗಾಲು ಹಾಕಿದರು. ಆದರೆ, ತಾವು ಯಾವುದಕ್ಕೂ ಜಗ್ಗದೆ ನುಡಿದಂತೆನಡೆದಿದ್ದೀರಿ. ಅದರಲ್ಲೂ ಮಾದಿಗ ಸಮುದಾಯಕ್ಕೆ ಶೇ.6ರಷ್ಟು ಮೀಸಲಾತಿ ನೀಡಿಯೇ ಸಿದ್ಧಎಂದು ಅನೇಕ ವರ್ಷಗಳಿಂದ ಹೇಳುತ್ತಿದ್ದ ಮಾತಿನಂತೆ ನಡೆದುಕೊಂಡಿದ್ದೀರಿ. ಈ ಕಾರಣಕ್ಕೆಮಾದಿಗ ಸಮುದಾಯ ತಮಗೆ ಸದಾ ಕೃತಜ್ಞರಾಗಿರುತ್ತದೆ ಎಂದು ಹೇಳಿದರು.

ಯಾವುದೇ ಒತ್ತಡಕ್ಕೆ ಮಣಿಯದೆ ಒಳಮೀಸಲಾತಿ ಜಾರಿಗೊಳಿಸಿ ನುಡಿದಂತೆ ನಡೆಯುವ

ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದೀರಿ. ಆಯೋಗ ನೀಡಿದ್ದ ಐದು ಗುಂಪುಗಳಬದಲಾಗಿ ಮೂರು ವರ್ಗಗಳನ್ನಾಗಿಸಿದ್ದೀರಿ. ಅತ್ಯಂತ ಹಿಂದುಳಿದ ಮಾದಿಗ ಮತ್ತು ಸಂಬಂಧಿತ ಜಾತಿಗಳನ್ನು ಎ ಗುಂಪು ಎಂದೇ ಪರಿಗಣಿಸಬೇಕೆಂದು ಕೋರಿದರು.

ಮುಖ್ಯವಾಗಿ ಆಯೋಗ ಅಲೆಮಾರಿ ಸಮುದಾಯಗಳನ್ನು ಪ್ರತ್ಯೇಕ ಗುಂಪುಗಳನ್ನಾಗಿಸಿ ಶೇ.1ರಷ್ಟುಮೀಸಲಾತಿ ಕಲ್ಪಿಸಿತ್ತು. ಆಂಧ್ರ, ತೆಲಂಗಾಣದಲ್ಲಿ ಇದೇ ನೀತಿ ಅನುಸರಿಸಲಾಗಿತ್ತು.ಆದರೆ, ಇದನ್ನು ಕೈಬಿಟ್ಟು ಬೇರೆ ವರ್ಗದಲ್ಲಿ ಸೇರಿಸಿರುವುದು ಸಾಮಾಜಿಕ ನ್ಯಾಯದವಿರುದ್ಧವಾಗಿದೆ. ಈ ಸಂಬಂಧ ಅಲೆಮಾರಿ ಸಮುದಾಯದ ಮುಖಂಡರನ್ನು ಕರೆಯಿಸಿ ಅವರೊಂದಿಗೆಚರ್ಚಿಸಿ ಅವರಿಗೆ ಪ್ರತ್ಯೇಕ ಮೀಸಲಾತಿ ನೀಡಲು ಕ್ರಮಕೈಗೊಳ್ಳಬೇಕು. ಯಾವುದೇ ಕಾರಣಕ್ಕೂಅಲೆಮಾರಿಗಳನ್ನು

ತಾವು ಕೈಬಿಡಬಾರದು ಎಂದು ಮನವಿ ಮಾಡಿದರು.

ವಕೀಲ ರವೀಂದ್ರ ಮಾತನಾಡಿ, ಒಳಮೀಸಲಾತಿ ಜಾರಿಗೆ ದಶಕಗಳ ಕಾಲದಿಂದಲೂ ಅಡ್ಡಿಯಾಗಿದ್ದವರು

ನಾಗಮೋಹನ್ ದಾಸ್ ಆಯೋಗದ ವರದಿ ಜಾರಿಗೂ ತಡೆವೊಡ್ಡುವ ಪ್ರಯತ್ನ ನಡೆಸಿದ್ದರು. ತಾವುಯಾವುದಕ್ಕೂ ಮನ್ನಣೆ ನೀಡದೆ ಜಾರಿಗೊಳಿಸಿರುವುದು ಐತಿಹಾಸಿಕ ನಿರ್ಧಾರವಾಗಿದೆ. ಈಸಂಬಂಧ ಮಾದಿಗ ಮತ್ತು ಇತರ ಸಮುದಾಯಗಳು ತಮ್ಮನ್ನು ಸದಾ ಸ್ಮರಿಸುತ್ತವೆ ಎಂದುಕೃತಜ್ಞತೆ ಸಲ್ಲಿಸಿದರು. ಕೊಪ್ಪಳದ ಗುಳೇಪ್ಪ, ಗುಲ್ಬರ್ಗಾದ ಶ್ಯಾಮ್ ನಾಟಿಕೇರ್, ಬೀದರ್‌ನ ಚಂದ್ರಕಾಂತ್ ಇಪ್ಪಾಳ್ಗ, ಹೊಸಕೋಟೆ ಸುಬ್ಬಣ್ಣ, ಮಹದೇವಪುರದ ಚಿಮ್ಮಿ, ಹಾಸನದ ಶಂಕರ್‌ರಾಜ್,ಚಿತ್ರದುರ್ಗ ಶರಣಪ್ಪ, ನರಸಿಂಹರಾಜ್, ಮಾಗಡಿ ಮಂಜೇಶ್, ಬೆಂಗಳೂರಿನ ಮುತ್ತುರಾಜ್,ರಾಯಚೂರಿನ ಶರಣು ಇತರರಿದ್ದರು.

### ದಲಿತ ಶಕ್ತಿ ಬಲಗೊಳ್ಳಲಿ*

ಪರಿಶಿಷ್ಟ ಜಾತಿಯಲ್ಲಿ ಮೂರು ಗುಂಪುಗಳಾಗಿ ವಿಂಗಡಣೆ ಆಗಿರುವ ಎಲ್ಲ ಸಮುದಾಯಗಳುಸಹೋದರರ ರೀತಿ ಜೀವನ ನಡೆಸಬೇಕು ಎಂದು ಹೆಚ್.ಆಂಜನೇಯ ಹೇಳಿದರು. ಒಳಮೀಸಲಾತಿ ಜಾರಿ, ಒಡಹುಟ್ಟಿದವರು ಆಸ್ತಿ ಹಂಚಿಕೆ ಮಾಡಿಕೊಂಡಂತೆ ಅಷ್ಟೇ. ಕಷ್ಟ-ಸುಖಗಳ ಸಂದರ್ಭನಾವೆಲ್ಲರೂ ಒಗ್ಗೂಡಬೇಕು. ಯಾವುದೇ ಕಾರಣಕ್ಕೂ ದಲಿತ ಶಕ್ತಿಗೆ ಪೆಟ್ಟಾಗದ ರೀತಿಎಚ್ಚರಿಕೆ ವಹಿಸಬೇಕು. ಒಳಮೀಸಲಾತಿ ಜಾರಿ ದಲಿತ ಶಕ್ತಿಯನ್ನು ಇನ್ನಷ್ಟುಬಲಿಷ್ಠರನ್ನಾಗಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

### ಓದಿ ಉನ್ನತ ಸ್ಥಾನಕ್ಕೆ ಏರಿ

ಒಳಮೀಸಲಾತಿಯಲ್ಲಿ ಎ, ಬಿ, ಸಿ ಗುಂಪಿನಲ್ಲಿ ಅತ್ಯಂತ ಹಿಂದುಳಿದ ಗುಂಪಿನಲ್ಲಿಯೇ ಮಾದಿಗ ಸಮುದಾಯವನ್ನು ಸೇರಿಸಲಾಗಿದೆ. ಈ ವಿಷಯದಲ್ಲಿ ಯಾವುದೇ ಸಂಶಯ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಒಳಮೀಸಲಾತಿ ಜಾರಿಯ ಆಶಯ ನೀವುಗಳು ಅರಿತುಕೊಳ್ಳಬೇಕು. ಮುಖ್ಯವಾಗಿ ನಿಮ್ಮ ಮಕ್ಕಳು, ಸಮುದಾಯದವರನ್ನು ಶೈಕ್ಷಣಿಕವಾಗಿ ಉನ್ನತಕ್ಕೆಕೊಂಡೊಯ್ಯಬೇಕು. ಮೇಲ್ವರ್ಗದ ರೀತಿ ಪರಿಶಿಷ್ಟ ಜಾತಿಯವರು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಮುಖ್ಯವಾಗಿ ನಿಮ್ಮ ಸಮುದಾಯದ ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಹೊಣೆಗಾರಿಕೆ ನಿಮ್ಮಗಳ ಮೇಲಿದೆ. ನೀವುಗಳು ಉನ್ನತ ಸ್ಥಾನಕ್ಕೇರಿದರೆ ಮಾತ್ರಒಳಮೀಸಲಾತಿ ಆಶಯ, ನನ್ನ ಕಾರ್ಯಕ್ಕೆ ಫಲ ಸಿಗಲಿದೆ ಎಂದು ತಿಳಿಸಿದರು.

# ಲೋಕಿಕೆರೆ ನಾಗರಾಜ್‌ರವರ ಹುಟ್ಟು ಹಬ್ಬದ ಅಂಗವಾಗಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ

**ದಾವಣಗೆರೆ ;** ಶ್ರೀ ಹೃದಯವಂತ ಲೋಕಿಕೆರೆ ನಾಗರಾಜ್‌ರವರ ಹುಟ್ಟು ಹಬ್ಬದ ಅಂಗವಾಗಿ ಇಂದು ಬೆಳಗ್ಗೆ 7:00 ಗಂಟೆಗೆ ವಿದ್ಯಾನಗರ ಶ್ರೀ ಶಿವ ಪಾರ್ವತಿ ದೇವಸ್ಥಾನದಲ್ಲಿ ಹೃದಯವಂತ ಲೋಕಿಕೆರೆ ನಾಗರಾಜ್‌ರವರಿಗೆ ದೇವರು ಆಯಸ್ಸು ಕೀರ್ತಿ ಯಶಸ್ಸು ಸಮಾಜಸೇವೆ ಮಾಡಲು ಅವರಿಗೆ ಇನ್ನೂ ಹೆಚ್ಚಿನ ಶಕ್ತಿ ಮತ್ತು ಮುಂದಿನ ಅವರ ರಾಜಕೀಯ ಭವಿಷ್ಯ ಅಜರಾಮರವಾಗಿ ಬೆಳೆಯಲಿ ಎಂದು ದೇವರಿಗೆ ಅಭಿಷೇಕ ಮತ್ತು ವಿಶೇಷ ಪೂಜೆಗಳು ನೆರವೇರಿಸಿದರು,

ಗೋಶಾಲೆಯಲ್ಲಿ ಗೋಪೂಜೆ ಮಾಡಿ ಗೋವುಗಳಿಗೆ ದವಸಧಾನ್ಯ ಮೇವು ನೀಡಿ, ನಂತರ ವಿದ್ಯಾನಗರ ಮಹಾತ್ಮ ಗಾಂಧೀಜಿ




ವೃತದಲ್ಲಿ ಶ್ರೀ ಹೃದಯವಂತ ಲೋಕಿಕೆರೆ ನಾಗರಾಜರವರ ಸಮಾಜಮುಖಿ ಸೇವೆಗಳಾದ ಕ್ಷಯ ರೋಗಿಗಳ ಅಡಾಪ್ಟ್, ಕರೋನ ಮಹಾಮಾರಿ ಸಮಯದಲ್ಲಿ ಅನೇಕ ವರ್ಗದವರಿಗೆ ಕಿಟ್ಟು ನೀಡುವ ಮೂಲಕ ಹೃದಯವಂತ ಎಂದು ಖ್ಯಾತಿ ಪಡೆದು, ರೈತರ ಸಹಾಯವಾಣಿ ಕೇಂದ್ರ, ವ್ಯಾಕ್ಸಿಂಗ್ ಮತ್ತು

ಆಕ್ಸಿಜನ್ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವರಿಗೆ ನೀರು ಮತ್ತು ಆಹಾರದ ವ್ಯವಸ್ಥೆ ಗರ್ಭಿಣಿ ಸ್ತ್ರೀಯರು ಅಂಗವಿಕಲರು ಹಿರಿಯ ನಾಗರಿಕರಿಗೆ ತುರ್ತು ಚಿಕಿತ್ಸೆ ಪಡೆಯಲು ಉಚಿತ ಆಟೋ ಮತ್ತು ವ್ಯಾನ್‌ಗಳ ವ್ಯವಸ್ಥೆ ಇವೆಲ್ಲವುಗಳ ಆದರ್ಶ ಭಾಗವಾಗಿ ಇಂದು ಅವರ ಅಭಿಮಾನಿಗಳು ಸ್ವಯಂ ಪ್ರೇರಿತವಾಗಿ ರಕ್ತದಾನ ಮತ್ತು ರಕ್ತದಾನ ಶಿಬಿರ ಮಾಡುವ ಮೂಲಕ ಶುಭ ಕೋರಲಾಯಿತು, ಈ ಕಾರ್ಯಕ್ರಮವನ್ನು ಬಿಜೆಪಿ ಜಿಲ್ಲಾಧ್ಯಕ್ಷರಾದ ರಾಜಶೇಖರ್ ನಾಗಪ್ಪನವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಎನ್ ಹೆಚ್ ಹಾಲೇಶ್ ನಾಯಕ, ದಾಮ್ ಕೋಸ್ ಅಧ್ಯಕ್ಷರಾದ ಶಿವ್ಕುಮಾರ್ ಬಾತಿ, ರಾಜು ತೋಟಪ್ಪನವರ್, ಮಹಾನಗರ ಪಾಲಿಕೆ ಸದಸ್ಯರಾದ ಮಂಜ ನಾಯ್ಕ್, ಕುಂಬಾರ್ ನಾಗಣ್ಣ, ದುರ್ಗೇಶ್ ಎಚ್ ಬಿ, ಮಂಜುನಾಥ್ ವಾಟರ್, ನರೇಂದ್ರ ರಾಂಪುರ, ಬಾತಿ ರೇವಣಸಿದ್ದಪ್ಪ, ರಾಜು ಶಾಮನೂರ್, ಮಂಜುನಾಥ್ ಗುತ್ತೂರ್, ಜಯ ರುದ್ರಪ್ಪ, ಆನಂದ್ ಕೆಟಿಜೆನಗರ, ಮಂಜುನಾಥ್ ಉಪಸ್ಥಿತರಿದ್ದರು.

# ಬ್ಯಾಟರಿ ಚಾಲಿತ ವಾಹನಗಳಿಗೆ ರಹದಾರಿ ಪಡೆಯಲು ಸೂಚನೆ

**ಚಿಕ್ಕಮಗಳೂರು, ಆ.21:** ಬ್ಯಾಟರಿ ಚಾಲಿತ ವಾಹನಗಳಿಗೆ ರಹದಾರಿ ಪಡೆಯುವಂತೆ ಕರ್ನಾಟಕ ರಾಜ್ಯ ಸರ್ಕಾರದ ಸಚಿವಾಲಯ ಅಧಿಸೂಚನೆ ಹೊರಡಿಸಿದ್ದು, ಶುಲ್ಕ ರಹಿತವಾಗಿ ರಹದಾರಿ ಪಡೆಯಲು ಅವಕಾಶವಿರುವುದನ್ನು ಖಚಿತಪಡಿಸಿದೆ.

ಈ ಕುರಿತು ಪ್ರಕಟಣೆಯೊಂದನ್ನು ನೀಡಿರುವ ಪ್ರಾದೇಶಿಕ ಸಾರಿಗೆ ಇಲಾಖೆ, ಹೊಸದಾಗಿ ನೋಂದಣಿಯಾಗುವ ಮತ್ತು ಈಗಾಗಲೇ ನೋಂದಣಿಯಾಗಿರುವ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಇದುವರೆಗೆ ರಹದಾರಿ ಪಡೆಯದೆ ಸಂಚರಿಸುತ್ತಿರುವ ಎಲ್ಲಾ ಸಾರಿಗೆ ವಾಹನಗಳಿಗೆ ಸಂಬಂಧಿಸಿದ ರಹದಾರಿಯನ್ನು ಮಂಜೂರು ಮಾಡಲು ಹಾಗೂ ವಿತರಿಸಲು ಜುಲೈ 29 ರಂದೇ ತಿಳಿಸಲಾಗಿತ್ತು.

ಈ ಸಂಬಂಧದ ಸರ್ಕಾರದ ಅಧಿಸೂಚನಾ ಪತ್ರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಮೋಟಾರು ವಾಹನಗಳ ಕಾಯ್ದೆ 1988 ರ ಕಲಂ 66(3) (ಎನ್) ಮತ್ತು ಸದರಿ ಕಾಯ್ದೆಯ ಕಲಂ 96 ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಈ ಸೂಚನೆ ನೀಡಲಾಗಿದೆ ಎಂದು ಇಲಾಖೆ ಸ್ಪಷ್ಟಪಡಿಸಿದೆ.

# ಮೈಸೂರು ಕಾವಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು, ಆ.21:** ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತ ಸಂಯೋಜನೆಗೊಂಡಿರುವ ಮೈಸೂರು ಸಿದ್ಧಾರ್ಥನಗರದಲ್ಲಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿ(ಕಾವಾ)ನಲ್ಲಿ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎರಡು ಶೈಕ್ಷಣಿಕ ವರ್ಷದ ನಾಲ್ಕು ಸೆಮಿಸ್ಟರ್ ಸಿ.ಬಿ.ಸಿ.ಎಸ್ ಪದ್ಧತಿ) ದೃಶ್ಯ ಕಲೆಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ಬಿ.ವಿ.ಎ. ಸ್ನಾತಕ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಆಫ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಸ್ನಾತಕೋತ್ತರ ಪದವಿಯಲ್ಲಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಆಧ್ಯಯನದ ಸ್ನಾತಕೋತ್ತರ ಪದವಿ ಸೇರಿದೆ. ಪ್ರಥಮ ವರ್ಷದ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎಂ.ವಿ.ಎ) ಪ್ರವೇಶಾತಿಗಾಗಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಿಗೆ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸಲ್ಲಿಸಲು ಆಗಸ್ಟ್ 30 ಅಂತಿಮ ದಿನವಾಗಿದ್ದು, ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅರ್ಹತಾ ಪರೀಕ್ಷೆ ಹಾಗೂ ವೈಯಕ್ತಿಕ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗೆ ಕಾವಾ ಕಾರ್ಯಾಲಯದ ದೂರವಾಣಿ ಸಂಖ್ಯೆ(0821–2438931) ಯನ್ನು ಸಂಪರ್ಕಿಸಬಹುದು ಎಂದು ಕಾಲೇಜಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೈಹಿಕ–ಮಾನಸಿಕ ನ್ಯೂನತೆಗೆ ಉಚಿತ ಥೆರಪಿ

**ಚಿಕ್ಕಮಗಳೂರು, ಆ.21:** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸೊಸೈಟಿ ಫಾರ್ ಪೀಪಲ್ಸ್ ಇಂಟಿಗ್ರೇಟೆಡ್ ಡೆವಲಪ್ಮೆಂಟ್ ವತಿಯಿಂದ ಅನುಷ್ಠಾನಗೊಂಡಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಫಿಜಿಯೋಥೆರಪಿಸ್ಟ್, ಕ್ಲಿನಿಕಲ್ ಸೈಕಾಲಜಿಸ್ಟ್, ಆಡಿಯೋಲಜಿ ಮತ್ತು ಸ್ಪೀಚ್ ಥೆರಪಿಸ್ಟ್ ಲಭ್ಯವಿದ್ದು, ದೈಹಿಕ ನ್ಯೂನತೆ, ಬುದ್ಧಿಮಾಂದ್ಯತೆ, ಕಲಿಕಾ ನ್ಯೂನತೆ, ಆಟಿಸಂ, ಮಾತು ಸಂವಹನ ಸಂಬಂಧಿಸಿದ ನ್ಯೂನತೆಯಿಂದ ಬಳತ್ತಿರುವವರಿಗೆ ಉಚಿತ ಥೆರಪಿಯನ್ನು ನೀಡಲಾಗುತ್ತಿದೆ. ಅಗತ್ಯವಿರುವವರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗೆ ನಗರದ ತೊಗರಿಹಂಕಲ್ ಸರ್ಕಲ್ ಸಮೀಪ ಪ್ರಭು ಬೀದಿಯಲ್ಲಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ (9741898804)ವನ್ನು ಸಂಪರ್ಕಿಸಬಹುದು.

# ಪರಿಸರ ಸ್ನೇಹಿ ಗಣೇಶ ಉತ್ಸವ ಆಚರಣೆಗೆ ಜಿಲ್ಲಾಧಿಕಾರಿ ಕರೆ



**ಚಿತ್ರದುರ್ಗ :** ಕರ್ನಾಟಕ ರಾಜ್ಯ ಮಾಲಿನ್ಯ ಮಂಡಳಿ ಅಧಿಸೂಚನೆ ಹಾಗೂ ಸರ್ಕಾರದ ಆದೇಶದಂತೆ ಪಿ.ಓ.ಪಿ (ಪ್ಲಾಸ್ಟರ್ ಆಫ್ ಪ್ಯಾರಿಸ್) ಹಾಗೂ ಭಾರಲೋಹ ಮಿಶ್ರಿತ ರಾಸಾಯನಿಕ ಬಣ್ಣದಿಂದ ತಯಾರಿಸಿದ ಗಣೇಶ ವಿಗ್ರಹಗಳ ಉತ್ಪಾದನೆ ಹಾಗೂ ಮಾರಾಟ ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಸಾರ್ವಜನಿಕರು ಪಿ.ಓ.ಪಿ ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ, ಪೂಜೆಯ ನಂತರ ಕೆರೆ, ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ, ಜಲಮೂಲಗಳು ಕಲುಷಿತಗೊಳ್ಳುತ್ತವೆ. ನೀರಿನ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಪ್ರಾಣಿ, ಪಕ್ಷಿ, ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಸಾರ್ವಜನಿಕ ಆರೋಗ್ಯಕ್ಕೂ ದಕ್ಕೆ ಉಂಟಾಗುತ್ತದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರು ಪರಿಸರ ಸ್ನೇಹಿಯಾಗಿ ಗಣೇಶ ಉತ್ಸವ ಆಚರಿಸುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಕರೆ ನೀಡಿದ್ದಾರೆ.

ಗೌರಿಗಣೇಶ ಹಬ್ಬದ ಸಂದರ್ಭದಲ್ಲಿ ಬಣ್ಣ ರಹಿತ ಮಣ್ಣಿನ ನೈಸರ್ಗಿಕ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ, ನಂತರ ಗೌರಿ ಗಣೇಶ ಮೂರ್ತಿಗಳನ್ನು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ವತಿಯಿಂದ ನಿಗಧಿಪಡಿಸಿರುವ ಸ್ಥಳಗಳಲ್ಲಿ ವಿಸರ್ಜಿಸಬೇಕು. ವಿಸರ್ಜಿಸುವ ಮುನ್ನ ಹೂ, ಹಣ್ಣು, ಬಾಳೆ ಕಂಬ, ಮಾವಿನ ತೋರಣ ಸೇರಿದಂತೆ ಇತ್ಯಾದಿ ಹಸಿ ಕಸ ಹಾಗೂ ಅಲಂಕಾರಿಕ ವಸ್ತುಗಳು ಪ್ರತ್ಯೇಕಿಸಿ ಕಸ ಸಂಗ್ರಹಣ ವಾಹನಕ್ಕೆ ನೀಡಬೇಕು. ಸಾರ್ವಜನಿಕವಾಗಿ ನಡೆಸುವ ಗಣೇಶ ಮೂರ್ತಿಯ ಉತ್ಸವದ ಚಪ್ಪರಕ್ಕೆ ಪರಿಸರ ಸ್ನೇಹಿ ವಸ್ತುಗಳನ್ನೇ ಬಳಸಬೇಕು. ನಿಷೇಧಿತ ಪ್ಲಾಸ್ಟಿಕ್ ವಸ್ತುಗಳ ಬಳಕೆ ಮಾಡಬಾರದು.

# ಸಚಿವ ಡಿ. ಸುಧಾಕರ್ ಅವರಿಗೆ ಸಹಕಾರ ರತ್ನ ಪ್ರಶಸ್ತಿ ಪ್ರದಾನ



**ಚಿತ್ರದುರ್ಗ :** ಸಹಕಾರ ಕ್ಷೇತ್ರದಲ್ಲಿ ಹಲವು ದಶಕಗಳಿಂದ ಗಣನೀಯ ಸೇವೆ ಸಲ್ಲಿಸಿರುವ ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕಿನ ಅಧ್ಯಕ್ಷರಾದ ಡಿ.ಸುಧಾಕರ್ ಅವರ ಸಹಕಾರಿ ಸೇವೆ ಗುರುತಿಸಿ, ಸರ್ಕಾರ 2024ನೇ ಸಾಲಿನ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಿದೆ.

ಬೆಂಗಳೂರಿನಲ್ಲಿ ಈಚೆಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಟಿ. ದೇವೇಗೌಡ ಅವರು ಸಚಿವ ಡಿ.ಸುಧಾಕರ್ ಅವರಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಿ, ಸನ್ಮಾನಿಸಿದರು.

ಹಲವು ದಶಕಗಳಿಂದ ಸಹಕಾರ ಕ್ಷೇತ್ರದ ಮುಖಂಡರಾಗಿ ಸೇವೆ ಸಲ್ಲಿಸುವ ಮೂಲಕ ಹಲವಾರು ಸಂಘ ಸಂಸ್ಥೆಗಳ ಸ್ಥಾಪನೆ, ಬೆಳವಣಿಗೆ, ಅಭಿವೃದ್ಧಿಗೆ ಸಚಿವ ಡಿ.ಸುಧಾಕರ್ ಶ್ರಮಿಸಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಸಹಕಾರಿ ಕ್ಷೇತ್ರದಲ್ಲಿ ಗಣನೀಯ ಸೇವೆ: ಚಿತ್ರದುರ್ಗ ಜಿಲ್ಲೆಯ ಸಹಕಾರ ಕ್ಷೇತ್ರದಲ್ಲಿ ಪಕ್ಷಾತೀತವಾಗಿ, ಧರ್ಮಾತೀತವಾಗಿ ಹೆಸರಿಸಬಹುದಾದ ಕೆಲವೇ ವ್ಯಕ್ತಿಗಳಲ್ಲಿ ಡಿ.ಸುಧಾಕರ್ ರವರು ಒಬ್ಬರು. ಸಹಕಾರ ಕ್ಷೇತ್ರದಲ್ಲಿ ಸುಮಾರು 25 ವರ್ಷಗಳಿಂದ ಅವಿರತ ಸೇವೆ ಸಲ್ಲಿಸುತ್ತಿದ್ದಾರೆ. ತಮ್ಮ ಜೀವನದಲ್ಲಿ ಸಮಾನತೆ, ಸಹಬಾಳ್ವೆ, ಸಹಕಾರ, ಸಮರಸವನ್ನು ಅಳವಡಿಸಿಕೊಂಡು ಸಹಕಾರ ರಂಗದಲ್ಲಿ ದುಡಿಯುತ್ತಿದ್ದಾರೆ. ಇವರ ಸಹಕಾರ ಕ್ಷೇತ್ರದ ಸೇವೆ ಚಿತ್ರದುರ್ಗ ಜಿಲ್ಲೆಗೆ ಸೀಮಿತವಾಗದೆ ರಾಜ್ಯ ಮಟ್ಟದಲ್ಲೂ ವ್ಯಾಪಿಸಿರುತ್ತದೆ. ಇವರು 2003ನೇ ಸಾಲಿನಲ್ಲಿ ಚಳ್ಳಕೆರೆಯ ಹೊಯ್ಸಳ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಸ್ಥೆಯ ಸಂಸ್ಥಾಪಕರಾಗಿ ಸಂಘ ನೋಂದಾಯಿಸಿ ಈ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾಗಿ ಆಯ್ಕೆಯಾಗಿ ಇದುವರೆವಿಗೂ ಅಂದರೆ ಸುಮಾರು 22 ವರ್ಷಗಳಿಂದ ಈ ಸಂಸ್ಥೆಯ ಅಧ್ಯಕ್ಷರಾಗಿ ಕೆಲಸ ನಿರ್ವಹಿಸುತ್ತಿದ್ದು, ಇವರ ಆಡಳಿತ ವೈಖರಿ ಅನುಕರಣೀಯವಾಗಿರುತ್ತದೆ. ಈ ಸಂಘವು ರೂ.102.63 ಕೋಟಿಯ ದುಡಿಯುವ ಬಂಡವಾಳ, ರೂ. 111.72 ಕೋಟಿಗಳ ವ್ಯವಹಾರ, ರೂ.5.63 ಕೋಟಿಗಳ ನಿವ್ವಳ ಲಾಭಗಳಿಸಿ ಶೇ.25 ಡಿವಿಡೆಂಡ್‌ನ್ನು ಸದಸ್ಯರಿಗೆ ನೀಡಿ ಸದಸ್ಯರ ಹಾಗೂ ಗ್ರಾಹಕರ ನಂಬಿಕೆ, ವಿಶ್ವಾಸಕ್ಕೆ ಪಾತ್ರವಾಗಿದ್ದು, ಈ ಸಂಸ್ಥೆಯು ಇವರ ನಾಯಕತ್ವ ಹಾಗೂ ಮುಂದಾಳತ್ವದಲ್ಲಿ ಪ್ರಗತಿಯ ಪಥದತ್ತ ಸಾಗುತ್ತಿದೆ.

ಚಳ್ಳಕೆರೆ ತಾಲ್ಲೂಕು ನಗರಂಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಸುಮಾರು 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. 2004 ರಿಂದ 2024 ರವರೆಗೆ 5 ವರ್ಷಗಳ ಅವಧಿಗಳಲ್ಲಿ ನಡೆದ ಚಿತ್ರದುರ್ಗ ಡಿಸಿಸಿ ಬ್ಯಾಂಕಿನ ಚುನಾವಣೆಗಳಲ್ಲಿ ಬ್ಯಾಂಕಿನ ನಿರ್ದೇಶಕರಾಗಿ ಆಯ್ಕೆಯಾಗಿ ನಂತರ ಬ್ಯಾಂಕಿನ ಅಧ್ಯಕ್ಷರಾಗಿ 20 ವರ್ಷದಿಂದ ಸೇವೆ ಸಲ್ಲಿಸುತ್ತಿದ್ದಾರೆ. ಸೆಪ್ಟೆಂಬರ್ 2024ರಲ್ಲಿ 2024 ರಿಂದ 2029ರ 5 ವರ್ಷಗಳ ಅವಧಿಗೆ ನಡೆದ ಡಿ.ಸಿ.ಸಿ ಬ್ಯಾಂಕಿನ ಚುನಾವಣೆಯಲ್ಲಿ ನಿರ್ದೇಶಕರಾಗಿ ಮರು ಆಯ್ಕೆಯಾಗಿ ಮತ್ತೊಮ್ಮೆ 5 ವರ್ಷಗಳ ಅವಧಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಇವರು ಬ್ಯಾಂಕಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅವಧಿಯಲ್ಲಿ ಜಿಲ್ಲೆಯ ಸಣ್ಣ, ಅತಿಸಣ್ಣ ರೈತರಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ರೈತರಿಗೆ, ಅಲ್ಪಸಂಖ್ಯಾತ ಮತ್ತು ಮಹಿಳಾ ರೈತರಿಗೆ ಹೆಚ್ಚಿನ ಸಾಲ ಸೌಲಭ್ಯ ನೀಡಲಾಗಿದೆ ಮತ್ತು ಬ್ಯಾಂಕ್ ಲಾಭಗಳಿಸಲು ಸಾಧ್ಯವಾಗಿರುತ್ತದೆ. ಅಲ್ಲದೇ ಬ್ಯಾಂಕ್ ಇತಿಹಾಸದಲ್ಲಿ ಇವರ ಅಧ್ಯಕ್ಷತೆಯಲ್ಲಿ ಬ್ಯಾಂಕ್ 2018–2019ನೇ ಸಾಲಿನಿಂದ ಬ್ಯಾಂಕಿನ ಸದಸ್ಯರುಗಳಿಗೆ ಡಿವಿಡೆಂಡ್‌ನ್ನು ನೀಡಲಾಗುತ್ತಿದೆ. ಡಿ.ಸಿ.ಸಿ. ಬ್ಯಾಂಕಿನ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಮುಖ ಆಧ್ಯತೆಯನ್ನು ನೀಡಿ ಬ್ಯಾಂಕ್ ಪ್ರಗತಿ ಪಥದತ್ತ ಸಾಗಲು ಶ್ರಮಿಸಿರುತ್ತಾರೆ. 2013–14ರಲ್ಲಿ ಬ್ಯಾಂಕಿನ ದುಡಿಯುವ ಬಂಡವಾಳ ರೂ.205.29ಕೋಟಿ ಇದ್ದು, 2024–25ನೇ ಸಾಲಿನ ಅಂತ್ಯಕ್ಕೆ ರೂ. 1338.40ಕೋಟಿ ಇರುತ್ತದೆ. ಬ್ಯಾಂಕಿನಿಂದ 71207 ರೈತರಿಗೆ ರೂ.703.00 ಕೋಟಿ ಕೃಷಿ ಸಾಲ ನೀಡಲಾಗಿದೆ. 280.00 ಕೋಟಿ ಕೃಷಿಯೇತರ ಸಾಲ ನೀಡಲಾಗಿದೆ. ಬ್ಯಾಂಕ್ ಪ್ರತಿ ವರ್ಷ ಲಾಭ ಗಳಿಸುತ್ತಿದ್ದು, 2024–25ನೇ ಸಾಲಿಗೆ ರೂ.8.03 ಕೋಟಿ ಲಾಭ ಗಳಿಸಿದೆ.

ಸಿಡಿಸಿಸಿ ಬ್ಯಾಂಕಿನ ಪ್ರತಿನಿಧಿಯಾಗಿ ಕರ್ನಾಟಕ ರಾಜ್ಯ ಸಹಕಾರಿ ಅಫೆಕ್ಸ್ ಬ್ಯಾಂಕಿನ ನಿರ್ದೇಶಕರಾಗಿ ಸುಮಾರು 15 ವರ್ಷದಿಂದ ಸೇವೆ ಸಲ್ಲಿಸುತ್ತಿದ್ದು, ಜಿಲ್ಲೆಯ ಸಹಕಾರ ಸಂಘಗಳ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ. ಬ್ಯಾಂಕಿನ ಅಧ್ಯಕ್ಷರ ಕ್ರಿಯಾಶೀಲ ನಾಯಕತ್ವದ ಶ್ರಮದಿಂದ 2017–18ನೇ ಸಾಲಿನಲ್ಲಿ ಬ್ಯಾಂಕ್ ಉತ್ತಮವಾಗಿ ಕಾರ್ಯನಿರ್ವಹಣೆ ಮಾಡಿದ್ದಕ್ಕಾಗಿ ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿಗೆ ಕರ್ನಾಟಕ ರಾಜ್ಯ ಸಹಕಾರಿ ಅಫೆಕ್ಸ್ ಬ್ಯಾಂಕಿನಿಂದ ಲೆಕ್ಕ ಪರಿಶೋಧನೆಯಲ್ಲಿ 'ಎ' ವರ್ಗೀಕರಣ ಗಳಿಸಿರುವ ಬ್ಯಾಂಕ್‌ಗಳ ಪೈಕಿ ಚಿತ್ರದುರ್ಗ ಡಿಸಿಸಿ ಬ್ಯಾಂಕ್ ಉತ್ತಮ ಸಾಧನೆ ಮಾಡಿರುವುದನ್ನು ಪರಿಗಣಿಸಿ ರಾಜ್ಯಕ್ಕೆ ಪ್ರಥಮ ಸ್ಥಾನದ ಪ್ರಶಸ್ತಿ ನೀಡಿರುತ್ತಾರೆ. ಬ್ಯಾಂಕಿನ 65 ವರ್ಷಗಳ ಇತಿಹಾಸದಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಿಂದ ಜಿಲ್ಲಾ ಬ್ಯಾಂಕುಗಳಿಗೆ ನೀಡುವ ಪ್ರಶಸ್ತಿಯಲ್ಲಿ 2017–18ನೇ ಸಾಲಿಗೆ ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಪ್ರಥಮ ಪ್ರಶಸ್ತಿ ಗಳಿಸಿರುವುದು ಬ್ಯಾಂಕಿನ ಪ್ರಗತಿಯ ಸಂಕೇತವಾಗಿವೆ. 2019ರಲ್ಲಿ ಪುನಃ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಿಂದ ಜಿಲ್ಲಾ ಬ್ಯಾಂಕುಗಳಿಗೆ ನೀಡುವ ಪ್ರಶಸ್ತಿಯಲ್ಲಿ ದ್ವಿತೀಯ ಸ್ಥಾನ ಗಳಿಸಿದೆ. 2021–22ನೇ ಸಾಲಿನಲ್ಲಿ ಓಂಈಖಅಔಃ ಮುಂಬೈ ಇವರು ರಾಷ್ಟ್ರ ಮಟ್ಟದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಡಿ.ಸಿ.ಸಿ ಬ್ಯಾಂಕ್‌ಗಳಿಗೆ ನೀಡುವ ಪ್ರಶಸ್ತಿಯಲ್ಲಿ ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕಿಗೆ 2ನೇ ಅತ್ಯುತ್ತಮ ಪ್ರಶಸ್ತಿ ನೀಡಿರುತ್ತದೆ. ಈ ಪ್ರಶಸ್ತಿಗಳಿಂದ ಚಿತ್ರದುರ್ಗ ಜಿಲ್ಲೆಯ ಸಹಕಾರಿ ಕ್ಷೇತ್ರದ ಗೌರವ ಹೆಚ್ಚಿಸಿದಂತಾಗಿದೆ.

ಇತರೆ ಕ್ಷೇತ್ರಗಳಲ್ಲಿ ಮಾಡಿರುವ ಸೇವೆ: ಸುಮಾರು 20 ವರ್ಷಗಳ ಹಿಂದೆ ಚಳ್ಳಕೆರೆಯಲ್ಲಿ ಸ್ವಾಮಿ ವಿವೇಕಾನಂದ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಇದರ ಅಧ್ಯಕ್ಷರಾಗಿ ಈ ಸಂಸ್ಥೆಯ ಮೂಲಕ ಸಾವಿರಾರು ಬಡ ಮಕ್ಕಳ ಶಿಕ್ಷಣಕ್ಕೆ ಮತ್ತು ಅವರ ಮುಂದಿನ ಜೀವನಕ್ಕೆ ದಾರಿ ದೀಪವಾಗಿದ್ದಾರೆ.

ಚಳ್ಳಕೆರೆಯಲ್ಲಿ ಪಾರ್ಶ್ವನಾಥಜೈನ್ ಮಂದಿರದ ಟ್ರಸ್ಟ್‌ನ್ನು ಸ್ಥಾಪಿಸಿ ಎಲ್ಲಾ ವರ್ಗದ ಬಡ ಮಕ್ಕಳಿಗೆ ಶಿಕ್ಷಣ, ಹಿರಿಯರಿಗೆ, ಮಹಿಳೆಯರಿಗೆ ಆರ್ಥಿಕ ಧನ ಸಹಾಯ ನೀಡುತ್ತಿದ್ದಾರೆ, ಗೋಶಾಲೆ ಸ್ಥಾಪಿಸಿ ಹೊರರಾಜ್ಯದಿಂದ ಗೋವುಗಳಿಗೆ ಮೇವನ್ನು ತರಿಸಿ ಸಹಾಯ ಮಾಡಿರುತ್ತಾರೆ. ಈ ಎಲ್ಲಾ ಸಾಮಾಜಿಕ ಕಾರ್ಯಗಳಿಂದ ಪ್ರಶಂಸೆಗೆ ಪಾತ್ರರಾಗಿರುತ್ತಾರೆ.

2003ರಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿ ಚುನಾಯಿತರಾಗಿ ಜನರ ಸೇವೆಯನ್ನು ಮಾಡಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ನಂತರ 2008 ರಲ್ಲಿ ಜರುಗಿದ ಸಾರ್ವತ್ರಿಕ ಚುನಾವಣೆಯಲ್ಲಿ ಹಿರಿಯೂರು ವಿಧಾನ ಸಭಾಕ್ಷೇತ್ರದ ಶಾಸಕರಾಗಿ ಚುನಾಯಿತರಾಗಿ ನಂತರರಾಜ್ಯ ಸರ್ಕಾರದ ಸಮಾಜಕಲ್ಯಾಣ ಸಚಿವರು ಹಾಗೂ ಮುಜರಾಯಿ ಖಾತೆ ಸಚಿವರಾಗಿ ಸೇವೆ ಸಲ್ಲಿಸಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿರುತ್ತಾರೆ. ಪುನಃ 2013ರಲ್ಲಿ ಜರುಗಿದ ಸಾರ್ವತ್ರಿಕ ಚುನಾವಣೆಯಲ್ಲಿ ಇವರ ಜನಪರ ಕಾಳಜಿ ಮತ್ತು ಕ್ಷೇತ್ರದ ಅಭಿವೃದ್ಧಿಗಾಗಿ ಮಾಡಿರುವ ಕೆಲಸ ಕಾರ್ಯಗಳಿಂದ ಮತ್ತೊಮ್ಮೆ ಶಾಸಕರಾಗಿ ಆಯ್ಕೆಯಾಗಿರುತ್ತಾರೆ. ನಂತರ 2023ರಲ್ಲಿ ಜರುಗಿದ ಸಾರ್ವತ್ರಿಕ ಚುನಾವಣೆಯಲ್ಲಿ ಮತ್ತೊಮ್ಮೆ ಶಾಸಕರಾಗಿ ಆಯ್ಕೆಯಾಗಿ ಪ್ರಸ್ತುತ ರಾಜ್ಯ ಸರ್ಕಾರದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸಚಿವರಾಗಿ ಮತ್ತು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರು ಜನಪ್ರಿಯ ಶಾಸಕರಾಗಿ ಮತ್ತು ಶ್ರೇಷ್ಠ ಸಹಕಾರಿಯಾಗಿ, ರಾಜಕೀಯ ಕ್ಷೇತ್ರದಲ್ಲಿ ಮತ್ತು ಸಹಕಾರ ರಂಗದಲ್ಲಿ ಅಭಿವೃದ್ಧಿ ಪರ ಕೆಲಸವನ್ನು ಮಾಡುತ್ತಿದ್ದಾರೆ.

ಬಹುಮುಖ ವ್ಯಕ್ತಿತ್ವದ ಗರಿಷ್ಟ ಸೇವಾ ಮನೋಭಾವದ ಸಚಿವ ಡಿ.ಸುಧಾಕರ್ ಅವರು ಸಹಕಾರ ಕ್ಷೇತ್ರ, ಶಿಕ್ಷಣ ಕ್ಷೇತ್ರ, ಧಾರ್ಮಿಕ ಕ್ಷೇತ್ರ, ಸಾಮಾಜಿಕ ಕ್ಷೇತ್ರದಲ್ಲಿ, ರಾಜಕೀಯ ಕ್ಷೇತ್ರದಲ್ಲಿ ಪ್ರಶಂಸನೀಯ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ. ಜನ ಸಾಮಾನ್ಯರ ಏಳಿಗೆಗೆ ಶ್ರಮಿಸಿದವರಾಗಿದ್ದು, ಎಲ್ಲಾ ವರ್ಗಗಳ ಜನರ ಪ್ರೀತಿ ಗೌರವಗಳಿಗೆ ಪಾತ್ರರಾಗಿದ್ದಾರೆ. ಅವರು ಸೇವೆಗೆ ಆಯ್ಕೆ ಮಾಡಿಕೊಂಡಿರುವ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಯ ದೂರ ದೃಷ್ಟಿಯನ್ನು ಇಟ್ಟುಕೊಂಡು ತಮ್ಮದೇ ಆದ ಅಭಿವೃದ್ಧಿ ಕಲ್ಪನೆಗಳನ್ನು ಹೊಂದಿರುತ್ತಾರೆ. ಅವುಗಳನ್ನು ಸಾಕಾರಗೊಳಿಸಲು ದಾಪುಗಾಲಿಡುತ್ತಿದ್ದಾರೆ.

# ಡೀಮ್ಡ್ ಪರಿಷ್ಕೃತ ಪಟ್ಟಿ ತಯಾರಿಸದಿದ್ದರೆ ಪ್ರಬಲ ಹೋರಾಟ ವಿಜಯ್‌ಕುಮಾರ್




**ಚಿಕ್ಕಮಗಳೂರು:** ವಿಧಾನಸೌದದಲ್ಲಿ ಅರಣ್ಯ ಮತ್ತು ಕಂದಾಯ ಸಚಿವರ ಸಮ್ಮುಖದಲ್ಲಿ ನಡೆದ ಸಭೆಯ ನಿರ್ಣಯದಂತೆ ಡೀಮ್ಡ್ ಅರಣ್ಯ ಪಟ್ಟಿ ಪರಿಷ್ಕರಿಸಲು ವಿಳಂಬ ಮಾಡುತ್ತಿರುವ ಅಧಿಕಾರಿಗಳು ಮತು ಎಫ್‌ಎಸ್‌ಒಗಳ ವಿರುದ್ಧ ದೊಡ್ಡಮಟ್ಟದ ಹೋರಾಟ ರೂಪಿಸಲು ನಿರ್ಧರಿಸಿರುವುದಾಗಿ ಜಿಲ್ಲಾ ನಾಗರೀಕ ಮತ್ತು ರೈತ ಹೋರಾಟ ಸಮಿತಿ ತಿಳಿಸಿದೆ.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಮಿತಿಯ ಜಿಲ್ಲಾ ಪ್ರಧಾನ ಸಂಚಾಲಕ ಎಸ್.ವಿಜಯ್‌ಕುಮಾರ್, ಕಂದಾಯ ಮತ್ತು ಅರಣ್ಯ ಸಚಿವರು ಬೆಂಗಳೂರಿನ ಸಭೆಯಲ್ಲಿ ನಿರ್ಣಯಿಸಿದಂತೆ ಅಂಶಗಳನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಎಫ್‌ಎಸ್‌ಒ ಅನುಷ್ಠಾನ ಮಾಡುತ್ತಿಲ್ಲ. ಅಲ್ಲಿಂದ ಚೆಕ್‌ಲಿಸ್ಟ್ ಕಳುಹಿಸಿ 3 ತಿಂಗಳಾದರೂ ಅದನ್ನು ಅನುಷ್ಠಾನ ಮಾಡದೆ ಅವರ ಮೂಗಿನ ನೇರಕ್ಕೆ ಕೂತಲ್ಲೇ ವರದಿ ತಯಾರಿಸಲು ಚಿಂತನೆ ನಡೆಸಿದ್ದು ಇವರ ವಿರುದ್ಧವೇ ದೊಡ್ಡ ಮಟ್ಟದ ಪ್ರತಿಭಟನೆ ನಡೆಸಲು ಸಮಿತಿ ನಿರ್ಧರಿಸಿದೆ ಎಂದು ಹೇಳಿದರು.

ನವೆಂಬರ್ ಒಳಗೆ ಸುಪ್ರೀಂಕೋರ್ಟಿಗೆ ಡೀಮ್ಡ್ ಪರಿಷ್ಕೃತ ವರದಿಯನ್ನು ಸಲ್ಲಿಸಬೇಕಿದ್ದು, ಇನ್ನೊಂದು ತಿಂಗಳು ಬಾಕಿ ಇದೆ. ಹೀಗಾಗಿ ಡೀಮ್ಡ್ ಫಾರೆಸ್ಟ್ ವ್ಯಾಪ್ತಿಯಲ್ಲಿ ಬರುವ ರೈತರ, ಸಾಗುವಳಿದಾರರ, 94ಸಿ ಅರ್ಜಿದಾರರ, ಗ್ರಾಮ, ಸ್ಮಶಾನ, ಶಾಲೆ, ಅಂಗನವಾಡಿಯಂತಹ ಸರಕಾರಿ ಅವಶ್ಯಕತೆಗಳ ಜತೆಗೆ ನಿವೇಶನ ರಹಿತರಿಗೆ ನಿವೇಶನ ನೀಡಲು ಬೇಕಾಗುವಷ್ಟು ಭೂಮಿಯನ್ನು ಗುರುತಿಸಿ ಅದನ್ನು ಡೀಮ್ಡ್ ಪಾರೆಸ್ಟ್‌ನಿಂದ ಕೈಬಿಟ್ಟು ಹೊಸ ಪಟ್ಟಿ ಸಲ್ಲಿಸಲು ಇನ್ನಾದರೂ ಜಿಲ್ಲಾಧಿಕಾರಿಗಳು ಕ್ರಮವಹಿಸಬೇಕು ಎಂದರು.

ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಕೂಡಲೇ ಗ್ರಾಮಲೆಕ್ಕಿಗರು, ರಾಜಸ್ವನಿರೀಕ್ಷಕರು ಮತ್ತಿತರೆ ಸಿಬ್ಬಂದಿ ನೇಮಿಸಿ ನಿಖರವಾದ ಕಂದಾಯ ಬಳಕೆಯ ಭೂಮಿಯನ್ನು ಗುರುತಿಸಬೇಕು. ಈ ಸಂಬಂಧ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಸರಕಾರ ನಿಗತ ಮಾಹಿತಿಯುಳ್ಳ ಪಟ್ಟಿಯನ್ನು ನೀಡಿದೆ. ಈ ಪಟ್ಟಿಯಂತೆ ಅರಣ್ಯ ಎಫ್‌ಎಸ್‌ಒ ಅಧಿಕಾರಿಗಳು ಸಂಪೂರ್ಣ ಮಾಹಿತಿ ಪಡೆದು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸುತ್ತೇವೆ ಎಂದರು. ದರಖಾಸ್ತು ಜಮೀನು, ನಮೂನೆ 50–53 ರ ಜಮೀನಿಗೆ ಪೋಡಿ ಸಮಸ್ಯೆ ಕಾಡುತ್ತಿದ್ದು ಶೀಘ್ರದಲ್ಲಿ ಪೋಡಿ ಅಂತಿಮಗೊಳಿಸಬೇಕು. ನಗರ ಗಡಿಯಿಂದ 5 ಕಿಮೀ ವ್ಯಾಪ್ತಿಯೊಳಗಿನ ಭೂಮಂಜೂರಾತಿಗಳನ್ನು ಕಾರಣ ಕೇಳಿ ನೋಟೀಸ್ ನೀಡುತ್ತಿರುವ ಕ್ರಮವನ್ನು ಸಮಿತಿ ಖಂಡಿಸುತ್ತದೆ. ಮಲೆನಾಡಿನ ಭೂಮಿಯ ಏರಿಳಿತಕ್ಕೆ ತಕ್ಕಂತೆ ನೇರಮಾರ್ಗ ಅಂತರವನ್ನು ಪರಿಗಣಿಸಬೇಕು. ಯಾವುದೇ ಕಾರಣಕ್ಕೂ ಏರಿಯಲ್ ಅಂತರ ಪರಿಗಣಿಸಬಾರದು. ಹಲವು ವರ್ಷದಿಂದ ಅನುಭವದಲ್ಲಿರುವ ರೈತರಿಗೆ ನೀಡಲಾಗಿರುವ ಮಂಜೂರಾತಿಯನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಬೇಕು ಎಂದು ಆಗ್ರಹಿಸಿದರು. ನಗರದ ಆಜುಬಾಜಿನ ಸಿಡಿಎ ವ್ಯಾಪ್ತಿಯ ಹಲವು ಪ್ರದೇಶಗಳನ್ನು ಯಾವದೇ ಅರಣ್ಯ ವ್ಯಾಪ್ತಿಯ ಅಧಿಕೃತ ದಾಖಲೆ ಇಲ್ಲದೆ ಇದ್ದರೂ ಸಿಡಿಎ ನಕ್ಷೆಯಲ್ಲಿ ಮೀಸಲು ಅರಣ್ಯ ಎಂದು ಸ್ವಯಂ ಘೋಷಣೆ ಮಾಡಿಕೊಂಡು ನಗರದ ಅಭಿವೃದ್ಧಿಗೆ ಮಾರಕವಾಗುವಂತಹ ನಕ್ಷೆ ತಯಾರಿಸಿರುವ ಅಧಿಕಾರಿಗಳ ಮೇಲೆ ಸಂಬಂಧಿಸಿದ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಬೆಳೆಗಾರ ಮುಖಂಡರಾದ ರಘು, ಪೂರ್ಣೇಶ್, ಕಳಸಪ್ಪ, ರವಿಕುಮಾರ್ ಇದ್ದರು.

## ಗಣಪತಿ ಪೆಂಡಾಲ್‌ನಲ್ಲಿ ಅಗ್ನಿ ನಿರೋಧಕ ಜಿಂಕ್‌ಶೀಟ್ ಬಳಸಲು ಸಲಹೆ

**ಚಿಕ್ಕಮಗಳೂರು, ಆ. 21:** ಜಿಲ್ಲೆಯಲ್ಲಿ ಗಣಪತಿ ಹಬ್ಬದ ಹಿನ್ನೆಲೆಯಲ್ಲಿ ಪೆಂಡಾಲ್ ಚಪ್ಪರವನ್ನು ನಿರ್ಮಿಸುವಾಗ ಅಗ್ನಿ ನಿರೋಧಕ ವಸ್ತುಗಳಾದ ಜಿಂಕ್‌ಶೀಟ್ ಇತ್ಯಾದಿಗಳನ್ನು ಬಳಸಬೇಕು. ಹಾಗೆಯೇ ಅಗ್ನಿ ನಿರೋಧಕ ವಸ್ತುಗಳನ್ನು ಉಪಯೋಗಿಸಿ ಪೆಂಡಾಲ್‌ನ ಒಳ ಅಲಂಕಾರ ಮಾಡಬೇಕು ಎಂದು ಅಗ್ನಿಶಾಮಕ ಇಲಾಖೆ ಸೂಚಿಸಿದೆ.

ಈ ಕುರಿತು ಕೆಲವು ಸಲಹೆಗಳನ್ನು ಇಲಾಖೆ ನೀಡಿದ್ದು, ಪೆಂಡಾಲ್ ನಿರ್ಮಿಸುವಾಗ ಅನುಸರಿಸಲು ಕರ್ನಾಟಕ ರಾಜ್ಯ ಅಗ್ನಿಶಾಮಕ 3 ತುರ್ತು ಸೇವೆಗಳ ಇಲಾಖೆಯಿಂದ ನಿರ್ದಿಷ್ಟವಾಗಿ ಕೆಲವು ನಿರ್ದೇಶನಗಳನ್ನು ನೀಡಲಾಗಿದೆ. ಅದರಂತೆ ಜಿಲ್ಲಾ ವ್ಯಾಪ್ತಿಯಲ್ಲಿ ಯಾವುದೇ ಪ್ರದೇಶದಲ್ಲಿ ಗಣಪತಿ ಪೆಂಡಾಲ್‌ಗಳನ್ನು ನಿರ್ಮಿಸುವಾಗ ಈ ಸಲಹೆಗಳನ್ನು ಕಡ್ಡಾಯವಾಗಿ ಅನುಸರಿಸಲು ತಿಳಿಸಲಾಗಿದೆ.

ಅಗ್ನಿನಂದಕ ಇರಬೇಕು:

ಪ್ರತಿ ಪೆಂಡಾಲಿನ ಸಮೀಪ 9 ಲೀ. ಸಾಮರ್ಥ್ಯದ 2 ವಾಟರ್ ಸಿಒ2 ಅಗ್ನಿನಂದಕ ಮತ್ತು ಡಿಸಿಪಿ ಅಗ್ನಿನಂದಕ ಮತ್ತು ಮರಳು ತುಂಬಿದ ತಲಾ ನಾಲ್ಕು ಬಕೆಟ್‌ಗಳನ್ನು ಇಟ್ಟಿರಬೇಕು ಮತ್ತು ಪೆಂಡಾಲ್ ಹತ್ತಿರ 400 ಲೀ. ಸಾಮರ್ಥ್ಯದ ಡ್ರಮ್‌ನಲ್ಲಿ ನೀರು ತುಂಬಿಟ್ಟಿರಬೇಕು ಎಂದು ಸೂಚಿಸಲಾಗಿದೆ.

ಪೆಂಡಾಲ್ ಒಳಭಾಗದಲ್ಲಿ ಮತ್ತು ಹತ್ತಿರದಲ್ಲಿ ಸಾರ್ವಜನಿಕರು ಧೂಮಪಾನ ಮಾಡದಂತೆ ಎಚ್ಚರ ವಹಿಸಬೇಕು ಮತ್ತು ಧೂಮಪಾನ ನಿಷೇಧಿಸಿದೆ ಎಂಬ ನಾಮಫಲಕವನ್ನು ಸೂಕ್ತ ಸ್ಥಳಗಳಲ್ಲಿ ನೇತು ಹಾಕಿರಬೇಕು. ಪೆಂಡಾಲ್‌ನ ಸುತ್ತ 12 ಅಡಿ ಸುತ್ತಳತೆಯ ಖಾಲಿ ಜಾಗವಿರುವಂತೆ ಪೆಂಡಾಲ್ ನಿರ್ಮಿಸಿರಬೇಕು.

ಪೆಂಡಾಲ್‌ನಲ್ಲಿ ಸ್ಫೋಟಕ ವಸ್ತುಗಳು, ಸಿಡಿ ಮದ್ದು ಇತ್ಯಾದಿ ವಸ್ತುಗಳನ್ನು ಶೇಖರಿಸಬಾರದು ಮತ್ತು ಪೆಂಡಾಲ್‌ನ ಹತ್ತಿರ ಪಟಾಕಿ ಸಿಡಿಸಬಾರದು. ವಿದ್ಯುತ್ ಸಂಪರ್ಕವನ್ನು ನುರಿತ ವಿದ್ಯುತ್ ಕೆಲಸಗಾರರಿಂದ ಮಾಡಿಸಬೇಕು ಮತ್ತು ತೆರೆದ ವೈರ್‌ಗಳನ್ನು ಜೋತು ಹಾಕಬಾರದೆಂದು ಸೂಚಿಸಲಾಗಿದೆ.

# ಸ್ವಚ್ಛತೆ ಕುರಿತು ಅರಿವು ಮೂಡಿಸುವುದು ಸ್ವಚ್ಛ ಭಾರತ್ ಮಿಷನ್ ಉದ್ದೇಶ : ಹೆಚ್.ಡಿ ತಮ್ಮಯ್ಯ




**ಚಿಕ್ಕಮಗಳೂರು:** ನಗರದ ನಾಗರೀಕರಲ್ಲಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವುದು ಸ್ವಚ್ಛ ಭಾರತ್ ಮಿಷನ್ ಉದ್ದೇಶವಾಗಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರು ಇಂದು ನಗರಸಭೆ ಆವರಣದಲ್ಲಿ ನಗರಸಭೆ, ಸ್ವಚ್ಛ ಭಾರತ್ ಮಿಷನ್‌ನ 2.0 ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ಸ್ವಚ್ಛತೆ ಬಗ್ಗೆ ಗೋಡೆಬರಹದ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸಲು ಕೇಂದ್ರ ಮತ್ತು ರಾಜ್ಯಸರ್ಕಾರ ಹಲವು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿದೆ ಎಂದು ಶ್ಲಾಘಿಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ನಗರಸಭೆಯಿಂದ ಕೈಗೊಂಡ ಫುಟ್‌ಪಾತ್ ಮೇಲಿನ ವಸ್ತುಗಳ ತೆರವು ಮತ್ತು ಸಂತೆಯಲ್ಲಿ ಸ್ವಚ್ಛತೆಯನ್ನು ಮೂಡಿಸಿದ ಪರಿಣಾಮ ವರ್ತಕರು ಸಹಕರಿಸಿದ್ದಾರೆ. ನಗರದ ಹೊರವಲಯದ ವಾರ್ಡ್‌ಗಳಲ್ಲಿ ಸ್ವಚ್ಛತೆಯಲ್ಲಿ ಹಿಂದಿ ಬಿದ್ದಿದ್ದು, ಈ ಬಗ್ಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಸ ಸಂಗ್ರಹಕ್ಕೆ ಗುರ್ತಿಸಲಾದ ಸ್ಥಳಗಳಲ್ಲಿ ಸಾರ್ವಜನಿಕರು ಕಸವನ್ನು ಹಾಕದೆ ಎಲ್ಲೆಂದರಲ್ಲಿ ಹಾಕಲಾಗುತ್ತಿದೆ. ಪ್ರತಿದಿನ ಗಂಟೆಗಾಡಿ ಕಸ ಸಂಗ್ರಹ ಮಾಡುತ್ತಿಲ್ಲ ಎಂಬ ದೂರು ನಾಗರೀಕರಿಂದ ಬರುತ್ತಿದ್ದು, ಈ ಬಗ್ಗೆ ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ಗಮನಹರಿಸಬೇಕೆಂದು ಹೇಳಿದರು.

ಬೀದಿನಾಯಿಗಳ ಉಪಟಳ ಮತ್ತು ಬಿಡಾಡಿ ದನಗಳಿಂದ ಆಗುತ್ತಿರುವ ತೊಂದರೆಯ ಬಗ್ಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಸಿ ಈಗಾಗಲೇ ಅಗತ್ಯ ಮುಂಜಾಗ್ರತಾ ಕ್ರಮ ವಹಿಸಲಾಗಿದೆ. ಜೊತೆಗೆ ವಿದ್ಯಾರ್ಥಿಗಳಲ್ಲಿ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದರು.

ಸಧ್ಯದಲ್ಲೇ ಪರಿಸರ ಉಳಿಸಲು ನಗರದ ಪ್ರತೀ ವಾರ್ಡ್‌ನಲ್ಲಿ ಜಾಥಾ ನಡೆಸುವ ಮೂಲಕ ಅರಿವು ಮೂಡಿಸಲು ದಿನಾಂಕ ನಿಗದಿಮಾಡುವಂತೆ ಪೌರಾಯುಕ್ತರಿಗೆ ಸೂಚನೆ ನೀಡಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ಕಳೆದ ನಾಲ್ಕು ವಾರಗಳಿಂದ ಸ್ವಚ್ಛತೆಗೆ ಆದ್ಯತೆ ನೀಡುವಂತೆ ವರ್ತಕರು ಮತ್ತು ನಾಗರೀಕರಲ್ಲಿ ನಗರಸಭೆಯಿಂದ ಅರಿವು ಮೂಡಿಸಲಾಗಿದ್ದು, ಇದರಿಂದ ಸುಂದರ ನಗರವನ್ನಾಗಿಸಲು ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಗೋಡೆ ಬರಹ ಮತ್ತು ಬೀದಿ ನಾಟಕಗಳ ಮೂಲಕ ಸಾರ್ವಜನಿಕರಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸಲು 20 ನಾಟಕ ತಂಡಗಳನ್ನು ಆಯ್ಕೆಮಾಡಲಾಗಿದೆ ಎಂದರು.

2600 ಅಡಿಗಳಷ್ಟು ಗೋಡೆಬರಹದ ಮೂಲಕ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ನಗರಸಭೆ ಸದಸ್ಯರು ಸ್ವಚ್ಛತೆಗೆ ಆದ್ಯತೆ ನೀಡಿ ಜಾಗೃತಿ ಮೂಡಿಸಲು ತಿರುಪತಿಗೆ ತೆರಳಲು ಸಧ್ಯದಲ್ಲೇ ದಿನಾಂಕ ನಿಗದಿಮಾಡಲಾಗುವುದೆಂದರು.

ಈ ಸಂದರ್ಭದಲ್ಲಿ ನಗರಸಭೆ ಉಪಾಧ್ಯಕ್ಷೆ ಅನುಮಧುಕರ್, ಸದಸ್ಯರಾದ ಎ.ಸಿ. ಕುಮಾರ್‌ಗೌಡ, ಪರಮೇಶ್ ರಾಜ್ ಅರಸ್, ರೂಪಾ ಕುಮಾರ್, ಗೋಪಿ, ಗುರುಮಲ್ಲಪ್ಪ,

# ರಾಜೀವ್‌ಗಾಂಧಿ–ಡಿ.ದೇವರಾಜ ಅರಸ್ ಜಾರಿಗೆ ತಂದ ಯೋಜನೆಗಳು ಶಾಶ್ವತ




**ಚಿಕ್ಕಮಗಳೂರು:** ದೇಶದ ಯುವಜನರ ಭವಿಷ್ಯ, ಕಲ್ಪನೆ ಹಾಗೂ ಭರವಸೆಗಳನ್ನು ಮನಗಂಡು ರಾಜೀವ್ ಗಾಂಧಿಯವರು ಜನಪರವಾದ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಅವುಗಳು ಇಂದು ಶಾಶ್ವತವಾಗಿ ನೆಲೆಯೂರಿವೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಭದ್ರಾ ಕಾಡಾ ನಿಗಮದ ಅಧ್ಯಕ್ಷರೂ ಆದ ಡಾ.ಕೆ.ಪಿ.ಅಂಶುಮಂತ್ ತಿಳಿಸಿದರು.

ಅವರು ಇಂದು ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಮಾಜಿ ಪ್ರಧಾನಮಂತ್ರಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಜನ್ಮದಿನಾಚರಣೆಯಲ್ಲಿ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಸಮಾನತೆಯ ಹರಿಕಾರ ಸಮಾಜವನ್ನು ಸುಧಾರಿಸಿದ ಮಹಾನ್ ನಾಯಕರಾದ ಡಿ.ದೇವರಾಜ ಅರಸ್ ಅವರು ಹಿಂದುಳಿದ ವರ್ಗ ಮತ್ತು ದೀನ ದಲಿತರ ಉದ್ದಾರಕ್ಕಾಗಿ ಶ್ರಮಿಸಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಪ್ರತಿಯೊಬ್ಬರೂ ಸಾಗಬೇಕು. ಅವರು ಹಾಕಿಕೊಟ್ಟಂತಹ ದಾರಿಯಲ್ಲಿ ಮುನ್ನಡೆಯುವಂತೆ ಸಲಹೆ ನೀಡಿದರು.

ರಾಜೀವ್ ಗಾಂಧಿಯವರು ಪ್ರಧಾನಮಂತ್ರಿ ಆದ ಸಂದರ್ಭದಲ್ಲಿ ಜನಪರವಾದ ಉತ್ತಮವಾದ ಅಭಿವೃದ್ಧಿ ಕಾರ್ಯಗಳನ್ನು ಜಾರಿಗೊಳಿದ್ದರು. ಹಾಗೆಯೇ ಡಿ.ದೇವರಾಜ ಅರಸ್ ಅವರು ಹಿಂದುಳಿದ ವರ್ಗದವರಿಗೆ ಹಾಗೂ ದೀನ ದಲಿತರಿಗೆ ಪ್ರಜಾಪ್ರಭುತ್ವದಲ್ಲಿ ಸಿಗಬೇಕಾದ ಸೌಲಭ್ಯಗಳನ್ನು ಕೊಟ್ಟಿರುವುದು ಅಚ್ಚಳಿಯದೆ ಉಳಿದಿದೆ ಎಂದರು.

ಎಐಸಿಸಿ ಕಾರ್ಯದರ್ಶಿ ಬಿ.ಎಂ.ಸಂದೀಪ್ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜನರಿಗೆ ಸವಲತ್ತು ಯೋಜನೆಗಳು ಸಕಾಲದಲ್ಲಿ ಸಿಗಲು ಮತ್ತು ಸ್ಥಳಿಯ ಸಂಸ್ಥೆಗಳಿಗೆ ಹೆಚ್ಚಿನ ಜವಾಬ್ದಾರಿಯನ್ನು ನೀಡಲು ರಾಜೀವ್ ಗಾಂಧಿಯವರ ಕೊಡುಗೆ ಅಪಾರವಾಗಿದೆ. ಉಳುವವನೇ ಭೂ ಒಡೆಯ ಯೋಜನೆಯನ್ನು ಜಾರಿಗೆ ತರುವ ಮೂಲಕ ಚಿಕ್ಕ ಸಮಾಜವನ್ನು ಗುರ್ತಿಸಿ ಪ್ರಜಾಪ್ರಭುತ್ವದಲ್ಲಿ ಆದ್ಯತೆಯನ್ನು ಕೊಡಿಸಿದವರು ದೇವರಾಜ ಅರಸ್ ಎಂದು ಬಣ್ಣಿಸಿದರು.ರಾಜೀವ್ ಗಾಂಧಿಯವರ ಪಂಚಾಯತ್ ರಾಜ್ ವ್ಯವಸ್ಥೆ ಮತ್ತು ಮೀಸಲಾತಿಗಳಿಂದ ಬಹುತೇಕರಿಗೆ ಅಧಿಕಾರ ದೊರೆಯುವಂತಾಗಿದೆ ತಾಂತ್ರಿಕ ಜಗತ್ತಿನಲ್ಲಿ ಪ್ರಪಂಚಕ್ಕೆ ಸವಾಲ್ ಎಂಬಂತೆ ನಮ್ಮ ದೇಶವನ್ನು ರೂಪಿಸಿದ ರಾಜೀವ್ ಗಾಂಧಿ ಅವರನ್ನು ಈ ದೇಶದ ಜನ ಮರೆಯಬಾರದು. ಹಾಗೇಯೇ ದೇವರಾಜ ಅರಸು ಕೂಡ ಜನಪರವಾದ ದಿಟ್ಟ ಆಡಳಿತವನ್ನು ನೀಡುವ ಜೊತೆಗೆ ರಾಜ್ಯವನ್ನು ಪ್ರಗತಿಯತ್ತ ಕೊಂಡೊಯ್ದ ಮಹಾನ್ ನಾಯಕ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಂ.ಸಿ.ಶಿವಾನಂದಸ್ವಾಮಿ,

# ಪದಚ್ಯುತಿ ಮಸೂದೆ ಮಂಡನೆ

**ನವದೆಹಲಿ :** ಪ್ರತಿಪಕ್ಷಗಳ ಪ್ರಬಲ ವಿರೋಧದ ನಡುವೆ ಲೋಕಸಭೆಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮೂರು ವಿವಾದಾತ್ಮಕ ಮಸೂದೆಗಳನ್ನು ಮಂಡಿಸಿದರು. ಗಂಭೀರ ಕ್ರಿಮಿನಲ್ ಆರೋಪಗಳ ಮೇಲೆ 30 ದಿನಗಳ ಕಾಲ ಜೈಲುವಾಸ ಅನುಭವಿಸಿದ್ದರೆ ಪ್ರಧಾನಮಂತ್ರಿ, ಕೇಂದ್ರ ಸಚಿವ, ಮುಖ್ಯಮಂತ್ರಿಗಳು ಅಥವಾ ಕೇಂದ್ರ ಸಹಾಯಕ ಸಚಿವರನ್ನು ಪದಚ್ಯುತಗೊಳಿಸುವ ಮಸೂದೆಯನ್ನು ಮಂಡಿಸಲಾಗಿದೆ.

ಕೇಂದ್ರಾಡಳಿತ ಪ್ರದೇಶಗಳ (ತಿದ್ದುಪಡಿ)ಮಸೂದೆ, ಸಂವಿಧಾನದ (130ನೇ ತಿದ್ದುಪಡಿ) ಮಸೂದೆ ಮತ್ತು ಜಮ್ಮು–ಕಾಶ್ಮೀರದ ಪುನರ್ ಸಂಘಟಿತ (ತಿದ್ದುಪಡಿ)ಮಸೂದೆಗಳನ್ನು ತೀವ್ರಗದ್ದಲ–ಕೋಲಾಹಲದ ನಡುವೆ ಗೃಹ ಸಚಿವರು ಮಂಡಿಸಿದರು.

ಈ ಮಸೂದೆಗಳಿಗೆ ಪ್ರತಿಪಕ್ಷಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿ ಇತರ ರಾಜ್ಯಗಳಲ್ಲಿ ಬಿಜೆಪಿಯೇತರ ಸರ್ಕಾರಗಳನ್ನು ಅಸ್ಥಿರಗೊಳಿಸಲು ಈ ಮಸೂದೆ ಮಂಡಿಸಲಾಗುತ್ತಿದೆ. ಈ ಮಸೂದೆಗಳನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿ ಸರ್ಕಾರದ ವಿರುದ್ಧ ಮುಗಿಬಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**